ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ


ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 156 ಸಂಚಿಕೆ- 156 | PAGE-8 ಪುಟ-8 | ಗುರುವಾರ 31.07.2025 | RS.2/- ಬೆಲೆ 2/-




## ಸಾಲ ಬಾಧೆ: ರೈತ ಆತ್ಮಹತ್ಯೆ



ಮಲ್ಲಮ್ಮನುಡಿ ವಾರ್ತೆ ಬೀದರ. ಜು. 30 : ಸಾಲದ ಬಾಧೆಯಿಂದ ರೈತ ಬಾವಿಗೆ ಬಿದ್ದು ಚಿಟಗುಪ್ಪಾ ತಾಲ್ಲೂಕಿನ ಬೇಮಳಖೇಡ ಗ್ರಾಮದಲ್ಲಿ ಮಂಗಳವಾರ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಗ್ರಾಮದ ಸುನೀಲಕುಮಾರ ಫಾಳೆಪ್ಪ ಪಟ್ಟವಾದಿ (48) ತನ್ನ ಹೊಲದ ಬಾವಿಯಲ್ಲಿ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದು, ಮೃತರಿಗೆ ಪಿಕೆಪಿಎಸ್ ಬ್ಯಾಂಕ್ ಹಾಗೂ ಖಾಸಗಿಯಲ್ಲಿ ಸುಮಾರು 15 ಲಕ್ಷ ಸಾಲ ಹೊಂದಿದ್ದರು. ಈ ಕುರಿತು ಬೇಮಳಖೇಡಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮತಗಳ್ಳತನ ವಿರುದ್ಧ ರಾಹುಲ್ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜು.30:ಮಹಾರಾಷ್ಟ್ರದಂತೆ ಕರ್ನಾಟಕದ ಒಂದು ಲೋಕಸಭಾ ಕ್ಷೇತ್ರದಲ್ಲೂ ಚುನಾವಣಾ ಆಯೋಗವು ಮತ ವಂಚನೆಗೆ ಅವಕಾಶ ನೀಡಿದೆ ಎಂದು ಆರೋಪಿಸಿದ್ದ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಆಗಸ್ಟ್ 4 ರಂದು ಬೆಂಗಳೂರಿನಲ್ಲಿ ಚುನಾವಣಾ ಆಯೋಗ ವಿರುದ್ಧ ಹೋರಾಟ ನಡೆಸಲು ನಿರ್ಧರಿಸಿದ್ದಾರೆ.

ಚುನಾವಣಾ ಆಯೋಗದ ವಿರುದ್ಧ ಲೋಕಸಭೆ ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ನೇತೃತ್ವದಲ್ಲಿ ಕಾಂಗ್ರೆಸ್ ಆಗಸ್ಟ್ 4 ರಂದು ಬೆಂಗಳೂರಿನಲ್ಲಿ ಪಾದಯಾತ್ರೆ ನಡೆಸಲಿದೆ.ಚುನಾವಣಾ ಅಕ್ರಮ ನಡೆದಿದೆ ಎಂದು ಆರೋಪಿಸಲಾದ ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದ ಮಹದೇವಪುರ ವಿಧಾನಸಭಾ ಕ್ಷೇತ್ರದಿಂದ ನಗರದಲ್ಲಿರುವ ರಾಜ್ಯ ಮುಖ್ಯ ಚುನಾವಣಾಧಿಕಾರಿ ಕಚೇರಿಯವರೆಗೆ ಈ ಪಾದಯಾತ್ರೆ ನಡೆಯಲಿದೆ.ರಾಹುಲ್ ಗಾಂಧಿ ಅವರೊಂದಿಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ,ಮುಖ್ಯಮಂತ್ರಿ ಸಿದ್ದರಾಮಯ್ಯ,ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸೇರಿದಂತೆ ರಾಜ್ಯದ ಬಹುತೇಕ ಎಲ್ಲಾ ಹಿರಿಯ ನಾಯಕರು, ಸಚಿವರು ಮತ್ತು ಶಾಸಕರು ಭಾಗವಹಿಸಲಿದ್ದಾರೆ.

ಕರ್ನಾಟಕದ ಒಂದು ಸ್ಥಾನದಲ್ಲಿ ಚುನಾವಣಾ ಆಯೋಗವು ವಂಚನೆಗೆ ಅವಕಾಶ ನೀಡಿದೆ ಎಂಬುದಕ್ಕೆ ನಮ್ಮ ಬಳಿ "ಶೇಕಡಾ 100 ರಷ್ಟು ದೃಢವಾದ ಪುರಾವೆ" ಇದೆ ಎಂದು ರಾಹುಲ್ ಗಾಂಧಿ ಇತ್ತೀಚಿಗೆ ಹೇಳಿದ್ದರು.


# 2025-26 ರಲ್ಲಿ ಭಾರತ ಶೇ.6.4ರಷ್ಟು ಬೆಳವಣಿಗೆ

ಮಲ್ಲಮ್ಮನುಡಿ ವಾರ್ತೆ ನ್ಯೂಯಾರ್ಕ್ / ವಾಷಿಂಗ್ಟನ್:ಜು.30: ಭಾರತವು 2025–26 ರ ಆರ್ಥಿಕ ವರ್ಷದಲ್ಲಿ ಶೇಕಡಾ 6.4 ರಷ್ಟು ಬೆಳವಣಿಗೆ ಹೊಂದುವ ನಿರೀಕ್ಷೆಯಿದೆ. ದೇಶದ ಸ್ಥಿರ ಬೆಳವಣಿಗೆಯು ಸುಧಾರಣಾ ಕ್ರಮಗಳಿಂದ ಪ್ರೇರಿತವಾಗಿದ್ದು, ಇದು ಬಲವಾದ ಬಳಕೆಯ ಬೆಳವಣಿಗೆ ಮತ್ತು ಸಾರ್ವಜನಿಕ ಹೂಡಿಕೆಗೆ ಒತ್ತು ನೀಡುತ್ತದೆ ಎಂದು ಅಂತಾರಾಷ್ಟ್ರೀಯ ಹಣಕಾಸು ನಿಧಿ ತಿಳಿಸಿದೆ.ಐಎಂಎಫ್ ತನ್ನ ವಿಶ್ವ ಆರ್ಥಿಕ ದೃಷ್ಟಿಕೋನ ನವೀಕರಣವನ್ನು ಬಿಡುಗಡೆ ಮಾಡಿತು. ಭಾರತದಲ್ಲಿ ಬೆಳವಣಿಗೆಯು 2025– 2026 ರಲ್ಲಿ ಶೇಕಡಾ 6.4 ರಷ್ಟು ಇರಲಿದೆ ಎಂದು ಅಂದಾಜಿಸಲಾಗಿದೆ. ಇದು ಏಪ್ರಿಲ್ ಉಲ್ಲೇಖ ಮುನ್ಸೂಚನೆಯಲ್ಲಿ ಊಹಿಸಿದ್ದಕ್ಕಿಂತ ಹೆಚ್ಚು ಹಿತಕರವಾದ ಬಾಹ್ಯ ವಾತಾವರಣವನ್ನು ಪ್ರತಿಬಿಂಬಿಸುತ್ತದೆ. ಭಾರತಕ್ಕೆ, ಅಂಕಿಅಂಶ ಮತ್ತು ಮುನ್ಸೂಚನೆಗಳನ್ನು ಹಣಕಾಸು ವರ್ಷದ ಆಧಾರದ ಮೇಲೆ ಪ್ರಸ್ತುತಪಡಿಸಲಾಗಿದೆ ಎಂದು ಐಎಂಎಫ್ ಹೇಳಿದೆ. ಭಾರತದ ಬೆಳವಣಿಗೆಯ ಮುನ್ಸೂಚನೆಗಳು 2025 ಕ್ಕೆ ಶೇಕಡಾ 6.7 ಮತ್ತು 2026 ಕ್ಕೆ ಶೇಕಡಾ 6.4 ರಷ್ಟಿದೆ.

ಸುದ್ದಿಗೋಷ್ಠಿಯಲ್ಲಿ, ಐಎಂಎಫ್ ಸಂಶೋಧನಾ ವಿಭಾಗದ ವಿಭಾಗದ ಮುಖ್ಯಸ್ಥ ಡೆನಿಜ್ ಇಗನ್ ಭಾರತದ ಕುರಿತಾದ ಪ್ರಶ್ನೆಗೆ ಉತ್ತರಿಸುತ್ತಾ, ನಾವು ದೇಶಕ್ಕೆ ವಾಸ್ತವವಾಗಿ ಸಾಕಷ್ಟು ಸ್ಥಿರವಾದ ಬೆಳವಣಿಗೆಯನ್ನು ಹೊಂದಿದ್ದೇವೆ ಎಂದು ಹೇಳಿದರ

(2ನೇ ಪುಟ ನೋಡಿ)

# ರಕ್ತ ಮತ್ತು ನೀರು ಒಟ್ಟಿಗೆ ಹರಿಯಲು ಸಾಧ್ಯವಿಲ್ಲ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜು.30: ಸಂಸತ್ತಿನಲ್ಲಿ ಆಪರೇಷನ್ ಸಿಂದೂರ್ ಕುರಿತ ಚರ್ಚೆಯ ಮರುದಿನ ಮುಂಗಾರು ಅಧಿವೇಶನದ 8ನೇ ದಿನವಾದ ಇಂದು ವಿದೇಶಾಂಗ ಸಚಿವ ಎಸ್.ಜೈಶಂಕರ್ ಮತ್ತು ಸದನದ ನಾಯಕ ಜೆ.ಪಿ. ನಡ್ಡಾ ಅವರು ರಾಜ್ಯಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ಇಂದು ಮೊದಲು ಸದನದಲ್ಲಿ ಮಾತನಾಡಿದ ವಿದೇಶಾಂಗ ಸಚಿವ ಜೈಶಂಕರ್, ಪಹಲ್ಗಾಮ್ ದಾಳಿಯ ನಂತರ ಪಾಕಿಸ್ತಾನದೊಂದಿಗಿನ ಸಿಂಧೂ ಜಲ ಒಪ್ಪಂದವನ್ನು ಸ್ಥಗಿತಗೊಳಿಸಿದ ಬಗ್ಗೆ ಮಾತನಾಡಿದರು.

ಭಾರತವು 1947 ರಿಂದಗಡಿಯಾಚೆಗಿನ ಭಯೋತ್ಪಾದನೆಯನ್ನು ಎದುರಿಸುತ್ತಿದೆ. ಪಾಕಿಸ್ತಾನದೊಂದಿಗಿನ ಸಿಂಧೂ ಜಲ ಒಪ್ಪಂದವನ್ನು ಸ್ಥಗಿತಗೊಳಿಸುವ ಮೂಲಕ ಮೋದಿ ಸರ್ಕಾರ ನೆಹರೂ ಅವರ ನೀತಿಗಳ ತಪ್ಪುಗಳನ್ನು ಸರಿಪಡಿಸಿದೆ. ಅಂದಿನ ಪ್ರಧಾನಿ ನೆಹರೂರವರು ಪಾಕಿಸ್ತಾನದೊಂದಿಗಿನ ಒಪ್ಪಂದಕ್ಕೆ ಸಹಿ ಹಾಕಿದ್ದು ಶಾಂತಿ ಪಡೆಯಲು ಅಲ್ಲ, ಬದಲಿಗೆ ತುಷ್ಟೀಕರಣಕ್ಕಾಗಿ ಎಂದರು.ಸಿಂಧೂ ಜಲ ಒಪ್ಪಂದವು ಹಲವು ವಿಧಗಳಲ್ಲಿ ಬಹಳ ವಿಶಿಷ್ಟವಾದ

(2ನೇ ಪುಟ ನೋಡಿ)

# ಉಪಯೋಗಕ್ಕೆ ಬಾರದ ಶುದ್ಧ ನೀರಿನ ಘಟಕ



ಮಲ್ಲಮ್ಮನುಡಿ ವಾರ್ತೆ ಬೀದರ. ಜು. 30 : ಗುಮ್ಮಾ(ಜನವಾಡ) ಬೀದರ್ ತಾಲ್ಲೂಕಿನ ಗುಮ್ಮಾ ಗ್ರಾಮದಲ್ಲಿ ಸರ್ಕಾರ ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಸ್ಥಾಪಿಸಿದ ಶುದ್ಧ ಕುಡಿಯುವ ನೀರಿನ ಘಟಕ ಸಾರ್ವಜನಿಕರ ಉಪಯೋಗಕ್ಕೆ ಬಾರದಂತಾಗಿದೆ.

ಯಂತ್ರೋಪಕರಣಗಳು ಹಾಳಾದ ಕಾರಣ ಪ್ರತಿ ಗಂಟೆಗೆ 500 ಲೀಟರ್ ನೀರು ಶುದ್ಧೀಕರಣ ಸಾಮರ್ಥ್ಯದ ಘಟಕದಿಂದ ಹನಿ ಶುದ್ಧ ನೀರು ಕೂಡ ಹೊರ ಬರುತ್ತಿಲ್ಲ.

ಘಟಕ ಕೆಟ್ಟು ಐದಾರು ವರ್ಷಗಳಾದರೂ ಸಂಬಂಧಪಟ್ಟವರು ದುರಸ್ತಿ ಮಾಡುವ ಗೋಜಿಗೆ ಹೋಗಿಲ್ಲ ಎನ್ನುತ್ತಾರೆ ಗ್ರಾಮಸ್ಥರು.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

(2ನೇ ಪುಟ ನೋಡಿ)

# ಕೇಂದ್ರದಿಂದ ಪೂರೈಕೆ ಕೊರತೆಯಿಂದ ರಾಜ್ಯದಲ್ಲಿ ರಸಗೊಬ್ಬರ ಸಮಸ್ಯೆ: ಚಲುವರಾಯಸ್ವಾಮಿ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜು.30: ಕೇಂದ್ರ ಸರ್ಕಾರದಿಂದ ಯೂರಿಯಾ ಪೂರೈಕೆಯಲ್ಲಿ ಕೊರತೆಯಾದ ಹಿನ್ನೆಲೆಯಲ್ಲಿ ರಾಜ್ಯದ ಕೆಲವು ಜಿಲ್ಲೆಗಳಲ್ಲಿ ವಿತರಣೆಯಲ್ಲಿ ಸಮಸ್ಯೆಯಾಗಿದ್ದು, ಅದನ್ನು ನಿಭಾಯಿಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಎಲ್ಲಾ ಗೊಂದಲಗಳು ಬಗೆಹರಿಯಲಿವೆ ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಸ್ಪಷ್ಟಪಡಿಸಿದ್ದಾರೆ.ವಿಕಾಸಸೌಧದ ತಮ್ಮ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯದಲ್ಲಿ ಕಳೆದ 2 ವರ್ಷಗಳಲ್ಲಿ 3 ಮುಂಗಾರು ಹಂಗಾಮಿನಲ್ಲಿ ಇದೇ ಸರ್ಕಾರ ಅಧಿಕಾರದಲ್ಲಿದೆ.ನಾನೇ ಕೃಷಿ ಸಚಿವನಾಗಿ ಇದ್ದೇನೆ. ಈವರೆಗೆ ಉಂಟಾಗದ ಸಮಸ್ಯೆ ಈಗೇಕೆ ಎಂಬುದನ್ನು ವಿಶ್ಲೇಷಿಸಬೇಕಾಗಿದೆ ಎಂದು ಹೇಳಿದ್ದಾರೆ. ರಾಜಕ್ಕೆ ಪೂರೈಕೆಯಾಗಬೇಕಾಗಿದ್ದ ಯೂರಿಯಾ ರಸಗೊಬ್ಬರದಲ್ಲಿ ಈ ಬಾರಿ 1.36 ಲಕ್ಷ ಮೆಟ್ರಿಕ್ ಟನ್ ಕೊರತೆಯಾಗಿದೆ. ಇದೇ ಈ ಎಲ್ಲಾ ಸಮಸ್ಯೆ ಹೆಚ್ಚಾಗಲು ಪ್ರಮುಖ ಕಾರಣವಾಗಿದೆ ಎಂದು ವಿವರಿಸಿದ್ದಾರೆ.

ಈ ಬಾರಿ ಮುಂಗಾರು ಬೇಗ ಪ್ರಾರಂಭವಾಗಿ ಉತ್ತಮ ಮಳೆಯಾಗಿದ್ದು, 2 ಲಕ್ಷ ಹೆಕ್ಟೇರ್ ಹೆಚ್ಚುವರಿ ಮುಸುಕಿನ ಜೋಳ ಬಿತ್ತನೆ ಕೂಡ ಯೂರಿಯಾ ಬೇಡಿಕೆಯ ಹಠಾತ್ ಏರಿಕೆಗೆ ಕಾರಣವಾಗಿದೆ ಎಂದರು.

ರಾಜ್ಯದಲ್ಲಿ ಅಕ್ರಮ ಸಾಗಾಟ, ಯೂರಿಯಾ ದುರ್ಬಳಕೆ ಬಗ್ಗೆ ವಿಲಕ್ಷಣ ದಳ ಚುರುಕಾಗಿ ಕಾರ್ಯನಿರ್ವಹಿಸುತ್ತಿದ್ದು, ಅಕ್ರಮಗಳಿಗೆ ಕಡಿವಾಣ ಹಾಕಿದೆ. ವಿರೋಧ ಪಕ್ಷದ ಮುಖಂಡರು ಮಾಧ್ಯಮಕ್ಕೆ ತಿಳಿಸಿರುವಂತೆ ಕರ್ನಾಟಕ ರಾಜ್ಯವು ನೆರೆ ದೇಶಗಳಾದ ಶ್ರೀಲಂಕಾ ಮತ್ತು ಬಾಂಗ್ಲಾದೇಶದೊಂದಿಗೆ ಯಾವುದೇ ಗಡಿಯನ್ನು ಹಂಚಿಕೊಂಡಿರುವುದಿಲ್ಲ. ಈ ಹೇಳಿಕೆಯು ಹಾಸ್ಯಾಸ್ಪದವಾಗಿದೆ. ವಿರೋಧ ಪಕ್ಷದ ನಾಯಕರು ಅರ್ಥ ಮಾಡಿಕೊಳ್ಳಬೇಕು ಎಂದು ಹೇಳಿದ್ದಾರೆ.


ರಸಗೊಬ್ಬರಗಳ ಪೂರೈಕೆ ಕಾಪು ದಾಸ್ತಾನಿಗೆ ಇರಿಸಲಾಗಿದ್ದ ಗ್ಯಾರಂಟಿ ಹಣ ಕಡಿತಗೊಳಿಸಲಾಗಿದೆ ಎಂದು ಆರೋಪಿಸಿದ್ದಾರೆ.

ಆದರೆ ಈ ಹಿಂದೆ ಇದ್ದದ್ದು ಬಿಜೆಪಿ ಸರ್ಕಾರ, ಅವರೇ ನಿಗದಿಪಡಿಸಿದ್ದ 400 ಕೋಟಿ ರೂ. ಹಣವನ್ನು ನಾವು ಯಥಾಸ್ಥಿತಿಯಲ್ಲಿ ಮುಂದುವರೆಸಿದ್ದೇವೆ. ಇನ್ನೂ 600 ಕೋಟಿ ರೂ. ಹೆಚ್ಚುವರಿ ಹಣ ನೀಡಲು ರಾಜ್ಯ ಸರ್ಕಾರ ಸಿದ್ಧವಿದೆ. ಪ್ರತಿಯಾಗಿ ಬಿಜೆಪಿ ನಾಯಕರು ಗೊಬ್ಬರ ಒದಗಿಸಲು ಸಾಧ್ಯವೇ ಎಂದು ಪ್ರಶ್ನಿಸಿದ್ದಾರೆ.

ರಾಜ್ಯದಲ್ಲಿ ದಾವಣಗೆರೆ, ಗದಗ, ಕೊಪ್ಪಳ, ಧಾರವಾಡ ಹಾಗೂ ಯಾದಗಿರಿ ಜಿಲ್ಲೆಗಳಲ್ಲಿ ಯೂರಿಯಾ ಕೊರತೆ ಸ್ವಲ್ಪ ಕಂಡುಬಂದಿರುವುದು ನಿಜ. ಆದರೆ ಅದನ್ನು ನಿಭಾಯಿಸಲಾಗುತ್ತಿದೆ. ಹೆಚ್ಚುವರಿ ದಾಸ್ತಾನು ಬೇರೆ ಜಿಲ್ಲೆಗಳಿಂದ ವರ್ಗಾವಣೆ ಮಾಡಲಾಗುತ್ತಿದೆ

(2ನೇ ಪುಟ ನೋಡಿ)

# ನಿಸಾರ್ ಉಡಾವಣೆ ಯಶಸ್ವಿ



ಮಲ್ಲಮ್ಮ ನುಡಿ ವಾರ್ತೆ ಶ್ರೀಹರಿಕೋಟ:ಜು.30: ಮೊದಲ ಬಾರಿಗೆ ಇಸ್ರೊ ಮತ್ತು ಅಮೆರಿಕದ ನಾಸಾ ಜಂಟಿಯಾಗಿ ಅಭಿವೃದ್ಧಿಪಡಿಸಿದ ಭೂಮಿ ಸಮೀಕ್ಷೆಯ ಸಿಂಥೆಟಿಕ್ ಅಪರ್ಚರ್ ರೇಡಾರ್ ಉಪಗ್ರಹ ಉಡಾವಣೆ ಯಶಸ್ವಿಯಾಗಿದೆ.

ಇಂದು ಸಂಜೆ 5:40ಕ್ಕೆ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ಜಿಎಸ್‌ಎಲ್‌ವಿ- ಎಫ್16 ರಾಕೆಟ್ ಮೂಲಕ ನಾಸಾ-ಇಸ್ರೋ ಸಿಂಥೆಟಿಕ್ ಅಪರ್ಚರ್ ರೇಡಾರ್ ಉಡಾವಣೆ ಮಾಡಲಾಯಿತು. ಉಪಗ್ರಹ ಯಶಸ್ವಿಯಾಗಿ ಕಕ್ಷೆಗೆ ತಲುಪುವ ಮೂಲಕ ಬಾಹ್ಯಾಕಾಶ ಕ್ಷೇತ್ರದಲ್ಲಿ ಭಾರತ ಮಹತ್ವದ ಮೈಲಿಗಲ್ಲು ನಿರ್ಮಿಸಿದೆ.

2,392 ಕೆಜಿ ತೂಕದ ಮತ್ತು ಡ್ಯುಯಲ್-ಫ್ರೀಕ್ವೆನ್ಸಿ ರೇಡಾರ್ ವ್ಯವಸ್ಥೆಗಳಿಂದ (ಐ-ಬ್ಯಾಂಡ್ ಮತ್ತು ಖ-ಬ್ಯಾಂಡ್) ಚಾಲಿತವಾಗಿರುವ ನಿಸಾರ್ ಉಪಗ್ರಹ ವಿಪತ್ತುಗಳು, ಹವಾಮಾನ ಬದಲಾವಣೆಗಳು ಮತ್ತು ಪರಿಸರ ಬದಲಾವಣೆಗಳ ಕುರಿತು ನೈಜ-ಸಮಯದ ಡೇಟಾವನ್ನು ನೀಡಲಿದೆ. ಎಲ್ಲಾ ಹವಾಮಾನದಲ್ಲಿ ಹಗಲು ಮತ್ತು ರಾತ್ರಿಯ ವೇಳೆ ಹೆಚ್ಚಿನ ರೆಸಲ್ಯೂಶನ್ ಇರುವ ಚಿತ್ರವನ್ನು ಸೆರೆ ಹಿಡಿಯಲಿದೆ.

ಎಲ್-ಬ್ಯಾಂಡ್ ಅನ್ನು ನಾಸಾ ತಯಾರಿಸಿದ್ದರೆ ಎಸ್-ಬ್ಯಾಂಡ್ ಅನ್ನು ಇಸ್ರೊ ತಯಾರಿಸಿದೆ. ಎಸ್-ಬ್ಯಾಂಡ್ ಅನ್ನು ಸಿಂಥೆಟಿಕ್ ಅಪರ್ಚರ್ ರೇಡಾರ್‌ನಲ್ಲಿ ಅಳವಡಿಸಲಾಗುತ್ತದೆ. ಇದರಿಂದ ಭೂಮಿಗೆ ಸಂಬಂಧಿಸಿದಂತೆ ದತ್ತಾಂಶ ಸಂಗ್ರಹ ಸಾಧ್ಯವಾಗಲಿದೆ.

13,000 ಕೋಟಿ ವೆಚ್ಚ:

ಇನ್ನೂ ನಿಸಾರ್ ಭೂಸರ್ವೇಕ್ಷಣಾ ಉಪಗ್ರಹಕ್ಕೆ 13,000 ಕೋಟಿ ರೂ. ವೆಚ್ಚ ಮಾಡಲಾಗಿದ್ದು, ವಿಶ್ವದ ಅತ್ಯಂತ ದುಬಾರಿ ಕಣ್ಗಾವಲು ಉಪಗ್ರಹವಾಗಿ ಗುರುತಿಸಿಕೊಂಡಿದೆ. ಅಲ್ಲದೇ ನಿಸಾರ್ ಉಪಗ್ರಹವು ಒಂದು ಬಾರಿಗೆ 242 ಕಿಮೀ ಭೂವಿಸ್ತೀರ್ಣವನ್ನು ನೋಡುವ ಸಾಮರ್ಥ್ಯ ಹೊಂದಿದೆ. 97 ನಿಮಿಷಕ್ಕೆ ಭೂಮಿಗೆ ಒಂದು ಸುತ್ತು ಬರಲಿದೆ. ಮುಖ್ಯವಾಗಿ ನಿಸಾರ್ ಉಪಗ್ರಹವು ಕಳುಹಿಸುವ ಎಲ್ಲ ಮಾಹಿತಿಗಳು

(2ನೇ ಪುಟ ನೋಡಿ)

# ಮಕ್ಕಳ ಹಕ್ಕುಗಳ ಹಾಗೂ ಮಕ್ಕಳ ರಕ್ಷಣೆಗೆ ವಿಶೇಷ ಗಮನ ನೀಡಿ :ಶಶಿಧರ ಕೋಸಂಬೆ




ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:ಜು:30: ಶಾಲಾ ಮಕ್ಕಳ ಹಾಜರಾತಿ ನಿರ್ವಹಣೆ,ಆಧಾರ್ ಸೀಡಿಂಗ್,ಅಪಾರದಡಿ ನೋಂದಣಿ, ಬಾಲ್ಯವಿವಾಹ ತಡೆ ಸೇರಿದಂತೆ ವಸತಿ ನಿಲಯಗಳಲ್ಲಿ ಮೂಲಸೌಕರ್ಯಗಳನ್ನು ಒದಗಿಸಲು ಅಧಿಕಾರಿಗಳು ಪ್ರಾಮಾಣಿಕ ಕೆಲಸ ಮಾಡುವಂತೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶ್ರೀ ಶಶಿಧರ ಕೋಸಂಬೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇಂದು ಬಾಲ್ಯವಿವಾಹ, ಪೋಕ್ಸೋ, ಬಾಲಗರ್ಭಿಣಿ ಪ್ರಕರಣಗಳಿಗೆ ಸಂಬಂಧಿಸಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿ ಅವರು, ಮಾತನಾಡಿದರು.

ಮಕ್ಕಳ ರಕ್ಷಣೆ ಹಾಗೂ ಮಕ್ಕಳ ಹಕ್ಕುಗಳ ರಕ್ಷಣೆ ಸೇರಿದಂತೆ ಮಕ್ಕಳಿಗಾಗಿ ಜಾರಿಗೊಳಿಸಿದ ವಿವಿಧ ಸರ್ಕಾರಿ ಯೋಜನೆಗಳ ಲಾಭ ಸಕಾಲಕ್ಕೆ ದೊರಕಿಸಬೇಕು.ಈ ದಿಸೆಯಲ್ಲಿ ಅಧಿಕಾರಿಗಳು ಪ್ರಾಮಾಣಿಕ ಕೆಲಸ ಮಾಡುವಂತೆ ಅವರು ಸೂಚನೆ ನೀಡಿದರು.

ಶಾಲೆಯಲ್ಲಿ ಮಕ್ಕಳ ಹಾಜರಾತಿ ಸಮರ್ಪಕವಾಗಿರಬೇಕು.ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಆದ್ಯತೆ ಮೇಲೆ ಶಾಲೆಗೆ ಸೇರಿಸಬೇಕು.ಅವರನ್ನು ಗುರುತಿಸಿ ಶಾಲೆಗೆ ಸೇರಿಸುವ ಕಾರ್ಯ ಚುರುಕುಗೊಳಿಸ ಬೇಕು. ತಾಯಿ ಮಕ್ಕಳ ಆಸ್ಪತ್ರೆ, ವಿವಿಧ ವಸತಿ ನಿಲಯಗಳು, ಅಂಗನವಾಡಿಗಳಲ್ಲಿ ಮೂಲಸೌಕರ್ಯಗಳನ್ನು ಆದ್ಯತೆ ಮೇಲೆ ಕಲ್ಪಿಸಬೇಕು. ಸುಸಜ್ಜಿತ

ಶಾಲಾ ಕೊಠಡಿಯಲ್ಲಿ ಬೋಧನೆ ನಡೆಯುವಂತೆ ನೋಡಿಕೊಳ್ಳಬೇಕು. ಬಾಲ್ಯವಿವಾಹವಾಗದೆ, 18 ವರ್ಷಗಳ ಕಾಲ ಮಕ್ಕಳು ಗೌರವಯುತ ಜೀವನ ನಡೆಸುವಂತಾಗಬೇಕು ಎಂದು ಸೂಚಿಸಿದರು.ಇತ್ತೀಚೆಗೆ ರಾಯಚೂರು ಗಂಡು

(2ನೇ ಪುಟ ನೋಡಿ)

# ಮಾನವ ಕಳ್ಳ ಸಾಗಾಣಿಕೆ ಸಮಾಜಕ್ಕೆ ಮಾರಕ: ಸಿಇಓ ಡಾ. ಗಿರೀಶ್ ಬದೋಲೆ




ಮಲ್ಲಮ್ಮನುಡಿ ವಾರ್ತೆ ಬೀದರ, ಜು.30: ಮಾನವ ಕಳ್ಳ ಸಾಗಾಣಿಕೆ ಸಮಾಜಕ್ಕೆ ಮಾರಕವಾಗಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ. ಗಿರೀಶ್ ಬದೋಲೆ ಅವರು ತಿಳಿಸಿದರು.

ಅವರು ಬುಧವಾರ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ-ಯ ಅಂಗವಾಗಿ ಜಿಲ್ಲಾ ಮಟ್ಟದ ಒಂದು ದಿನದ ಕಾರ್ಯಾಗಾರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಾನವ ಕಳ್ಳ ಸಾಗಾಣಿಕೆ ಒಂದು ಕಾನೂನುಬಾಹಿರ ಮತ್ತು ಅಸಂವಿಧಾನಿಕ ಚಟುವಟಿಕೆಯಾಗಿದೆ. ಸಂವಿಧಾನದ 21ನೇ ವಿಧಿಯು ಭಾರತದ ಪ್ರತಿಯೊಬ್ಬ ಪ್ರಜೆಗಳಿಗೆ ಸ್ವಾತಂತ್ರ್ಯವಾಗಿ ಜೀವಿಸುವ ಹಕ್ಕು ನೀಡಿದೆ ಹಾಗೂ 23ನೇ ವಿಧಿಯು ಮಾನವ ಕಳ್ಳ ಸಾಗಾಣಿಕೆ ಅಪರಾಧ ಎಂದು ತಿಳಿಸುತ್ತದೆ. ಭಾರತ ಸರ್ಕಾರವು ಮಾನವ ಕಳ್ಳ ಸಾಗಾಣಿಕೆ ತಡೆ ಕಾಯ್ದೆ 1956 ನ್ನು ಜಾರಿಗೆ ತಂದಿದೆ. ಆದರೂ ಕೂಡ ಮಾನವ ಕಳ್ಳ ಸಾಗಾಣಿಕೆ ಆಗುತ್ತಿರುವುದು ಗಂಭೀರದ ವಿಷಯವಾಗಿದೆ ಎಂದರು.

ಕಾಣೆಯಾದವರ ಬಗ್ಗೆ ದೂರ ನೀಡಲು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕಾವಲು ಸಮಿತಿ ಇರುತ್ತದೆ ಅಲ್ಲಿ ಕೂಡ ದೂರ ನೀಡಬಹುದು ಮತ್ತು ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಯಾವಾಗಲೂ ಸಾರ್ವಜನಿಕರ ಸಹಾಯಕ್ಕೆ ಇರುತ್ತದೆ. ಮಾನವ ಕಳ್ಳ ಸಾಗಾಣಿಕೆಯನ್ನು ತಡೆದು ಮಾನವ ಕಳ್ಳ ಸಾಗಾಣಿಕೆ ಮುಕ್ತ ಜಿಲ್ಲೆಯಾಗಲು ಎಲ್ಲಾ ಇಲಾಖೆಯ ಅಧಿಕಾರಿಗಳು ಮತ್ತು ಸಾರ್ವಜನಿಕರು ಸಹಕರಿಸಬೇಕು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ಅವರು ಮಾತನಾಡಿ, ಮಾನವ ಕಳ್ಳ ಸಾಗಾಣಿಕೆಯಲ್ಲಿ ಮಹಿಳೆಯರು, ಮಕ್ಕಳು ಮತ್ತು ಇತರರು ಒಳಗೊಂಡಿರುತ್ತಾರೆ.

(2ನೇ ಪುಟ ನೋಡಿ)

# ಒಂದನೇ ಪುಟದಿಂದ

## ವಿಶೇಷ ಗಮನ ನೀಡಿ :ಶಶಿಧರ ಕೋಸಂಬೆ

ಯಾದಗಿರಿ ಹೆಣ್ಣು ಮಗುವಿನೊಂದಿಗಿನ ಬಾಲ್ಯವಿವಾಹ ಪ್ರಕರಣದಲ್ಲಿ ಸೂಕ್ತ ಕ್ರಮ ಕೈಗೊಳ್ಳಲಾಗಿದೆ.ವಿವಿಧ ವಸತಿ ನಿಲಯಗಳು,ಶಾಲೆ ಹಾಗೂ ಸಂಸ್ಥೆಗಳ ವ್ಯಾಪ್ತಿಯಲ್ಲಿ ಮಕ್ಕಳ ಸಹಾಯವಾಣಿ 1098 ಪ್ರಚುರಪಡಿಸಬೇಕು.ಸಲಹಾ ಪಟ್ಟಿಗೆ ಮೂಲಕ ಸಮಸ್ಯೆಗಳಿಗೆ ಸ್ಪಂದಿಸಬೇಕು. ಮಕ್ಕಳ ಅಪೌಷ್ಟಿಕತೆ ನಿವಾರಣೆಗೆ ವಿಶೇಷ ಗಮನ ನೀಡುವಂತೆ ಸೂಚಿಸಿದ ಅವರು ಮಕ್ಕಳಿಗಾಗಿ ಇರುವ ಸವಲತ್ತುಗಳ ಬಗ್ಗೆ ತಿಳಿಹೇಳುವಂತೆ ಅವರು ಸೂಚಿಸಿದರು.

ಜಿಲ್ಲೆಯಲ್ಲಿ ಬಾಲಕಾರ್ಮಿಕರು ಇರದಂತೆ ನೋಡಿಕೊಳ್ಳಬೇಕು.ಅರಕೇರಾ,ಸುರಪುರ,,ಶಹಾಪುರ, ಸೇರಿದಂತೆ ಜಿಲ್ಲೆಯಲ್ಲಿ ಶಿಥಿಲಾವಸ್ಥೆಯಲ್ಲಿರುವ ಶಾಲಾ ಕೊಠಡಿಗಳ ಸುಧಾರಣೆಗೆ ವಿಶೇಷ ಗಮನ ನೀಡಬೇಕು.ಅನಧಿಕೃತ ಕೋಚಿಂಗ್ ಸೆಂಟರ್ಗಳ ಮೇಲೆ ಕ್ರಮ ಕೈಗೊಳ್ಳಬೇಕು.ಪೋಲಿಸ್ ಇಲಾಖೆ ವ್ಯಾಪ್ತಿಯಲ್ಲಿ ತೆರೆದ ಮನೆ ಯೋಜನೆ ಸೇರಿದಂತೆಮಕ್ಕಳಿಗೆ ಸಂಬಂಧಿಸಿದ ಪ್ರಕರಣಗಳಲ್ಲಿ ಗಂಭೀರವಾಗಿ ಪರಿಗಣಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಅವರು ಸೂಚಿಸಿದರು.ಜಿಲ್ಲಾ ಹಿರಿಯ ಸಿವಿಲ್ ನ್ಯಾಯಾಧೀಶ ಶ್ರೀ ಮರಿಯಪ್ಪ ಅವರು, ಅಧಿಕಾರಿಗಳು ಮಕ್ಕಳ ಪರವಾದ ಮನೋಭಾವ ಬೆಳೆಸಿಕೊಳ್ಳಬೇಕು.ತಮ್ಮ ಆತ್ಮಸಾಕ್ಷಿಗೆ ಅನುಗುಣವಾಗಿ ಮಕ್ಕಳ ಸಮಸ್ಯೆ ಗಳಿಗೆ ಸ್ಪಂದಿಸಬೇಕು.ತಾವು ನೀಡುವ ಮಾಹಿತಿ ಸರ್ವೋಚ್ಚ ನ್ಯಾಯಾಲಯದ ವರೆಗೂ ತಲುಪುವುದರಿಂದ ನೈಜ ವರದಿ,ಅಂಕಿ ಅಂಶಗಳನ್ನು ಸಲ್ಲಿಸಬೇಕು.ಆಧಾರ ಸೀಡಿಂಗ್ ಸಕಾಲಕ್ಕೆ ಆಗಬೇಕು.ಜನನ ಪ್ರಮಾಣ ಪತ್ರ ಸಕಾಲಕ್ಕೆ ದೊರಕಿಸಬೇಕು.ಲೋಕ ಅದಾಲತ್ ಮೂಲಕವು ಸಮಸ್ಯೆಗಳನ್ನು ಇತ್ಯರ್ಥಪಡಿಸಿಕೊಳ್ಳುವಂತೆ ಅವರು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ವಿಜಯಕುಮಾರ್ ಮಡ್ಡೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ತಿಪ್ಪಣ್ಣ ಶಿರಸಗಿ,ಡಿಎಸ್ಪಿ ಜಾವೇದ್ ಇನಾಮದಾರ,ಸುರೇಶ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ನಿರ್ಮಲಾ ಸುರಪುರ,ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ದಿನೇಶ್ ಕುಮಾರ್,ಇತರರು ಉಪಸ್ಥಿತರಿದ್ದರು.

## ಸಿಇಓ ಡಾ. ಗಿರೀಶ್ ಬದೋಲೆ

ಮಹಿಳೆಯರನ್ನು ಬೇರೆ ಸ್ಥಳಗಳಿಗೆ ಸಾಗಾಣಿಕೆ ಮಾಡಿ ವೇಶ್ಯಾವಾಟಿಕೆ ಅಂತಹ ಸಮಾಜದ ಕೆಟ್ಟ ಚಟುವಟಿಕೆಗಳಲ್ಲಿ ಬಳಸಿಕೊಳ್ಳುತ್ತಿದ್ದಾರೆ ಮತ್ತು ಮಕ್ಕಳನ್ನು ಭಿಕ್ಷಾಟನೆಯಲ್ಲಿ ಹಾಗೂ ಇತರರನ್ನು ದೇಹದಲ್ಲಿ ಇರುವ ಅಂಗಾಂಗಗಳನ್ನು ತೆಗೆದುಕೊಂಡು ಬೇರೆಯವರಿಗೆ ಮಾರಾಟ ಮಾಡುತ್ತಾರೆ ಮತ್ತು ಕಾರ್ಖಾನೆಗಳಲ್ಲಿ ಕೆಲಸಕ್ಕೆ ಬಳಸಿಕೊಳ್ಳುತ್ತಾರೆ. ಆದ್ದರಿಂದ ಇಂತಹ ಹೀನ ಕೃತ್ಯಗಳಿಂದ ಜನರನ್ನು ಕಾಪಾಡಬೇಕು ಎಂದರು.ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಗಳಾದ ಪ್ರಕಾಶ್ ಅರ್ಜುನ್ ಬನಸೋಡೆ ಅವರು ಮಾತನಾಡಿ, ಮಾನವ ಕಳ್ಳ ಸಾಗಾಣಿಕೆಯಲ್ಲಿ ಮಹಿಳೆಯರು ಮತ್ತು ಮಕ್ಕಳನ್ನು ಹೆಚ್ಚು ಸಾಗಾಣಿಕೆ ಮಾಡುತ್ತಾರೆ ಮಹಿಳೆಯರನ್ನು ಅನೈತಿಕ ಚಟುವಟಿಕೆಗಳಲ್ಲಿ ಮತ್ತು ಮಕ್ಕಳನ್ನು ಭಿಕ್ಷಾಟನೆ, ಬಾಲ ಕಾರ್ಮಿಕ ಅಂತಹ ಕೃತ್ಯಗಳಲ್ಲಿ ಬಳಸಿಕೊಳ್ಳುತ್ತಿದ್ದಾರೆ ಆದ್ದರಿಂದ ಇಂತಹ ಹೀನ ಕೃತ್ಯಗಳಿಂದ ಮಕ್ಕಳನ್ನು ಮತ್ತು ಮಹಿಳೆಯರನ್ನು ಕಾಪಾಡಬೇಕು ಹಾಗೂ ಇದಕ್ಕೆ ಸಾರ್ವಜನಿಕರು ಸಹಕಾರ ನೀಡಬೇಕು. ಕೆಲವು ಸಂದರ್ಭಗಳಲ್ಲಿ ಕಾಣೆಯಾದರು ಕೂಡ ಪೋಷಕರು ಒಂದು ವಾರದ ನಂತರ ಬರಬಹುದು, ಒಂದು ತಿಂಗಳ ನಂತರ ಬರಬಹುದು ಅಥವಾ 1 ವರ್ಷದ ನಂತರ ಬರಬಹುದು ಎಂದು ನಿರ್ಲಕ್ಷ್ಯ ವಹಿಸುತ್ತಾರೆ. ಇದು ಪೋಷಕರು ಮಾಡುವ ಅತಿ ದೊಡ್ಡ ತಪ್ಪಾಗಿರುತ್ತದೆ. ಕಾಣೆಯಾದ ತಕ್ಷಣ ಸಮೀಪದ ಪೋಲಿಸ್ ಠಾಣೆಗೆ ದೂರ ದಾಖಲಿಸಬೇಕು ಎಂದರು.ಇದೇ ಸಂದರ್ಭದಲ್ಲಿ ನ್ಯಾಯಾಧೀಶರು ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆಯ ಅಂಗವಾಗಿ ಪ್ರಮಾಣ ವಚನ ಬೋಧಿಸಿದರು. ಸಂಪನ್ಮೂಲ ವ್ಯಕ್ತಿಗಳಾದ ನ್ಯಾಯಾವಾದಿ ಬಸವರಾಜ ಬುಳಾ ಮತ್ತು ಬಿ. ಎಸ್. ಪಾಟೀಲ ಅವರು ವಿಶೇಷ ಉಪನ್ಯಾಸ ನೀಡಿದರು.ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರಾದ ಶ್ರೀಧರ್ ಎಮ್.ಎಸ್, ಜಿಲ್ಲಾ ಕಾರ್ಮಿಕ ಅಧಿಕಾರಿ ಮಹೇಶ್, ಡಾನ್ ಬಾಸ್ಕೋ ಸ್ವಯಂ ಸೇವಾ ಸಂಸ್ಥೆಯ ನಿರ್ದೇಶಕರಾದ ಸ್ಟೀವನ್ ಲಾರೆನ್ಸ್ ಸೇರಿದಂತೆ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು ಹಾಗೂ ಮಕ್ಕಳ ಸಂರಕ್ಷಣಾಧಿಕಾರಿ ಗೌರಿಶಂಕರ ಪ್ರತಾಪುರ ಅವರು ನಿರೂಪಿಸಿ ವಂದಿಸಿದರು.

## ಶುದ್ಧ ನೀರಿನ ಘಟಕ

ಅಧಿಕಾರಿಗಳ ಪ್ರಕಾರ, ಗ್ರಾಮದಲ್ಲಿ 2015–16ರಲ್ಲಿ ಕೆಆರ್ಐಡಿಎಲ್ನಿಂದ ಘಟಕ ಸ್ಥಾಪಿಸಲಾಗಿದೆ. ಅನಂತರ ಇಲಾಖೆಗೆ ಒಪ್ಪಿಸಲಾಗಿತ್ತು. ಕೆಲ ದಿನಗಳ ನಂತರ ಯಂತ್ರೋಪಕರಣದಲ್ಲಿ ಸಮಸ್ಯೆ ಕಾಣಿಸಿಕೊಂಡಿತ್ತು. ಬಳಿಕ ದುರಸ್ತಿಪಡಿಸಿ 2017–18 ರಲ್ಲಿ ಗ್ರಾಮ ಪಂಚಾಯಿತಿಗೆ ಹಸ್ತಾಂತರಿಸಲಾಗಿದೆ. ಆನಂತರ ಕೆಲ ಅವಧಿವರೆಗೆ ಘಟಕ ಕಾರ್ಯನಿರ್ವಹಿಸಿದೆ. ನಂತರ ಮತ್ತೆ ಹಾಳಾಗಿದ್ದು, ಈವರೆಗೂ ದುರಸ್ತಿ ಕಂಡಿಲ್ಲ. ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಿದಾಗ ಗ್ರಾಮಸ್ಥರಿಗೆ ಅತೀವ ಸಂತಸ ಆಗಿತ್ತು. ಆದರೆ, ಅದು ಬಹು ದಿನಗಳವರೆಗೆ ಉಳಿಯಲಿಲ್ಲ ಎಂದು ಬೇಸರದಿಂದ ಹೇಳುತ್ತಾರೆ ಗ್ರಾಮದ ಪ್ರಶಾಂತ ಪಾಟೀಲ. ಐದು ರೂಪಾಯಿಗೆ ಕ್ಯಾನ್ ನೀರು ಬರುತ್ತಿತ್ತು. ನಿರ್ವಹಣೆ ಇಲ್ಲದಿರುವುದರಿಂದ ಘಟಕ ಹಾಳಾಗಿದೆ. ಯಂತ್ರಗಳು ತುಕ್ಕು ಹಿಡಿದಿದೆ. ಗಾಜುಗಳು ಒಡೆದಿವೆ ಎಂದು ಹೇಳುತ್ತಾರೆ. ಗ್ರಾಮಸ್ಥರಿಗೆ ಶುದ್ಧ ನೀರಿಗೆ ಘಟಕ ಆಸರೆಯಾಗಿತ್ತು. ಹಾಳಾಗಿದ್ದರಿಂದ ಅನೇಕರು ಸಮೀಪದ ಅಗ್ರಹಾರ ಹಾಗೂ ಬೀದರ್ನಿಂದ ಕ್ಯಾನ್ಗಳಲ್ಲಿ ಶುದ್ಧ ನೀರು ತರುತ್ತಿದ್ದಾರೆ ಎಂದು ತಿಳಿಸುತ್ತಾರೆ ಗ್ರಾಮದ ನರಸಪ್ಪ ಧನಗರ್. ಕೆಆರ್ಐಡಿಎಲ್ನಿಂದ ನೀರಿನ ಘಟಕ ಸ್ಥಾಪನೆ ಆರು ವರ್ಷಗಳಿಂದ ನಿಷ್ಕ್ರಿಯವಾದ ಘಟಕ ಘಟಕ ದುರಸ್ತಿಗೆ ಗ್ರಾಮಸ್ಥರ ಆಗ್ರಹ ಪ್ರಶಾಂತ ಪಾಟೀಲ ಗುಮ್ಮಾ ಗ್ರಾಮಸ್ಥಗ್ರಾಮದ ಜನರಿಗೆ ಶುದ್ಧ ನೀರು ಕೊಡಲು ಸರ್ಕಾರ ಘಟಕ ಆರಂಭಿಸಿತ್ತು. ಘಟಕ ಹಾಳಾಗಿದ್ದರಿಂದ ಸರ್ಕಾರದ ಆಶಯ ಈಡೇರಿಲ್ಲ. ಗಾಯತ್ರಿದೇವಿ ಅಷ್ಠೂರ ಪಿಡಿಒ ಗುಮ್ಮಾ ಗ್ರಾಮದಲ್ಲಿನ ಶುದ್ಧ ಕುಡಿಯುವ ನೀರಿನ ಘಟಕ ಹಾಳಾಗಿರುವುದು ಗಮನಕ್ಕೆ ಬಂದಿದೆ. ಕೂಡಲೇ ದುರಸ್ತಿಗೆ ಕ್ರಮ ಕೈಗೊಳ್ಳಲಾಗುವುದು

## ರಸಗೊಬ್ಬರ ಸಮಸ್ಯೆ: ಚಲುವರಾಯಸ್ವಾಮಿ

ಎಂದು ತಿಳಿಸಿದರು. ರಸಗೊಬ್ಬರ ಅದರಲ್ಲೂ ಮುಖ್ಯವಾಗಿ ಯೂರಿಯಾ ಮತ್ತು ಡಿಎಪಿ ಪೂರೈಕೆ ಕೋರಿ ಜುಲೈ 7ರಂದು ಕೇಂದ್ರ ಕೃಷಿ ಸಚಿವರನ್ನು ಭೇಟಿ ಮಾಡಿ ಮನವಿ ಸಲ್ಲಿಸಲಾಗಿತ್ತು. ಆ ನಂತರ ನಾನು ಹಾಗೂ ಸಿಎಂ ಸಿದ್ದರಾಮಯ್ಯ ಅವರು ಸಹ ಕೇಂದ್ರ ಸರ್ಕಾರಕ್ಕೆ ಪತ್ರ ಬರೆದು ಮನವಿ ಮಾಡಲಾಗಿದೆ ಎಂದರು.

ಕೇಂದ್ರ ರಸಗೊಬ್ಬರ ಖಾತೆ ಸಚಿವರ ಭೇಟಿಗಾಗಿ ಸಮಯಾವಕಾಶ ಕೋರಿ ಪತ್ರ ಬರೆಯಲಾಗಿದೆ. ಅವಕಾಶ ಸಿಕ್ಕರೆ ಭೇಟಿ ಮಾಡಿ, ರಾಜ್ಯದ ಪರಿಸ್ಥಿತಿ ವಿವರಿಸಿ ಮನವಿ ಮಾಡಲಾಗುವುದು ಎಂದರು.

## ಉಡಾವಣೆ ಯಶಸ್ವಿ

ಹಾಗೂ ದತ್ತಾಂಶಗಳನ್ನು ಉಚಿತವಾಗಿ ಎಲ್ಲಾ ದೇಶಗಳು ಅಧ್ಯಯನಕ್ಕೆ ಬಳಕೆ ಮಾಡಿಕೊಳ್ಳಬಹುದಾಗಿದೆ.

ಅರಣ್ಯ ಮತ್ತು ಜೀವವೈವಿಧ್ಯ ಸಂರಕ್ಷಣೆ:

ದಟ್ಟವಾದ ಸಸ್ಯವರ್ಗವನ್ನು ಭೇದಿಸುವ ಸಾಮರ್ಥ್ಯವನ್ನು ನಿಸಾರ್ ಹೊಂದಿರುವುದು ವಿಶೇಷ. ಅರಣ್ಯನಾಶ, ಅರಣ್ಯದಲ್ಲಿ ಆಗುವ ಬದಲಾವಣೆಯನ್ನು ನಕ್ಷೆ ಮಾಡುವಲ್ಲಿ ಪ್ರಬಲ ಸಾಧನವಾಗಿ ಬಳಕೆಯಾಗಲಿದೆ. ಅಕ್ರಮ ಮರ ಕಡಿಯುವಿಕೆಯನ್ನು ಪತ್ತೆಹಚ್ಚಲು, ಅಳಿವಿನಂಚಿನಲ್ಲಿರುವ ಪರಿಸರ ವ್ಯವಸ್ಥೆಗಳನ್ನು ರಕ್ಷಿಸಲು ಡೇಟಾವನ್ನು ಬಳಸಬಹುದು.ವಿಪತ್ತು ನಿರ್ವಹಣೆ: ಭೂಕಂಪಗಳು, ಭೂಕುಸಿತಗಳು, ಪ್ರವಾಹಗಳು, ಜ್ವಾಲಾಮುಖಿ ಚಟುವಟಿಕೆಗಳು ಮತ್ತು ಇತರ ನೈಸರ್ಗಿಕ ವಿಕೋಪಗಳ ಬಗ್ಗೆ ನಿಸಾರ್ ರಿಯಲ್ ಟೈಂ ಡೇಟಾವನ್ನು ಒದಗಿಸಲಿದೆ.ಅಧಿಕಾರಿಗಳು ಈ ಡೇಟಾವನ್ನು ಬಳಸಿಕೊಂಡು ಹಾನಿಯನ್ನು ನಕ್ಷೆ ಮಾಡಲು, ವಿಪತ್ತಿನ ಪ್ರಗತಿಯನ್ನು ಪತ್ತೆಹಚ್ಚಲು ಸಹಕಾರಿಯಾಗಲಿದೆ. ಹವಾಮಾನ ಮೇಲ್ವಿಚಾರಣೆ: ಉಪಗ್ರಹವು ಹಿಮನದಿ ಕರಗುವಿಕೆ, ಸಮುದ್ರ ಮಟ್ಟ ಏರಿಕೆ, ಮಣ್ಣಿನ ತೇವಾಂಶ ಟ್ರ್ಯಾಕ್ ಮಾಡುತ್ತದೆ. ವಿಜ್ಞಾನಿಗಳಿಗೆ ಜಾಗತಿಕ ತಾಪಮಾನ

ಏರಿಕೆಯ ವೇಗ ಮತ್ತು ಅದರ ಪ್ರಾದೇಶಿಕ ಪರಿಣಾಮಗಳನ್ನು ಚೆನ್ನಾಗಿ ಅರ್ಥಮಾಡಿಕೊಳ್ಳಲು ಸಹಾಯ ಮಾಡುತ್ತದೆ.ಕೃಷಿ ಮುನ್ಸೂಚನೆ: ನಿಸಾರ್ ಬೆಳೆ ಬೆಳವಣಿಗೆ, ಮಣ್ಣಿನ ಸ್ಥಳಾಂತರ, ನೀರಾವರಿ ಮಟ್ಟಗಳು ಮತ್ತು ಭೂ ಬಳಕೆಯ ಬದಲಾವಣೆಗಳನ್ನು ಮೇಲ್ವಿಚಾರಣೆ ಮಾಡಬಹುದು. ಇದು ಸರ್ಕಾರಗಳು ಇಳುವರಿಯನ್ನು ಊಹಿಸಲು, ನೀರಿನ ಬಳಕೆಯನ್ನು ನಿರ್ವಹಿಸಲು ಮತ್ತು ಬರ ಬರಬಹುದಾ? ಇಲ್ಲವೋ ಎಂಬುದನ್ನು ಮೊದಲೇ ಪತ್ತೆಹಚ್ಚಲು ಅನುವು ಮಾಡಿಕೊಡುತ್ತದೆ.ನಗರ ಮತ್ತು ಮೂಲಸೌಕರ್ಯ ಯೋಜನೆ: ವಿಶೇಷವಾಗಿ ವೇಗವಾಗಿ ಬೆಳೆಯುತ್ತಿರುವ ನಗರಗಳಲ್ಲಿ ಭೂ ಕುಸಿತ ಮತ್ತು ರಚನಾತ್ಮಕ ಬದಲಾವಣೆಗಳ ಮಾಹಿತಿ ಸಿಗಲಿದೆ. ಅಣೆಕಟ್ಟುಗಳು, ರಸ್ತೆಗಳು, ಸೇತುವೆಗಳು ಮತ್ತು ಕಟ್ಟಡಗಳ ಮೇಲ್ವಿಚಾರಣೆಯಲ್ಲಿ ಉಪಗ್ರಹ ಸಹಾಯ ಮಾಡಲಿದೆ.

## ಶೇ.6.4ರಷ್ಟು ಬೆಳವಣಿಗೆ

2024 ರಲ್ಲಿ ಶೇಕಡಾ 6.5 ರಷ್ಟು ಬೆಳವಣಿಗೆ ಕಂಡ ಭಾರತವು 2025– 2026 ರಲ್ಲಿ ಶೇಕಡಾ 6.4 ರಷ್ಟು ಬೆಳವಣಿಗೆ ಹೊಂದುವ ನಿರೀಕ್ಷೆಯಿದೆ. ಈ ವರ್ಷ ಮತ್ತು ಮುಂದಿನ ವರ್ಷಕ್ಕೆ ಶೇಕಡಾ 6.4 ರಷ್ಟು ಬೆಳವಣಿಗೆ ದರಗಳು ಏಪ್ರಿಲ್ನಲ್ಲಿ ನಾವು ಹೊಂದಿದ್ದಕ್ಕಿಂತ ಸ್ವಲ್ಪ ಸುಧಾರಣೆಗಳಾಗಿವೆ ಎಂದರು.

ಉದಯೋನ್ಮುಖ ಮಾರುಕಟ್ಟೆ ಮತ್ತು ಅಭಿವೃದ್ಧಿಶೀಲ ಆರ್ಥಿಕತೆಗಳಲ್ಲಿ, ಬೆಳವಣಿಗೆಯು 2025 ರಲ್ಲಿ ಶೇಕಡಾ 4.1 ಮತ್ತು 2026 ರಲ್ಲಿ ಶೇಕಡಾ 4.0 ರಷ್ಟು ಇರುತ್ತದೆ ಎಂದು ಐಎಂಎಫ್ ಹೇಳಿದೆ.

ಏಪ್ರಿಲ್ನಲ್ಲಿನ ಮುನ್ಸೂಚನೆಗೆ ಹೋಲಿಸಿದರೆ, ಚೀನಾದ 2025 ರಲ್ಲಿ ಬೆಳವಣಿಗೆಯನ್ನು 0.8 ಶೇಕಡಾ ಪಾಯಿಂಟ್ನಿಂದ 4.8 ಪ್ರತಿಶತಕ್ಕೆ ಪರಿಷ್ಕರಿಸಲಾಗಿದೆ. ಈ ಪರಿಷ್ಕರಣೆಯು 2025 ರ ಮೊದಲಾರ್ಧದಲ್ಲಿ ನಿರೀಕ್ಷೆಗಿಂತ ಬಲವಾದ ಚಟುವಟಿಕೆಯನ್ನು ಮತ್ತು ಯುಎಸ್–ಚೀನಾ ಸುಂಕಗಳಲ್ಲಿನ ಗಮನಾರ್ಹ ಕಡಿತವನ್ನು ಪ್ರತಿಬಿಂಬಿಸುತ್ತದೆ.

2026 ರಲ್ಲಿ ಬೆಳವಣಿಗೆಯನ್ನು ಶೇಕಡಾ 4.2ರಷ್ಟು ಅಂದಾಜಿಸಲಾಗಿದೆ, 2025 ರಲ್ಲಿ ಜಾಗತಿಕ ಬೆಳವಣಿಗೆ ಶೇಕಡಾ ಮೂರು ಮತ್ತು 2026 ರಲ್ಲಿ ಶೇಕಡಾ 3.1 ಎಂದು ಐಎಂಎಫ್ ಹೇಳಿದೆ. 2025 ರ ಮುನ್ಸೂಚನೆಯು ಏಪ್ರಿಲ್ 2025 ರ ವಿಶ್ವ ಆರ್ಥಿಕ ಮುನ್ನೋಟದ ಉಲ್ಲೇಖ ಮುನ್ಸೂಚನೆಗಿಂತ ಶೇಕಡಾ 0.2 ರಷ್ಟು ಹೆಚ್ಚಾಗಿದೆ. 2026 ಕ್ಕೆ ಶೇಕಡಾ 0.1 ರಷ್ಟು ಹೆಚ್ಚಾಗಿದೆ.

ಮುಂದುವರಿದ ಆರ್ಥಿಕತೆಗಳಲ್ಲಿ ಬೆಳವಣಿಗೆ 2025 ರಲ್ಲಿ ಶೇಕಡಾ 1.5 ಮತ್ತು 2026 ರಲ್ಲಿ ಶೇಕಡಾ 1.6 ಎಂದು ಅಂದಾಜಿಸಲಾಗಿದೆ. ಯುನೈಟೆಡ್ ಸ್ಟೇಟ್ಸ್ನಲ್ಲಿ, ಏಪ್ರಿಲ್ 2 ರಂದು ಘೋಷಿಸಲಾದ ಸುಂಕ ದರಗಳಿಗಿಂತ ಕಡಿಮೆ ಮಟ್ಟದಲ್ಲಿ ಸ್ಥಿರವಾಗುವುದು ಮತ್ತು ಆರ್ಥಿಕ ಪರಿಸ್ಥಿತಿಗಳು ಸಡಿಲಗೊಳ್ಳುವುದರಿಂದ, ಆರ್ಥಿಕತೆಯು 2025 ರಲ್ಲಿ ಶೇಕಡಾ 1.9 ದರದಲ್ಲಿ ವಿಸ್ತರಿಸುವ ನಿರೀಕ್ಷೆಯಿದೆ.

## ಒಟ್ಟಿಗೆ ಹರಿಯಲು ಸಾಧ್ಯವಿಲ್ಲ

ಒಪ್ಪಂದವಾಗಿದೆ. ಒಂದು ದೇಶವು ತನ್ನ ಪ್ರಮುಖ ನದಿಗಳನ್ನು ಆ ನದಿಯ ಮೇಲೆ ಹಕ್ಕುಗಳಿಲ್ಲದೆ ಮುಂದಿನ ದೇಶಕ್ಕೆ ಹರಿಯಲು ಅನುಮತಿಸಿದ ವಿಶ್ವದ ಯಾವುದೇ ಒಪ್ಪಂದವನ್ನು ನಾವು ಯೋಚಿಸಲೂ ಸಾಧ್ಯವಿಲ್ಲ. ಆದ್ದರಿಂದ ಇದು ಅಸಾಧಾರಣ ಒಪ್ಪಂದವಾಗಿತ್ತು. ನಾವು ಅದನ್ನು ಸ್ಥಗಿತಗೊಳಿಸಿದಾಗ, ಈ ಘಟನೆಯ ಇತಿಹಾಸವನ್ನು ನೆನಪಿಸಿಕೊಳ್ಳುವುದು ಮುಖ್ಯವಾಗಿದೆ.

ನಿನ್ನೆ ನಾನು ಜನರನ್ನು ಕೇಳಿದೆ, ಕೆಲವರು ಐತಿಹಾಸಿಕ ವಿಷಯಗಳನ್ನು ಮರೆತುಬಿಡಬೇಕೆಂದು ಬಯಸುತ್ತಾರೆ. ಅವರು ಕೆಲವು ವಿಷಯಗಳನ್ನು ಮಾತ್ರ ನೆನಪಿಸಿಕೊಳ್ಳಲು ಇಷ್ಟಪಡುತ್ತಾರೆ ಎಂದು ವಿರೋಧ ಪಕ್ಷದವರಿಗೆ ತಿರುಗೇಟು ನೀಡಿದರು.

ಪಾಕಿಸ್ತಾನವು ಭಯೋತ್ಪಾದನೆಗೆ ತನ್ನ ಬೆಂಬಲವನ್ನು ತ್ಯಜಿಸುವವರೆಗೆ ಸಿಂಧೂ ಜಲ ಒಪ್ಪಂದವನ್ನು ಸ್ಥಗಿತಗೊಳಿಸಲಾಗುತ್ತದೆ. ರಕ್ತ ಮತ್ತು ನೀರು ಒಟ್ಟಿಗೆ ಹರಿಯುವುದಿಲ್ಲ. ಪಹಲ್ಗಾಮ್ ಭಯೋತ್ಪಾದಕ ದಾಳಿ ತೀವ್ರ ಖಂಡನೀಯ. ಹೊಣೆಗಾರಿಕೆ ಮತ್ತು ನ್ಯಾಯ ಇರಬೇಕಿತ್ತು ಎಂದರು.

ಕಳೆದ ದಶಕದಿಂದ ಭಾರತ, ಭಯೋತ್ಪಾದನೆ ವಿಷಯವನ್ನು ಜಾಗತಿಕ ಕಾರ್ಯಸೂಚಿಯಲ್ಲಿ ಇರಿಸಲು ಸಾಧ್ಯವಾಗಿದೆ. ಅದು ಃಖಖಅಖ, ಖಅಔ, ಕಿಗಂಆ ಆಗಿರಲಿ ಅಥವಾ ದ್ವಿಪಕ್ಷೀಯ ಮಟ್ಟದಲ್ಲಿರಲಿ, 26 ವರ್ಷಗಳಿಂದ ಬೇಕಾಗಿದ್ದ ತಹವ್ವೂರ್ ರಾಣಾನನ್ನು ಅಂತಿಮವಾಗಿ ಮೋದಿ ಸರ್ಕಾರ ಮರಳಿ ಕರೆತಂದು ಇಂದು ದೇಶದಲ್ಲಿ ವಿಚಾರಣೆ ಎದುರಿಸುತ್ತಿದ್ದಾನೆ ಎಂದರು.

ಪ್ರಧಾನಿ–ಟ್ರಂಪ್ ಮಧ್ಯೆ ಕರೆಯಿಲ್ಲ

ಏಪ್ರಿಲ್ 22 ರಿಂದ ಜೂನ್ 16 ರವರೆಗೆ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಪ್ರಧಾನಿ ಮೋದಿ ನಡುವೆ ಒಂದೇ ಒಂದು ಫೋನ್ ಕರೆ ಕೂಡ ನಡೆದಿಲ್ಲ ಎಂದು ರಾಜ್ಯಸಭೆಯಲ್ಲಿ ಆಪರೇಷನ್ ಸಿಂದೂರ್ ಕುರಿತು ಚರ್ಚೆಯ ಸಂದರ್ಭದಲ್ಲಿ ಜೈಶಂಕರ್ ಹೇಳಿದರು.

ಆಪರೇಷನ್ ಸಿಂದೂರ್ ಆರಂಭವಾದಾಗ, ಪರಿಸ್ಥಿತಿ ಎಷ್ಟು ಗಂಭೀರವಾಗಿದೆ ಮತ್ತು ಇದು ಎಷ್ಟು ಕಾಲ ಮುಂದುವರಿಯುತ್ತದೆ ಎಂಬುದನ್ನು ನೋಡಲು ಹಲವಾರು ದೇಶಗಳು ನಮ್ಮನ್ನು ಸಂಪರ್ಕಿಸಿದ್ದವು. ನಾವು ಯಾವುದೇ ಮಧ್ಯಸ್ಥಿಕೆಗೆ ಮುಕ್ತವಾಗಿಲ್ಲ ಎಂದು ಎಲ್ಲಾ ದೇಶಗಳಿಗೆ ಒಂದೇ ಸಂದೇಶವನ್ನು ನೀಡಿದ್ದೇವೆ. ನಮ್ಮ ಮತ್ತು ಪಾಕಿಸ್ತಾನದ ನಡುವಿನ ಯಾವುದೇ ವಿಷಯವು ದ್ವಿಪಕ್ಷೀಯವಾಗಿರುತ್ತದೆ. ನಾವು ಪಾಕಿಸ್ತಾನದ ದಾಳಿಗೆ ಪ್ರತಿಕ್ರಿಯಿಸಿದ್ದೇವೆ, ಮುಂದೆಯೂ ಪ್ರತಿಕ್ರಿಯಿಸುತ್ತಲೇ ಇರುತ್ತೇವೆ. ಆ ಹೋರಾಟ ನಿಲ್ಲಬೇಕಾದರೆ, ಪಾಕಿಸ್ತಾನವು ಡಿಜಿಎಂಒ ಮೂಲಕ ವಿನಂತಿ ಮಾಡಬೇಕು ಎಂದು ಸ್ಪಷ್ಟವಾಗಿ ತಿಳಿಸಿದರು.

ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಭಾರತದ ಪ್ರತಿಕ್ರಿಯೆ ಕುರಿತು ಮಾತನಾಡುತ್ತಾ ವಿದೇಶಾಂಗ ಸಚಿವರು, ನಾವು ಪಾಕಿಸ್ತಾನ ದಾಳಿಗೆ ಪ್ರತಿಕ್ರಿಯೆ ನೀಡಿದ್ದೇವೆ. ಅದು ದಾಳಿ ಮಾಡಿದಾಗಲೆಲ್ಲಾ ನಾವು ಪ್ರತಿಕ್ರಿಯಿಸುತ್ತಲೇ ಇರುತ್ತೇವೆ. ಭಾರತ ಮಧ್ಯಸ್ಥಿಕೆಗೆ ಮುಕ್ತವಾಗಿಲ್ಲ, ನಾವು ಪರಮಾಣು ಬೆದರಿಕೆಯನ್ನು ಒಪ್ಪುವುದಿಲ್ಲ ಎಂಬ ಸಂದೇಶ ನೀಡಿದ್ದೇವೆ ಎಂದರು.

ಟಿಆರ್ಎಫ್ ನ್ನು ಭಯೋತ್ಪಾದಕ ಘಟಕವೆಂದು ಅಮೆರಿಕ ಘೋಷಿಸಲು ಮೋದಿ ಸರ್ಕಾರದ ಪ್ರಯತ್ನಗಳ ಬಗ್ಗೆಯೂ ವಿದೇಶಾಂಗ ಸಚಿವರು ಮಾತನಾಡಿದರು.

ಭಾರತದ ರಾಜತಾಂತ್ರಿಕತೆಯು ಟಿಆರ್ಎಫ್ ನ್ನು ಭಯೋತ್ಪಾದಕ ಸಂಘಟನೆ ಎಂದು ಅಮೆರಿಕದಿಂದ ಘೋಷಿಸುವಲ್ಲಿ ಯಶಸ್ವಿಯಾಗಿದೆ. ರೆಸಿಸ್ಟೆನ್ಸ್ ಫ್ರಂಟ್ ಪಾಕಿಸ್ತಾನ ಮೂಲದ ಎಲ್ಇಟಿಯ ಪ್ರಾಕ್ಸಿ ಎಂದು ನಾವು ಯುಎನ್ ಮಾನ್ಯತೆಯನ್ನು ಪಡೆಯಲು ಸಾಧ್ಯವಾಯಿತು ಎಂದು ಹೇಳಿದರು.

ಪಹಲ್ಗಾಮ್ ಭಯೋತ್ಪಾದಕ ದಾಳಿ ಮತ್ತು ಆಪರೇಷನ್ ಸಿಂದೂರ್ ಕುರಿತ ವಿಶೇಷ ಚರ್ಚೆ ಸಂಸತ್ತಿನಲ್ಲಿ ಮೂರನೇ ದಿನಕ್ಕೆ ಕಾಲಿಟ್ಟಾಗ, ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರು ಆಪರೇಷನ್ ಸಿಂದೂರ್ ಚರ್ಚೆಯ ಕುರಿತು ಸಂಸತ್ತಿನಲ್ಲಿ ಸರ್ಕಾರದ ಉತ್ತರವನ್ನು ಮುನ್ನಡೆಸಿದರು.

## ಪತ್ರಕರ್ತರು ಜನರ ಸಮಸ್ಯೆಗಳಿಗೆ ಸ್ಪಂದಿಸಿ ಸಮಾಜದ ಕಣ್ಣು ತೆರೆಸುವ ಕೆಲಸ ಮಾಡುತ್ತಾರೆ




ಮಲ್ಲಮ್ಮ ನುಡಿ ವಾರ್ತೆ ಔರಾದ:ಜು.30:ಪತ್ರಕರ್ತರು ಜನರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಸಮಾಜದ ಕಣ್ಣು ತೆರೆಸುವ ಕೆಲಸ ಮಾಡುತ್ತಿರುವುದು ನೀಜಕ್ಕೂ ಶ್ಲಾಘನೀಯ ಕಾರ್ಯ ಎಂದು ಭಾಲ್ಕಿ ಹಿರೇಮಠ ಸಂಸ್ಥಾನದ ಪಿಠಾಧಿಪತಿ ಗುರುಬಸವ ಪಟ್ಟದೇವರು ತಿಳಿಸಿದರು.

ಔರಾದ ಪಟ್ಟಣದ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಕರ್ನಾಟಕ ಮಿಡಿಯಾ ಜರ್ನಲಿಸ್ಟ್ ಯೂನಿಯನ್ ವತಿಯಿಂದ ಆಯೋಜಿಸಿದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿ ಪತ್ರಕರ್ತರು ಪತ್ರಿಕೆ ಮೂಲಕ ಸಮಾಜಕ್ಕೆ ಸತ್ಯಾಂಶ ನೀಡುತ್ತಾರೆ ಅತಿ ರೋಚಕತೆಯಲ್ಲಿ ವಿಶ್ವಾಸಾರ್ಹತೆ ಕಳೆದು ಕೊಳ್ಳದೆ ಇರುವುದು ಪತ್ರಿಕೆಗಳಲ್ಲಿ ನೋಡುತ್ತವೆ ಎಂದರು.

ಎಲ್ಲ ರಂಗದ ಸಮೃದ್ಧಿಗೆ ಕಾರಣ ಪತ್ರಿಕೆಗಳು, ಸಾಮಾಜಿಕ ಸಮಸ್ಯೆಗಳ ಪರಿಹಾರಕ್ಕೆ ಪತ್ರಿಕೆಗಳು ಸನ್ನಧರಾಗಬೇಕು. ಪತ್ರಿಕಾ ರಂಗ ಕನ್ನಡಿ ಇದ್ದ ಹಾಗೆ ಅಂಕುಡೊಂಕು ತಿದ್ದಿ ಸನ್ಮಾರ್ಗಕ್ಕೆ ತರುವ ಕೆಲಸ ಪತ್ರಿಕೆಗಳು ಮಾಡುತ್ತಿವೆ ಎಂದರು.

ವಿಶೇಷ ಉಪನ್ಯಾಸ ಮಂಡಿಸಿದ ಸಾಹಿತಿ ಡಾ. ಶಿವಲಿಂಗ ಹೇಡೆ ಇಂದು ದೇಶದಲ್ಲಿ ಪ್ರಜಾಪ್ರಭುತ್ವದ ವ್ಯವಸ್ಥೆ ಸರಿದಾರಿಗೆ ಸಾಗುವಲ್ಲಿ ಪತ್ರಿಕಾರಂಗದ ಕೊಡುಗೆ ಅಪಾರವಾಗಿದೆ ಪತ್ರಿಕೆಗಳು ಇಂದಿಗೂ ವಿಶ್ವಾಸರ್ಹ ಪಡೆದುಕೊಂಡಿದ್ದು ಯಾವ ವಿಶ್ವವಿದ್ಯಾಲಯ ನೀಡಿದ ಜ್ಞಾನ ಪತ್ರಿಕೆಗಳಿಂದ ಸಿಗುತ್ತದೆ ಹಿಗಾಗಿ ಪತ್ರಿಕೆಗಳು ಜನಸಾಮಾನ್ಯರ ವಿಶ್ವವಿದ್ಯಾಲಯ ಎನಿಸಿಕೊಂಡಿವೆ ಎಂದರು.ದೇಶದ ಸ್ವತಂತ್ರದಲ್ಲಿ ಪತ್ರಿಕೆಗಳ ಪಾತ್ರ ಮಹತ್ವದ್ದಾಗಿದೆ ದೇಶಕ್ಕೆ ಸ್ವತಂತ್ರ ಸಿಗಲು ಪತ್ರಿಕಾ ರಂಗವೇ ಕಾರಣ ಅನೇಕ ಹೋರಾಟಗಾರರು ಪತ್ರಿಕೆಗಳ ಮೂಲಕವೇ ಸ್ವತಂತ್ರದ ಕಿಚ್ಚು ಹೊತ್ತಿಸಿ ಹೋರಾಟಕ್ಕೆ ಅಣಿಯಾಗಿಸಿದ್ದರು ಎಂದರು.

ಕನ್ನಡ ನಾಡಲ್ಲಿ ಕನ್ನಡ ಭಾಷೆ ಸಮೃದ್ಧವಾಗಿ ಬೆಳೆಯಲು ಪತ್ರಿಕೆಗಳು ಕಾರಣ ಎಂದ ಅವರು ನಾಡಿನ ಸಾಹಿತಿಗಳು, ಕವಿಗಳು ಬೆಳಕಿಗೆ ಬಂದದ್ದು ಕೂಡ ಪತ್ರಿಕೆಗಳಿಂದಲೇ, ಸಾಹಿತ್ಯ ಸಂಸ್ಕೃತಿ, ಭಾಷೆ, ದೇಶ ಕಟ್ಟುವಲ್ಲಿ ಪತ್ರಿಕೆಗಳ ಪಾತ್ರ ಪ್ರಮುಖವಾದುದು. ಪತ್ರಕರ್ತರು ಧೀಮಂತರು ಎಂದು ಶ್ಲಾಘಿಸಿದರು.

ತಹಸೀಲ್ದಾರ ಮಹೇಶ ಪಾಟೀಲ, ತಾಪಂ ಇಒ ಶಿವಕುಮಾರ ಘಾಟೆ, ಪತ್ರಕರ್ತರಾದ ಅನೀಲಕುಮಾರ ದೇಶಮುಖ ಮಾತನಾಡಿ ದೇಶದಲ್ಲಿ ಪತ್ರಿಕೆಗಳು ಇಲ್ಲದಿದ್ದಲ್ಲಿ ಅಜಾರೂಕತೆ ಉಂಟಾಗುತ್ತಿತ್ತು ಅಧಿಕಾರಿಗಳನ್ನು ಕಣ್ಣು ತೆರೆಸುವ ಕೆಲಸ ಮಾಡುತ್ತಿರುವ ಪತ್ರಿಕೆಗಳ ಹಾಗೂ ಪತ್ರಕರ್ತರ ಕಾರ್ಯ ಶ್ಲಾಘನೀಯ. ಸಮಾಜದ ಅಂಕುಡೊಂಕು ತಿದ್ದುವ ಕಾರ್ಯ ಮಾಡುತ್ತಿದೆ. ಸಾಮಾಜಿಕ ಸಮಸ್ಯೆಗಳನ್ನು ಅಧಿಕಾರಿಗಳ ಎದುರಿಗೆ ತರುವ ಕೆಲಸ ಪತ್ರಿಕೆ ವರದಿ ಮಾಡುತ್ತಿವೆ ಇದೇ ರೀತಿ ಸಮಾಜಕ್ಕೆ ಅನುಕೂಲವಾಗುವಂತೆ ಸೇವೆ ಸಲ್ಲಿಸಲಿ ಎಂದರು. ಕಾರ್ಯಕಮದಲ್ಲಿ ಪಟ್ಟಣದಲ್ಲಿನ ಅಮರೇಶ್ವರ ಕೋ ಆಪರೇಟಿವ್ ಬ್ಯಾಂಕ ಹಾಗೂ ಲೋಕಮುದ್ರಾ ಕೋ ಆಪರೇಟಿವ್ ಬ್ಯಾಂಕ್ ವತಿಯಿಂದ ಪತ್ರಕರ್ತರನ್ನು ಸನ್ಮಾನಗೈಯಲಾಯಿತು. ಮಧುಕರ್ ಎಲ್ಲೆನೋರ್ ನಿರೂಪಿಸಿ ವಂದಿಸಿದರು. ಅಮರ ಮುಕ್ತೆದಾರ ಸ್ವಾಗತಿಸಿದರು. ಈ ಸಂಧರ್ಭದಲ್ಲಿ ಪಪಂ ಅಧ್ಯಕ್ಷೆ ಸರುಬಾಯಿ ಘೂಳೆ, ಕರ್ನಾಟಕ ಮಿಡಿಯಾ ಜರ್ನಲಿಸ್ಟ್ ಯುನಿಯನ್ ಅಧ್ಯಕ್ಷ ಸಂತೋಷ ಚಾಂಡೇಶ್ವರೆ, ಕಸಾಪ ಅಧ್ಯಕ್ಷ ಬಿ.ಎಂ ಅಮರವಾಡಿ, ಸರಕಾರಿ ನೌಕರರ ಸಂಘದ ಅಧ್ಯಕ್ಷ ಪಂಡರೀ ಆಡೆ, ಮಾರುತಿ ವಾಡೆಕರ್ ಸೇರಿದಂತೆ ಸಂಘದ ಪದಾಧಿಕಾರಿಗಳು ಪತ್ರಕರ್ತರು ಸಾರ್ವಜನಿಕರು ಇದ್ದರು.

## ಕೆಯುಡಬ್ಲೂಜೆ ಹೊರ ತರುವ ಪತ್ರಕರ್ತ ಸಂಚಿಕೆ ಬಿಡುಗಡೆ ಮಾಡಿದ ಸಿಎಂ



ಬೆಂಗಳೂರು:ಜು.30:ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ(ಕೆಯುಡಬ್ಲೂಜೆ) ಹೊರ ತರುವ ಪತ್ರಕರ್ತ ವಿಶೇಷ ಸಂಚಿಕೆಯನ್ನು ಬುಧವಾರ ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಿಡುಗಡೆ ಮಾಡಿ ಶುಭ ಹಾರೈಸಿದರು.

ರಾಜ್ಯ ಸಂಘದ ಚಟುವಟಿಕೆ, ತುಮಕೂರಿನಲ್ಲಿ ನಡೆದ ರಾಜ್ಯ ಸಮ್ಮೇಳನದ ಮಾಹಿತಿ, ಕೊಪ್ಪಳದಲ್ಲಿ ನಡೆದ ಕೆಯುಡಬ್ಲೂಜೆ ದತ್ತಿನಿಧಿ ಪ್ರಶಸ್ತಿ ಪ್ರದಾನ ಸಮಾರಂಭ, ಮಲೆ ಮಹದೇಶ್ವರದಲ್ಲಿ ನಡೆದ ಪತ್ರಕರ್ತರ ಮಕ್ಕಳ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ, ಬೂಕರ್ ಪ್ರಶಸ್ತಿ ಪುರಸ್ಕೃತರಾದ ಬಾನು ಮುಷ್ತಾಕ್ ಅವರ ಅಭಿನಂದನಾ ಸಮಾರಂಭ, ಕ್ರೀಡಾ ಚಟುವಟಿಕೆ, ಮನೆಯಂಗಳದಲ್ಲಿ ಹಿರಿಯ ಪತ್ರಕರ್ತರಿಗೆ ನಮನ, ಪತ್ರಿಕಾ ದಿನಾಚರಣೆ ಕಾರ್ಯಕ್ರಮದ ಸಮಗ್ರ ಮಾಹಿತಿಯನ್ನು ಈ ಸಂಚಿಕೆ ಒಳಗೊಂಡಿದೆ ಎಂದು ಕೆಯುಡಬ್ಲೂಣಟಿಜಜಿಟಿಜಜಜೆ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರು ಮುಖ್ಯಮಂತ್ರಿಗಳ ಗಮನಕ್ಕೆ ತಂದರು.

ಜು.1ರಂದು ನಡೆದ ಪತ್ರಿಕಾ ದಿನಾಚರಣೆ ಸಂದರ್ಭದಲ್ಲಿ ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ಯೋಜನೆ ಮತ್ತು ಮುಖ್ಯಮಂತ್ರಿಗಳ ಮಾಧ್ಯಮ ಸಂಜೀವಿನಿ ಯೋಜನೆ ಜಾರಿಗೆ ನೀಡಿದ್ದಕ್ಕಾಗಿ ಅಭಿನಂದನೆಗಳನ್ನು ಸಲ್ಲಿಸಲಾಯಿತು. ಇದೇ ಸಂದರ್ಭದಲ್ಲಿ ಕೆಯುಡಬ್ಲೂಜೆ ರಾಜ್ಯ ಖಜಾಂಚಿ ವಾಸುದೇವ ಹೊಳ್ಳ ಮತ್ತಿತರರು ಇದ್ದರು.

## ರೈತರಿಗಾಗಿ ಬಿಜೆಪಿ ಪ್ರತಿಭಟನೆ




ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:ಜು.30: ರಸಗೊಬ್ಬರ ಅಭಾವ ಸೇರಿದಂತೆ ರೈತರ ವಿವಿಧ ಸಮಸ್ಯೆಗಳನ್ನು ಪರಿಹರಿಸುವನಿಟ್ಟಿನಲ್ಲಿ ತಾಲೂಕು ಬಿಜೆಪಿ ಘಟಕದ ವತಿಯಿಂದ ಬುಧವಾರ ರಾಸ್ತಾರೋಕೊ ಅಂದೋಲನ ನಡೆಸಿದರು. ಪಟ್ಟಣದ ಅಂಬೇಡ್ಕರ್ ವೃತ್ತದ ಹತ್ತಿರ ಜಮಾಯಿಸಿದ ಬಿಜೆಪಿ ತಾಲೂಕು ಘಟಕದ ಎಲ್ಲಾ ಪದಾಧಿಕಾರಿಗಳು, ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ, ರೈತ ವಿರೋಧಿ ಕಾಂಗ್ರೆಸ್ ಸರ್ಕಾರಕ್ಕೆ ತರಾ–ಟೆಗೆ ತೆಗೆದುಕೊಂಡರು.ಈ ಸಂದರ್ಭದಲ್ಲಿ ಮಾಜಿ ಶಾಸಕ ಪ್ರಕಾಶ ಖಂಡ್ರೆ, ಬಿಜೆಪಿ ತಾಲೂಕು ಅಧ್ಯಕ್ಷ ವೀರಣ್ಣಾ ಕಾರಬಾರಿ, ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಶಿವರಾಜ ಗಂದಗೆ, ಚನ್ನಬಸವಣ್ಣ ಬಳತೆ, ಸೂರಜಸಿಂಗ ರಜಪೂತ, ಡಾ। ಜಗದೀಶ ಭೂರೆ, ಪಂಡಿತ ಶ್ರೀಮಾಳಿ, ಲುಂಬಿಣಿ ಗೌತಮ, ಸುರೇಶ ಕಾಣೇಕರ, ಸುರೇಶ ಹುಬಳಿಕರ, ಕೆ.ಡಿ.ಗಣೇಶ,

ಸಂಗಮೇಶ ಕಾರಾಮುಂಗೆ, ಬಾಬುರಾವ ಧೂಪೆ ರಾಜೇಂದ್ರ ಪಾಟೀಲ, ಸಂತೋಷ ಪಾಟೀಲ, ಸತೀಶ ನಾಯಿಕ, ದೀಪಕ ಸಿಂಧೆ, ಸೇರಿದಂತೆ ಹಲವರು ಇದ್ದರು.

## ಉತ್ತಮ ಸಮಾಜ ನಿರ್ಮಾಣಕ್ಕೆ ಪತ್ರಕರ್ತರ ಸೇವೆ ಅಗತ್ಯ : ಬಸವರಾಜ ಆರ್ಯ



ಮಲ್ಲಮ್ಮ ನುಡಿ ವಾರ್ತೆ ಹುಮನಾನಾದ್: ಜು.30: ಉತ್ತಮ ಸಮಾಜದ ನಿರ್ಮಾಣಕ್ಕೆ ಪತ್ರಕರ್ತರ ಸೇವೆ ಅಗತ್ಯವಾಗಿದೆ ಎಂದು ಡಾ. ಬಿ.ಆರ್. ಅಂಬೇಡ್ಕರ್ ನಿಗಮದ ಮಾಜಿ ನಿರ್ದೇಶಕ ಬಸವರಾಜ ಆರ್ಯ ಹೇಳಿದರು.

ಪಟ್ಟಣದ ರಾಷ್ಟ್ರೀಯ ಕ್ಲಬ್ ಸಭಾಂಗಣದಲ್ಲಿ ಭಾರತೀಯ ದಲಿತ ಪ್ಯಾಂಥರ ಸಂಘಟನೆ ವತಿಯಿಂದ ಬುಧವಾರ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸ್ವಾಸ್ಥ್ಯ ಸಮಾಜ ಕಟ್ಟುವಲ್ಲಿ ಪತ್ರಿಕೆ ಮತ್ತು ಪತ್ರಕರ್ತರ ಪಾತ್ರ ದೊಡ್ಡದು. ಸದೃಢ ಸಮಾಜ ನಿರ್ಮಾಣದಲ್ಲಿ ಮಾಧ್ಯಮ ರಂಗವು ಮುಂಚೂಣಿಯಾಗಿ ಕಾರ್ಯನಿರ್ವಹಿಸುತ್ತಿದೆ. ಯುವ ಸಮುದಾಯದವರು ಓದುವ ಅಭಿರುಚಿ ಬೆಳೆಸಿಕೊಳ್ಳಬೇಕು. ಸ್ಪರ್ಧಾತ್ಮಕ ಜಗತ್ತಿನಲ್ಲಿ ಹೆಚ್ಚು ಜ್ಞಾನ ಸಂಪಾದಿಸಿ, ದೇಶ ಸೇವೆಯ ಕಾರ್ಯಕ್ಕೆ ಅಣಿಯಾಗಬೇಕು ಎಂದು ತಿಳಿಸಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ದುರ್ಯೋಧನ ಹೂಗಾರ ಮಾತನಾಡಿ, ಪತ್ರಿಕೋದ್ಯಮ ಸಮಾಜದ 4ನೇ ಅಂಗವಾಗಿದೆ. ಸಮಾಜಮುಖಿ ಕಾರ್ಯಗಳಲ್ಲಿ ಪತ್ರರ್ತರ ಕೊಡುಗೆ ಅಪಾರವಾಗಿದೆ. ಧ್ವನಿಯಿಲ್ಲದವರ ಪರವಾಗಿ ಪತ್ರಕರ್ತರು ನಿಲ್ಲಬೇಕು. ಸಂಘಟನೆಯವರು ಕೂಡಾ ಉತ್ತಮ ಹೋರಾಟ ಮಾಡುವ ಮೂಲಕ ಜನ ಮನ್ನಣೆಗೆ ಪಾತ್ರರಾಗಬೇಕು ಎಂದರು.

ಇದೇ ಸಂದರ್ಭದಲ್ಲಿ ಭಾರತೀಯ ದಲಿತ ಪ್ಯಾಂಥರ್ ಸಂಘಟನೆ ತಾಲೂಕ ಅಧ್ಯಕ್ಷ ಗಣಪತಿ ಅಷ್ಟೂರೆ ನೇತೃತ್ವದಲ್ಲಿ ಹುಮನಾಬಾದ್ ತಾಲೂಕಿನ ಎಲ್ಲ ಪತ್ರಕರ್ತರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಭಾರತೀಯ ದಲಿತ ಪ್ಯಾಂತರ ಸಂಘಟನೆ ಜಿಲ್ಲಾಧ್ಯಕ್ಷ ವೈಜಿನಾಥ ಸಿಂಧೆ, ಪತ್ರಕರ್ತರ ಸಂಘದ ಅಧ್ಯಕ್ಷ ದುರ್ಯೋಧನ ಹೂಗಾರ, ಸಂಜೀವಕುಮಾರ ಜುನ್ನಾ, ಸಂಜಯ ದಂತಕಾಳೆ, ವೆಂಕಟೇಶ ಜಾಧವ, ಶೈಲೇಂದ್ರ ಕಾವಡಿ, ಶಶಿಕಾಂತ ಭಗೋಜಿ, ಸುಶೀಲಕುಮಾರ ಭೋಲಾ, ಸಿದ್ಧಾರ್ಥ ಜಾನವೀರ, ಗೌತಮ ಮೇಟಿ, ಗೌತಮ ಜಾನವೀರ, ಮಂಜು ಜಾನವೀರ ಸೇರಿ ಅನೇಕರಿದ್ದರು.

## ಆಗಸ್ಟ್ 1 ರಂದು ಒಳ ಮೀಸಲಾತಿಗಾಗಿ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಆಗಸ್ಟ್ 1 ರಂದು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಅರೆಬೆತ್ತಲೆಗೊಂಡು ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಮಾದಿಗ ದಂಡೋರ ಮಾದಿಗ ಮೀಸಲಾತಿ ಹೋರಾಟ ಸಮಿತಿ ತಾಲ್ಲೂಕು ಅಧ್ಯಕ್ಷ ಲಾಲಪ್ಪ ರಾಂಪುರೆ ಹೇಳಿದರು. ಬುಧವಾರ ಸಮಿತಿ ವತಿಯಿಂದ ನಡೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಒಳ ಮೀಸಲಾತಿ ಜಾರಿಗೊಳಿಸುವ ಅಧಿಕಾರ ರಾಜ್ಯ ಸರ್ಕಾರಕ್ಕೆ ಇದೆ ಎಂದು ಸುಪ್ರಿಂ ಕೋರ್ಟ್ ಆದೇಶ ನೀಡಿ ಒಂದು ವರ್ಷ ಆಗುತ್ತಿದೆ. ಆದರೂ ಸಹ ಇಲ್ಲಿವರೆಗೂ ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರ ಯಾವುದೇ ನಿರ್ಧಾರ ಕೈಗೊಂಡಿಲ್ಲ. ಹೀಗಾಗಿ ಆಗಸ್ಟ್ 1ರಂದು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಅರೆಬೆತ್ತಲೆ ಪ್ರತಿಭಟನೆ ನಡೆಸಲಾಗುತ್ತಿದೆ ಎಂದು ತಿಳಿಸಿದರು. ಸಮಿತಿಯ ಉಪಾಧ್ಯಕ್ಷ ರಾಜು ಮುಸ್ತರಿ ಮಾತನಾಡಿ, ಮಾದಿಗರು ತಮ್ಮ ಬೇಡಿಕೆಗಾಗಿ ಹಲವು ವರ್ಷಗಳಿಂದ ಹೋರಾಟ ಮಾಡುತ್ತ ಬರುತಿದ್ದಾರೆ. ಆದರೆ ಇಲ್ಲಿಯವರೆಗೆ ಮಾದಿಗರ ಒಳ ಮೀಸಲಾತಿ ಸಿಕ್ಕಿಲ್ಲ. ಮಾದಿಗರ ಮತ ಪಡೆದುಕೊಂಡು ಸರ್ಕಾರ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ನಡೆ ಖಂಡನೀಯವಾಗಿದೆ ಎಂದರು. ಸಮಿತಿ ಕಾರ್ಯದರ್ಶಿ ಬಸವರಾಜ ನಿರ್ಣಾ ಮಾತನಾಡಿ, ಒಳಮೀಸಲಾತಿ ನೀಡುವಲ್ಲಿ ವಿಳಂಬ ನೀತಿ ಅನುಸರಿಸುತ್ತಿರುವ ಕಾಂಗ್ರೆಸ್ ಸರ್ಕಾರದ ನಡೆ ವಿರೋಧಿಸಿ ಬರುವ ಆಗಸ್ಟ್ 1ರಂದು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ, ಹೆಚ್ಚಿನ ಜನರು ಪ್ರತಿಭಟನೆಯಲ್ಲಿ ಭಾಗವಹಿಸಿ ಪ್ರತಿಭಟನೆ ಯಶಸ್ವಿಗೊಳಿಬೇಕೆಂದು ಮನವಿ ಮಾಡಿದರು. ಈ ಸಂದರ್ಭದಲ್ಲಿ ಸಿಮೋನ ಉಡಬಾಳ, ಪುಟ್ಟರಾಜ ಇಟಗಾ, ಶ್ರೀಮಂತ ಮೇತ್ರೆ, ರಾಜಕುಮಾರ ವಳಖಿಂಡಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಚಿಟಗುಪ್ಪ ಪಟ್ಟಣ ಹಸಿರು ಸಮೃದ್ಧ, ಸ್ವಚ್ಛ ಪಟ್ಟಣವಾನ್ನಾಗಿ ಮಾಡಿದ

## ಶ್ರೇಯಸ್ಸು ಹುಸಾಮುದ್ದೀನ್ ಅವರಿಗೆ ಸಲ್ಲುತ್ತದೆ:- ರಾಜಕುಮಾರ ಹಡಪದ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಪುರಸಭೆ ಮುಖ್ಯಾಧಿಕಾರಿಯಾಗಿ ಅತ್ಯುತ್ತಮವಾಗಿ ಸೇವೆ ಸಲ್ಲಿಸುತ್ತಾ ಪಟ್ಟಣದ ಅಭಿವೃದ್ಧಿಗೆ ಸಹಾಯವಾಗಿದೆ ಎಂದು ರಾಜಕುಮಾರ್ ಆರ್. ಹಡಪದ ನುಡಿದರು. ಪಟ್ಟಣದ ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದೀನ್ ಬಾಬಾ ಅವರ ಹುಟ್ಟು ಹಬ್ಬದ ಪ್ರಯುಕ್ತ ಸನ್ಮಾನಿಸಿ ಮಾತನಾಡಿದ ಅವರು, ಹುಸಾಮುದ್ದೀನ್ ಬಾಬಾ ಅವರು ಜನಸ್ನೇಹಿ ಅಧಿಕಾರಿಯಾಗಿ ಒಳ್ಳೆಯ ಆಡಳಿತ ನಡೆಸುತ್ತಿದ್ದಾರೆ. ಸರ್ಕಾರದ ಯೋಜನೆಗಳು ಯಶಸ್ವಿಯಾಗಿ ಅನುಷ್ಠಾನ ಮಾಡುತ್ತಿದ್ದಾರೆ. ಚಿಟಗುಪ್ಪ ಪಟ್ಟಣದ ಜನಪ್ರತಿನಿಧಿಗಳ ಮಾರ್ಗದರ್ಶನ ಮೇರೆಗೆ ಅತ್ಯುತ್ತಮವಾಗಿ ಪಟ್ಟಣವನ್ನು ಅಭಿವೃದ್ಧಿ ಪಡಿಸುತ್ತಿದ್ದಾರೆ. ಚಿಟಗುಪ್ಪ ಪಟ್ಟಣ ಹಸಿರು ಪಟ್ಟಣವಾಗಿ ಬದಲಾವಣೆಗೊಳಲ್ಲು ಹುಸಾಮುದ್ದೀನ್ ಬಾಬಾ ಅವರ ಕೊಡುಗೆ ಅಪಾರವಾಗಿದೆ, ಪಟ್ಟಣ ಹಸಿರು, ಸ್ವಚ್ಛ, ಸಮೃದ್ಧ ಪಟ್ಟಣವಾಗಿ ಮಾಡಲು ಹಗಲಿರಳು ಶ್ರಮಿಸುತ್ತಿದ್ದಾರೆ ಎಂದರು. ಈ ಪುರಸಭೆ ಉಪಾಧ್ಯಕ್ಷ ನಸೀರ್ ಖಾನಸಾಬ್, ಪತ್ರಕರ್ತ ಸೈಯದ್ ಅಜೀವ್, ಪ್ರಮುಖರಾದ ಮಹಮ್ಮದ್ ಷರೀಫ್, ಪ್ರವೀಣ ಇಂಜಿನಿಯರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಆಗಸ್ಟ್ 1ರಂದು ಬೀದರನಲ್ಲಿ ಮಾದಿಗ ದಂಡೋರ ಸಮಿತಿಯಿಂದ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:-ಕರ್ನಾಟಕ ರಾಜ್ಯ ಮಾದಿಗ ಹೋರಾಟ ಸಮಿತಿಯವರು ಕರೆ ಕೊಟ್ಟಿರುವ ಒಳ ಮೀಸಲಾತಿಗಾಗಿ ಆಗ್ರಹಿಸಿ ತಾಲೂಕಿನ ಮಾದಿಗ ದಂಡೋರ ಸಮಿತಿಯವರು ಜಿಲ್ಲಾಧಿಕಾರಿಗಳ ಕಚೇರಿ ಮುತ್ತಿಗೆ ಹಾಕುವ ಕಾರ್ಯಕ್ರಮ ಹಾಗೂ ಕೇಶ ಮಂಡನೆ ಮಾಡಿಕೊಂಡು ಪ್ರತಿಭಟನೆ ಮಾಡಲಾಗುವುದು ಎಂದು ಜಿಲ್ಲಾ ಮಾದಿಗ ಹೋರಾಟ ಸಮಿತಿ ಅಧ್ಯಕ್ಷ ಪರಮೇಶ್ವರ್ ಕಾಳಮಂದರಗಿ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದ್ದಾರೆ. ಹುಮನಾಬಾದ ತಾಲೂಕಿನಿಂದ ಒಂದು ಸಾವಿರ ಮಾದಿಗ ಸಮಿತಿ ಸದಸ್ಯರು ಈ ಪ್ರತಿಭಟನೆಯಲ್ಲಿ ಪಾಲ್ಗೊಳ್ಳುತ್ತಾರೆ ಎಂದರು. ಸುಪ್ರೀಂ ಕೋರ್ಟ್ ಆದೇಶ ಇದ್ದರೂ ಕೂಡ ರಾಜ್ಯ ಸರ್ಕಾರ ಒಳ ಮೀಸಲಾತಿ ಜಾರಿಗೊಳಿಸುತ್ತಿಲ್ಲ ಎಂದು ಪರಮೇಶ್ವರ್ ಕಾಳಮಂದರಗಿ ರೂಪಿಸಿದ್ದಾರೆ.

ಹಿರಿಯ ಮುಖಂಡರಾದ ಪ್ರಭುರಾವ ತಾಳಮಡಗಿ ಮಾತನಾಡಿ, ಗುರುವಾರ ನಡೆಯುವ ಪ್ರತಿಭಟನೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಮಾಜದ ಕಾರ್ಯಕರ್ತರು ಭಾಗವಹಿಸಿ ಪ್ರತಿಭಟನೆ ಯಶಸ್ವಿ ಗೊಳಿಸಬೇಕೆಂದು ಮನವಿ ಮಾಡಿದರು.

## ಮಾಜಿ ಸಚಿವರಾದ ಬಸವರಾಜ ಪಾಟೀಲ ಅಟ್ಟೂರ ಅವರಿಗೆ ಶ್ರೀಗಳಿಂದ ಸನ್ಮಾನ



(ವರದಿ. ಡಿ. ಕೆ. ಪ್ರಹ್ಲಾದ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಜು 30 ತಾಲೂಕಿನ ಸುಕ್ಷೇತ್ರ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಮಾಜಿ ಸಚಿವರಾದ ಬಸವರಾಜ ಪಾಟೀಲ ಅಟ್ಟೂರ ಅವರನ್ನು ಆರೋಗ್ಯ ವಿಚಾರಿಸಿ ಅವರ ಬಸವಕಲ್ಯಾಣದ ನಿವಾಸದಲ್ಲಿ ಸತ್ಕರಿಸಿ ಆಶೀರ್ವದಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ನಿವೃತ್ತ ಉಪ ಕಾರ್ಯದರ್ಶಿಗಳಾದ ಬಿ. ಕೆ. ಹಿರೇಮಠ, ಮುಖಂಡರಾದ ವೈದ್ಯನಾಥ ಕಾಮಶೆಟ್ಟಿ ಮೇಘರಾಜ ನಾಗರಾಳೆ ಮುಂತಾದವರು ಉಪಸ್ಥಿತರಿದ್ದರು.

### ಜಿಲ್ಲೆಯ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ 'ಜಿಲ್ಲಾ ಮಟ್ಟದ ವಿಜ್ಞಾನ

## ರಸಪ್ರಶ್ನೆ' ಕಾರ್ಯಕ್ರಮ: ಹೆಸರು ನೋಂದಣಿಗೆ ಜುಲೈ 31 ಕೊನೆಯ ದಿನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.30-ಕಲಬುರಗಿ ಜಿಲ್ಲಾ ವಿಜ್ಞಾನ ಕೇಂದ್ರದಿಂದ ಕಲಬುರಗಿ ನಗರದ ಮುನ್ಸಿಪಲ್ ಗಾರ್ಡನ್ ಹತ್ತಿರದ ಜಿಲ್ಲಾ ವಿಜ್ಞಾನ ಕೇಂದ್ರದಲ್ಲಿ ಜಿಲ್ಲೆಯ ಪ್ರೌಢಶಾಲಾ (8ನೇ ರಿಂದ 10ನೇ ತರಗತಿ) ವಿದ್ಯಾರ್ಥಿಗಳಿಗೆ "ಜಿಲ್ಲಾ ಮಟ್ಟದ ವಿಜ್ಞಾನ ರಸಪ್ರಶ್ನೆ" ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ವಿಜ್ಞಾನ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ರಸಪ್ರಶ್ನೆಯು ಸಾಮಾನ್ಯವಾಗಿ ಸಾಮಾನ್ಯ ವಿಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನದ ಅನ್ವಯಿಕೆ ಮತ್ತು ಪ್ರಸ್ತುತ ಪ್ರವೃತ್ತಿ (General Science, Application of Science & Technology and also current trends) ಗಳನ್ನು ಆಧರಿಸಿರುತ್ತದೆ. ಈ ರಸಪ್ರಶ್ನೆಯು ಇಂಗ್ಲೀಷ್ ಮತ್ತು ಕನ್ನಡದಲ್ಲಿ ಮಾತ್ರ ನಡೆಸಲಾಗುತ್ತಿದೆ. ಪ್ರತಿ ಶಾಲೆಯ 8 ರಿಂದ 10ನೇ ತರಗತಿಯವರೆಗೆ ಓದುತ್ತಿರುವ ಇಬ್ಬರು ವಿದ್ಯಾರ್ಥಿಗಳನ್ನೊಳಗೊಂಡ ತಂಡವನ್ನು ಕಳುಹಿಸಬಹುದು. ಪ್ರಾಥಮಿಕ ಸುತ್ತನ್ನು 2025ರ ಆಗಸ್ಟ್ 1 ರಂದು ಬೆಳಿಗ್ಗೆ 11 ಗಂಟೆಗೆ ಲಿಖಿತ ರಸಪ್ರಶ್ನೆಯನ್ನು ನಡೆಸಲಾಗುತ್ತದೆ. ಪ್ರತಿ ಸುತ್ತಿನಲ್ಲಿ ಆಯ್ಕೆಯಾದ ತಂಡಗಳು ಮುಂದಿನ ಸುತ್ತಿಗೆ ಅರ್ಹರಾಗಿರುತ್ತಾರೆ. ಪ್ರಾಥಮಿಕ ಸುತ್ತು (ಲಿಖಿತ), ಕ್ವಾರ್ಟರ್ ಫೈನಲ್ (ಮೌಖಿಕ), ಸೆಮಿಫೈನಲ್ (ಮೌಖಿಕ) ಮತ್ತು ಅಂತಿಮ (ಮೌಖಿಕ) ಸುತ್ತುಗಳು ಇರುತ್ತವೆ. ರಸಪ್ರಶ್ನೆಯಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಅಥವಾ ಅವರ ಮಾರ್ಗದರ್ಶಿ ಶಿಕ್ಷಕರಿಗೆ ಟಿಎ ಅಥವಾ ಡಿಎ ಪಾವತಿಸಲಾಗುವುದಿಲ್ಲ.

ನಿಗದಿತ ನಮೂನೆಯಲ್ಲಿ ಕೈ-ಬರಹದೊಂದಿಗೆ ಭರ್ತಿ ಮಾಡಿದ ಅರ್ಜಿಯನ್ನು 2025ರ ಜುಲೈ 31ರ ಸಂಜೆ 5 ಗಂಟೆಯೊಳಗಾಗಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ಕಲಬುರಗಿ ವಿಜ್ಞಾನ ಕೇಂದ್ರಕ್ಕೆ ಕೈಯಿಂದ /ಅಂಚೆ ಮೂಲಕ/ಇ-ಮೇಲ್ ಮೂಲಕ dscgeducation@gmail.com) ವಿಳಾಸಕ್ಕೆ ಕಳುಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08472-270608 ಅಥವಾ ವಾಟ್ಸ್‌ಆಪ್ ನಂಬರ್ 9788078048/9447541616 ಮೂಲಕ ಸಂಪರ್ಕಿಸಲು ಕೋರಲಾಗಿದೆ.

## ಉತ್ತಮ ಸಮಾಜ ನಿರ್ಮಾಣಕ್ಕೆ ಪತ್ರಕರ್ತರ ಸೇವೆ ಅಗತ್ಯ : ಬಸವರಾಜ ಆರ್ಯ



ಮಲ್ಲಮ್ಮ ನುಡಿ ವಾರ್ತೆ

ಹುಮನಾನಾದ್: ಉತ್ತಮ ಸಮಾಜದ ನಿರ್ಮಾಣಕ್ಕೆ ಪತ್ರಕರ್ತರ ಸೇವೆ ಅಗತ್ಯವಾಗಿದೆ ಎಂದು ಡಾ. ಬಿ.ಆರ್. ಅಂಬೇಡ್ಕರ್ ನಿಗಮದ ಮಾಜಿ ನಿರ್ದೇಶಕ ಬಸವರಾಜ ಆರ್ಯ ಹೇಳಿದರು.

ಪಟ್ಟಣದ ರಾಷ್ಟ್ರೀಯ ಕ್ಲಬ್ ಸಭಾಂಗಣದಲ್ಲಿ ಭಾರತೀಯ ದಲಿತ ಪ್ಯಾಂಥರ ಸಂಘಟನೆ ವತಿಯಿಂದ ಬುಧವಾರ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸ್ವಾಸ್ಥ್ಯ ಸಮಾಜ ಕಟ್ಟುವಲ್ಲಿ ಪತ್ರಿಕೆ ಮತ್ತು ಪತ್ರಕರ್ತರ ಪಾತ್ರ ದೊಡ್ಡದು. ಸದೃಢ ಸಮಾಜ ನಿರ್ಮಾಣದಲ್ಲಿ ಮಾಧ್ಯಮ ರಂಗವು ಮುಂಚೂಣಿಯಾಗಿ ಕಾರ್ಯನಿರ್ವಹಿಸುತ್ತಿದೆ. ಯುವ ಸಮುದಾಯದವರು ಓದುವ ಅಭಿರುಚಿ ಬೆಳಸಿಕೊಳ್ಳಬೇಕು. ಸ್ಪರ್ಧಾತ್ಮಕ ಜಗತ್ತಿನಲ್ಲಿ ಹೆಚ್ಚು ಜ್ಞಾನ ಸಂಪಾದಿಸಿ, ದೇಶ ಸೇವೆಯ ಕಾರ್ಯಕ್ಕೆ ಅಣಿಯಾಗಬೇಕು ಎಂದು ತಿಳಿಸಿದರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ದುರ್ಯೋಧನ ಹೂಗಾರ ಮಾತನಾಡಿ, ಪತ್ರಿಕೋದ್ಯಮ ಸಮಾಜದ 4ನೇ ಅಂಗವಾಗಿದೆ. ಸಮಾಜಮುಖಿ ಕಾರ್ಯಗಳಲ್ಲಿ ಪತ್ರರ್ತರ ಕೊಡುಗೆ ಅಪಾರವಾಗಿದೆ. ಧ್ವನಿಯಿಲ್ಲದವರ ಪರವಾಗಿ ಪತ್ರಕರ್ತರು ನಿಲ್ಲಬೇಕು. ಸಂಘಟನೆಯವರು ಕೂಡಾ ಉತ್ತಮ ಹೋರಾಟ ಮಾಡುವ ಮೂಲಕ ಜನ ಮನ್ನಣೆಗೆ ಪಾತ್ರರಾಗಬೇಕು ಎಂದರು. ಇದೇ ಸಂದರ್ಭದಲ್ಲಿ ಭಾರತೀಯ ದಲಿತ ಪ್ಯಾಂಥರ್ ಸಂಘಟನೆ ತಾಲೂಕ ಅಧ್ಯಕ್ಷ ಗಣಪತಿ ಅಷ್ಟೋರೆ ನೇತೃತ್ವದಲ್ಲಿ ಹುಮನಾಬಾದ್ ತಾಲೂಕಿನ ಎಲ್ಲ ಪತ್ರಕರ್ತರಿಗೆ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಭಾರತೀಯ ದಲಿತ ಪ್ಯಾಂತರ ಸಂಘಟನೆ ಜಿಲ್ಲಾಧ್ಯಕ್ಷ ವೈಜಿನಾಥ ಸಿಂಧೆ, ಪತ್ರಕರ್ತರ ಸಂಘದ ಅಧ್ಯಕ್ಷ ದುರ್ಯೋಧನ ಹೂಗಾರ, ಸಂಜೀವಕುಮಾರ ಜುನ್ನಾ, ಸಂಜಯ ದಂತಕಾಳೆ, ವೆಂಕಟೇಶ ಜಾಧವ, ಶೈಲೇಂದ್ರ ಕಾವಡಿ, ಶಶಿಕಾಂತ ಭಗೋಜಿ, ಸುಶೀಲಕುಮಾರ ಭೋಲಾ, ಸಿದ್ಧಾರ್ಥ ಜಾನವೀರ, ಗೌತಮ ಮೇಟಿ, ಗೌತಮ ಜಾನವೀರ, ಮಂಜು ಜಾನವೀರ ಸೇರಿ ಅನೇಕರಿದ್ದರು.



ಬಸವಕಲ್ಯಾಣ :- ತಾಲೂಕಿನ ಸುಕ್ಷೇತ್ರ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಕಲಬುರಗಿ ಶ್ರೀ ಶರಣಬಸವೇಶ್ವರ ಸಂಸ್ಥಾನದ ಪೀಠಾಧ್ಯಕ್ಷರಾದ ಡಾ. ಶರಣಬಸಪ್ಪ ಅಪ್ಪ ಅವರ ಆರೋಗ್ಯ ವಿಚಾರಿಸಿ, ಆಶೀರ್ವದಿಸಿದರು. ಈ ಸಂದರ್ಭದಲ್ಲಿ ಮಾತೋಶ್ರೀ ದಾಕ್ಷಾಯಿಣಿ ಅವ್ವಾಜಿ, ಚಿರಂಜೀವಿ ದೊಡ್ಡಪ್ಪ ಅಪ್ಪ ಉಪಸ್ಥಿತರಿದ್ದರು.

## ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ: ಆಕ್ಷೇಪಣೆ ಸಲ್ಲಿಸಲು ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಜುಲೈ.30- 2025-26ನೇ ಸಾಲಿನ ಎನ್.ಹೆಚ್.ಎಂ ಯೋಜನೆಯ ಅಡಿಯಲ್ಲಿ ಬ್ರಿಮ್ಸ್ ಬೋಧಕ ಆಸ್ಪತ್ರೆಗೆ ಗುತ್ತಿಗೆ ಆಧಾರದ ಮೇಲೆ ತಾತ್ಕಾಲಿಕವಾಗಿ ಕರೆದಿರುವ 11 ಶುಶ್ರೂಷಾಧಿಕಾರಿಗಳ ಹುದ್ದೆಗಳ 1:2 ಅನುಪಾತದಲ್ಲಿ 22 ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದ ಸೂಚನ ಫಲಕಕ್ಕೆ ಪ್ರಕಟಿಸಲಾಗಿದ್ದು, ಈ ಆಯ್ಕೆ ಪಟ್ಟಿಗೆ ಆಕ್ಷೇಪಣೆ ಸಲ್ಲಿಸುವವರು ದಿನಾಂಕ: 01-08-2025 ರ ಸಂಜೆ 4.30 ಗಂಟೆಯೊಳಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿಗೆ ಆಕ್ಷೇಪಣೆ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದಿನಾಂಕ: 02.08.2025 ರಂದು ಮುಂಜಾನೆ 10:00 ಗಂಟೆಗೆ 1:2 ಅನುಪಾತದಲ್ಲಿ ಆಯ್ಕೆಯಾದ ಅಭ್ಯರ್ಥಿಗಳ ಮೂಲದಾಖಲಾತಿಗಳನ್ನು ಪರಿಶೀಲಿಸಲಾಗುತ್ತಿದ್ದು ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಮೂಲದಾಖಲಾತಿಗಳೊಂದಿಗೆ ಖುದ್ದಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯಕ್ಕೆ ಹಾಜರಾಗಲು ಅವರು ತಿಳಿಸಿದ್ದಾರೆ.

### ಮರು ವಿನ್ಯಾಸಗೊಳಿಸಿದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆ:

## ರೈತರು ನೋಂದಣಿ ಮಾಡಿಕೊಳ್ಳಲು ಆಗಸ್ಟ್ 11 ರಂದು ಕೊನೆಯ ದಿನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.30-ಪ್ರಸಕ್ತ 2025-26ನೇ ಸಾಲಿನ ಮುಂಗಾರು ಹಂಗಾಮಿಗಾಗಿ ಮರು ವಿನ್ಯಾಸಗೊಳಿಸಿದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯನ್ನು (R-WBCIS) ಅನುಷ್ಠಾನಗೊಳಿಸಲು ಮಂಜೂರಾತಿ ನೀಡಿದ್ದು, ಈ ಯೋಜನೆಯಡಿ ರೈತರು ಹತ್ತಿರದ ಬ್ಯಾಂಕ್, ಗ್ರಾಮ ಒನ್ ಕೇಂದ್ರ ಅಥವಾ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ನೊಂದಾಯಿಸಿಕೊಳ್ಳಲು 2025ರ ಆಗಸ್ಟ್ 11 ರಂದು ಕೊನೆಯ ದಿನವಾಗಿದೆ ಎಂದು ಕಲಬುರಗಿ ಜಿಲ್ಲಾ ಮಟ್ಟದ ತಾಂತ್ರಿಕ ಸಮಿತಿಯ ಅಧ್ಯಕ್ಷರು ಹಾಗೂ ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ತಿಳಿಸಿದ್ದಾರೆ.

ಕಲಬುರಗಿ ಜಿಲ್ಲೆಯಲ್ಲಿ ಈ ಯೋಜನೆ ಅನುಷ್ಠಾನಗೊಳಿಸಲು ಅಗ್ರಿಕಲ್ಚರಲ್ ಇನ್ಸುರೆನ್ಸ್ ಕಂಪನಿ (Agricultural Insurance Company(AIC) ವಿಮಾ ಕಂಪನಿಯು ಆಯ್ಕೆಯಾಗಿರುತ್ತದೆ. ಕಲಬುರಗಿ ಜಿಲ್ಲೆಯಲ್ಲಿ ಪಪ್ಪಾಯ ಮತ್ತು ಹಸಿರು ಮೆಣಸಿನಕಾಯಿ ಬೆಳೆಗಳನ್ನು ಎಲ್ಲಾ ಗ್ರಾಮ ಪಂಚಾಯಿತಿ/ನಗರ ಮತ್ತು ಸ್ಥಳೀಯ ಸಂಸ್ಥೆಯ ವ್ಯಾಪ್ತಿಯಲ್ಲಿ ಹಾಗೂ ದ್ರಾಕ್ಷಿ ಬೆಳೆಯನ್ನು ಅಫಜಲಪೂರ-17, ಆಳಂದ-15, ಚಿಂಚೋಳಿ-1, ಚಿತ್ತಾಪೂರ-1, ಕಲಬುರಗಿ-2, ಜೇವರ್ಗಿ-3 ಹಾಗೂ ಯಡ್ರಾಮಿ ತಾಲ್ಲೂಕಿನ-9 ಗ್ರಾಮ ಪಂಚಾಯಿತಿ/ನಗರ ಮತ್ತು ಸ್ಥಳೀಯ ಸಂಸ್ಥೆಯ ವ್ಯಾಪ್ತಿಯಲ್ಲಿ ಬರುವ ತಾಕುಗಳು ಬೆಳೆ ವಿಮೆ ಯೋಜನೆಗೆ ಒಳಪಡಿಸಲಾಗಿರುತ್ತದೆ. ಹಸಿರು ಮೆಣಸಿನಕಾಯಿ, ಪಪ್ಪಾಯ ಮತ್ತು ದ್ರಾಕ್ಷಿ ಬೆಳೆಗಳಿಗೆ ಪ್ರತಿ ಹೆಕ್ಟರ್‌ಗೆ ಕ್ರಮವಾಗಿ 3,550 ರೂ., 6,700 ರೂ. ಮತ್ತು 14,000 ರೂ. ವಿಮಾ ಕಂತಿನ ಮೊತ್ತ ನಿಗದಿಯಾಗಿದ್ದು, ವಿಮಾ ಮೊತ್ತ ಪ್ರತಿ ಹೆಕ್ಟರ್‌ಗೆ 71,000 ರೂ., 1,34,000 ರೂ. ಮತ್ತು 2,80,000 ರೂ. ಗಳನ್ನು ನಿಗದಿಪಡಿಸಲಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ತಮ್ಮ ಸಂಬಂಧಪಟ್ಟ ತಾಲೂಕಿನ ತೋಟಗಾರಿಕೆ ಇಲಾಖೆಯ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು/ರೈತ ಸಂಪರ್ಕ ಕೇಂದ್ರದ ಸಹಾಯಕ ತೋಟಗಾರಿಕೆ ಅಧಿಕಾರಿಗಳು/ಹತ್ತಿರದ ಬ್ಯಾಂಕುಗಳ ಅಧಿಕಾರಿಗಳನ್ನು ಸಂಪರ್ಕಿಸಲು ಕೋರಿದೆ.

## ಹಸಿರು ಮೆಣಸಿನಕಾಯಿ, ದಾಳಿಂಬೆ, ಮಾವು ಬೆಳೆವಿಮೆಗೆ ಅರ್ಜಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 30- ಸರ್ಕಾರದ ನಡುವಳಿಯಂತೆ ಮರು ವಿನ್ಯಾಸಗೊಳಿಸಿದ ಹವಾಮಾನ ಅಧಾರಿತ ಬೆಳೆ ವಿಮೆ ಯೋಜನೆ 2025ರ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯ ಅಧಿಸೂಚಿತ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ನೀರಾವರಿ ಪ್ರದೇಶದ ಹಸಿ ಮೆಣಸಿನಕಾಯಿ ದಾಳಿಂಬೆ ಮತ್ತು ಮಾವು ಬೆಳೆಗೆ ವಿಮಾ ಮಾಡಿಸಲು ಅರ್ಹ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಹಸಿಮೆಣಸಿನಕಾಯಿ(ನೀರಾವರಿ.) ಬೆಳೆಗೆ ಪ್ರತಿ ಹೆಕ್ಟರ್ ವಿಮಾ ಮೊತ್ತ 71000 ರೂ ಗಳಿದ್ದು, ವಿಮಾ ಕಂತಿನ ಮೊತ್ತ 3550 ರೂ. ಗಳಿರುತ್ತದೆ. ದಾಳಿಂಬೆ ಬೆಳೆಗೆ ಪ್ರತಿ ಹೆಕ್ಟರ್‌ಗೆ ವಿಮಾ ಮೊತ್ತ 127000 ರೂ. ಗಳಾಗಿದ್ದು, ವಿಮಾ ಕಂತಿನ ಮೊತ್ತ 6350 ರೂ ಗಳಿರುತ್ತದೆ ಮತ್ತು ಮಾವು ಬೆಳೆಗಾರರಿಗೆ ಪ್ರತಿ ಹೆಕ್ಟರ್‌ಗೆ ವಿಮಾ ಮೊತ್ತ 80000 ರೂ. ಗಳಾಗಿದ್ದು, ವಿಮಾ ಕಂತಿನ ಮೊತ್ತ 4000 ರೂ, ಗಳಿರುತ್ತದೆ.

ಬೆಳೆ ಸಾಲ ಪಡೆದಿರುವ ಮತ್ತು ಪಡೆಯದ ರೈತರು ವಿಮೆ ಕಂತು ಕಟ್ಟಲು ಹತ್ತಿರದ ರಾಷ್ಟ್ರೀಕೃತ ಬ್ಯಾಂಕುಗಳಿಗೆ ಅಥವಾ ಹತ್ತಿರದ ಕಂಪ್ಯೂಟರ್ ಸೇವಾ ಕೇಂದ್ರಗಳಲ್ಲಿ ನಿಗಧಿತ ಅರ್ಜಿಗಳೊಂದಿಗೆ ಭೂ ದಾಖಲೆಗಳಾದ ಪಹಣಿ, ಬ್ಯಾಂಕ್ ಪಾಸ ಪುಸ್ತಕ, ಆಧಾರ್ ಕಾರ್ಡ ಮತ್ತು ಸ್ವಯಂ ಘೋಷಿತ ಬೆಳೆ ವಿವರಗಳೊಂದಿಗೆ ಆಗಸ್ಟ್ 11ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕು ತೋಟಗಾರಿಕೆ ಇಲಾಖೆ ಅಥವಾ ಸಮೀಪದ ರೈತ ಸಂಪರ್ಕ ಕೇಂದ್ರ ಹಾಗೂ ಸಮೀಪದ ಯಾವುದೇ ಬ್ಯಾಂಕ್‌ಗಳಿಗೆ, ಸಿಎಸ್‌ಸಿ ಕೇಂದ್ರಗಳಿಗೆ ಹಾಗೂ ಗ್ರಾಮ ಒನ್ ಕೇಂದ್ರಗಳಿಗೆ ಬೇಟಿ ನೀಡಿ ಯೋಜನೆಯಡಿ ಆಯ್ಕೆಯಾಗಿರುವ ಗ್ರಾಮ ಪಂಚಾಯತ ಮತ್ತು ಬೆಳೆಗಳ ಬಗ್ಗೆ ಮಾಹಿತಿ ಪಡೆದು-ಕೊಂಡು ವಿಮೆಗಾಗಿ ಅರ್ಜಿ ಸಲ್ಲಿಸುವಂತೆ ರೈತ ಬಾಂದವರಲ್ಲಿ ತೋಟಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಹಕಾರ ಸಂಘಗಳ ಸಮಾಪನೆಗೊಳಿಸಲು ಆಕ್ಷೇಪಣೆಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 30- ರಾಯಚೂರು ಉಪ ವಿಭಾಗದ ಸಹಕಾರ ಸಂಘಗಳು ಸ್ಥಗಿತಗೊಂಡಿದ್ದು, ಇವುಗಳನ್ನು ಸಮಾಪನೆಗೊಳಿಸಲು ಸದಸ್ಯರಿಂದ ಅಥವಾ ಸಾರ್ವಜನಿಕರಿಂದ ಆಕ್ಷೇಪಣೆಗೆ ಅರ್ಜಿ ಆಹ್ವಾನಿಸಲಾಗಿದೆ. ಉಪ ವಿಭಾಗದ ವ್ಯಾಪ್ತಿಯಲ್ಲಿ ಬರುವ ಸಹಕಾರ ಸಂಘಗಳು, ಹಲವು ವರ್ಷಗಳಿಂದ ಸಂಘದ ಉದ್ದೇಶಿತ ಕಾರ್ಯನಿರ್ವಹಿಸದೇ ಸ್ಥಗಿತಗೊಂಡಿರುವುದರಿಂದ ಸಂಘಗಳನ್ನು ಸಮಾಪನೆಗೊಳಿಸಬೇಕಿದೆ. ಈ ಸಂಘಗಳನ್ನು ಸಮಾಪನೆಗೊಳಿಸಲು ಸದಸ್ಯರಿಂದ ಅಥವಾ ಸಾರ್ವಜನಿಕರಿಂದ ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಅದನ್ನು ಸಮರ್ಥಿಸುವ ದಾಖಲೆಗಳ ಸಹಿತವಾಗಿ ಈ ನೋಟೀಸು ಪ್ರಕಟಗೊಂಡ ಹದಿನೈದು (15) ದಿನಗಳೊಳಗಾಗಿ ಸಹಕಾರ ಸಂಘಗಳ ಸಂಬಂಧಪಟ್ಟ ಸಹಕಾರ ಸಂಘಗಳ ಸಹಾಯಕ ನಿಬಂಧಕರು ರಾಯಚೂರು ಇವರಿಗೆ ಸಲ್ಲಿಸಬಹುದಾಗಿದೆ. ನಿಗಧಿತ ಕಾಲಾವಧಿಯಲ್ಲಿ ಯಾವುದೇ ಆಕ್ಷೇಪಣೆ ಮತ್ತು ಅದನ್ನು ಸಮರ್ಥಿಸುವ ದಾಖಲೆಗಳ ಸಹಿತ ಸಲ್ಲಿಸದಿದ್ದಲ್ಲಿ ಯಾವುದೇ ಆಕ್ಷೇಪಣೆ ಇಲ್ಲ ಎಂದು ಪರಿಗಣಿಸಿ ಸ್ಥಗಿತ ಸಹಕಾರ ಸಂಘಗಳ ಸಮಾಪನೆಗಾಗಿ ಕ್ರಮವಹಿಸಲಾಗುವುದು. ಸ್ಥಗಿತವಾದ ಸಹಕಾರ ಸಂಘಗಳ ವಿವರ: ರಾಯಚೂರು ಸಹಕಾರ ಇಲಾಖೆ ನೌಕರರ ಪತ್ತಿನ ಸಹಕಾರ ಸಂಘ ನಿ, ರಾಯಚೂರು ನೋಂದಣಿ ಸಂಖ್ಯೆ:250 ದಿನಾಂಕ:01-09-1965., ಚಲುವಾದಿ ನೌಕರರ ಪತ್ತಿನ ಸಹಕಾರ ಸಂಘ ನಿ, ರಾಯಚೂರು ನೋಂದಣಿ ಸಂಖ್ಯೆ:25517 ದಿನಾಂಕ:23-03-2010., ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ ನಿ, ಮಟಮಾರಿ ನೋಂದಣಿ ಸಂಖ್ಯೆ:9780 ದಿನಾಂಕ:10-10-1983., ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ ನಿ, ಉಡಮಗಲ್ ಖಾನಾಪೂರು ನೋಂದಣಿ ಸಂಖ್ಯೆ:9798 ದಿನಾಂಕ:31-01-1986., ಶ್ರೀರಾಮನಗರ ಕ್ಯಾಂಪ್ (ಜಾನಕಿರಾಮಯ್ಯ ಕ್ಯಾಂಪ್) ಹಾಲು ಉತ್ಪಾದಕರ ಸಹಕಾರ ಸಂಘ ನಿ, ಶ್ರೀರಮನಗರ ಕ್ಯಾಂಪ್ ನೋಂದಣಿ ಸಂಖ್ಯೆ:31809 ದಿನಾಂಕ:16-02-2006., ಗೋನಾಲ ಹಾಲು ಉತ್ಪಾದಕರ ಸಹಕಾರ ಸಂಘ ನಿ ವಿಜಯನಗರ ಕ್ಯಾಂಪ್ ನೋಂದಣಿ ಸಂಖ್ಯೆ:11919 ದಿನಾಂಕ:02-12-1986., ಹಾಲು ಉತ್ಪಾದಕರ ಸಹಕಾರ ಸಂಘ ನಿ, ಜಯನಗರ ಕ್ಯಾಂಪ್ ನೋಂದಣಿ ಸಂಖ್ಯೆ:15165 ದಿನಾಂಕ:05-09-1990., ಸೂರ್ಯಬಾಬು ಕ್ಯಾಂಪ್ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ನಿ. ಸೂರ್ಯಬಾಬು ಕ್ಯಾಂಪ್ ನೋಂದಣಿ ಸಂಖ್ಯೆ:31823 ದಿನಾಂಕ:16-10-2006., ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ನಿ, ರಾಜಲಬಂಡಾ ನೋಂದಣಿ ಸಂಖ್ಯೆ:49421 ದಿನಾಂಕ:24-06-2020., ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ನಿ, ಸೂರ್ಯನಗರ ಕ್ಯಾಂಪ್ ನೋಂದಣಿ ಸಂಖ್ಯೆ:15200 ದಿನಾಂಕ:28-01-1995., ರಾಯಚೂರು ಪೊಲೀಸ್ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ನಿ, ರಾಯಚೂರು ನೋಂದಣಿ ಸಂಖ್ಯೆ:22406 ದಿನಾಂಕ:31-12-1997., ರಾಘವೇಂದ್ರ ಗೃಹ ನಿರ್ಮಾಣ ಸಹಕಾರ ಸಂಘ ನಿ, ರಾಯಚೂರು ನೋಂದಣಿ ಸಂಖ್ಯೆ:13859 ದಿನಾಂಕ:12-10-1986., ಬಸವೇಶ್ವರ ಗೃಹ ನಿರ್ಮಾಣ ಸಹಕಾರ ಸಂಘ ನಿ, ರಾಯಚೂರು ನೋಂದಣಿ ಸಂಖ್ಯೆ:18 ದಿನಾಂಕ:22-07-1963., ಶ್ರೀರಾಮನಗರ ಗೃಹ ನಿರ್ಮಾಣ ಸಹಕಾರ ಸಂಘ ನಿ, ರಾಯಚೂರು ನೋಂದಣಿ ಸಂಖ್ಯೆ:8438 ದಿನಾಂಕ:22-08-1973ರ ಸಹಕಾರ ಸಂಘಗಳನ್ನು ಸಮಾಪನೆಗಾಗಿ ಕ್ರಮವಹಿಸಲಾಗುವುದು ಎಂದು ರಾಯಚೂರು ಉಪ ವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೇವರ್ಗಿಯಲ್ಲಿ ಪತ್ರಿಕಾ ಭವನ ನಿರ್ಮಾಣ : ಡಾ.ಅಜಯಸಿಂಗ್



ಮಲ್ಲಮ್ಮ ನುಡಿ ವಾರ್ತೆ

ಜೇವರ್ಗಿ:ಜು.30:'ಪಟ್ಟಣದಲ್ಲಿ ಸೂಕ್ತ ನಿವೇಶನ ಗುರುತಿಸಿದ್ದೇ ಆದಲ್ಲಿ ಸುಸಜ್ಜಿತ ಪತ್ರಿಕಾ ಭವನ ನಿರ್ಮಾಣಕ್ಕೆ ಅಗತ್ಯ ಅನುದಾನ ಬಿಡುಗಡೆ ಮಾಡಲಾಗುವುದು' ಎಂದು ಕೆಕೆಆರ್‌ಡಿಬಿ ಅಧ್ಯಕ್ಷ, ಶಾಸಕ ಡಾ.ಅಜಯಸಿಂಗ್ ಭರವಸೆ ನೀಡಿದರು.ಪಟ್ಟಣದ ಟೌನ್‌ಹಾಲ್‌ನಲ್ಲಿ ಕರ್ನಾಟಕ ಜರ್ನಲಿಸ್ಟ್ ಯೂನಿಯನ್ ತಾಲ್ಲೂಕು ಘಟಕದ ವತಿಯಿಂದ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಹಾಗೂ ಸಾಧಕರ ಸನ್ಮಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

'ಸಮಾಜಕ್ಕೆ ಪತ್ರಕರ್ತರ ಕೊಡುಗೆ ಬಹಳಷ್ಟಿದೆ. ಧೈರ್ಯ, ಸ್ಥೈರ್ಯದಿಂದ ಎಷ್ಟೋ ವಿಷಯಗಳನ್ನು ಪತ್ರಕರ್ತರೇ ಬಯಲಿಗೆಳೆಯುವ ನಿಜವಾದ ಹೀರೋಗಳು. ರಾಜ್ಯ ಹಾಗೂ ದೇಶದ ಎಲ್ಲ ಚಟುವಟಿಕೆಗಳಲ್ಲಿ ಪತ್ರಿಕಾ ಕ್ಷೇತ್ರದ ಪಾತ್ರ ಮಹತ್ವದ್ದಾಗಿದೆ. ಮಾಹಿತಿ ತಂತ್ರಜ್ಞಾನದ ಇಂದು ಕ್ಷಣಮಾತ್ರದಲ್ಲಿ ಮಾಹಿತಿಗಳು ಹರಿದು ಬರುತ್ತಿದೆ' ಎಂದರು. ಬೆಳವಣಿಗೆಯಿಂದಾಗಿ 'ಜನಾಭಿಪ್ರಾಯ ಮೂಡಿಸುವ ಕೆಲಸವನ್ನು ಪತ್ರಕರ್ತರು ಮಾಡುತ್ತಿದ್ದಾರೆ. ಸುದ್ದಿ ತೆಗೆದು ಪ್ರಚುರಪಡಿಸುವ ಆಸಕ್ತಿ ಹಾಗೂ ಛಲ ಇದ್ದವರು ಮಾತ್ರ ಪತ್ರಿಕಾ ಕ್ಷೇತ್ರದಲ್ಲಿ ಯಶಸ್ವಿ ಆಗುತ್ತಾರೆ' ಎಂದರು.ಈ ವೇಳೆ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಮಹನೀಯರಿಗೆ ಮಾಧ್ಯಮ ರತ್ನ, ಸಮಾಜ ಸೇವಾ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಮಾಜಿ ಶಾಸಕ ದೊಡ್ಡಪ್ಪಗೌಡ ಪಾಟೀಲ ನರಿಬೋಳ, ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಶಿವರಾಜ ಪಾಟೀಲ ಮಾತನಾಡಿದರು. ಸೊನ್ನದ ಶಿವಾನಂದ ಸ್ವಾಮೀಜಿ, ಚಿಗರಹಳ್ಳಿಯ ಸಿದ್ದಕಬೀರ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಯೂನಿಯನ್ ಅಧ್ಯಕ್ಷ ಮರೆಪ್ಪ ಬೇಗಾರ ಅಧ್ಯಕ್ಷತೆ ವಹಿಸಿದ್ದರು. ಪ್ರಗತಿಪರ ಚಿಂತಕ ಭಗವಂತರಾಯ ಬೆಣ್ಣೂರ ಮಾತನಾಡಿದರು ತಹಶೀಲ್ದಾರ್ ಮಲ್ಲಣ್ಣ ಯಲಗೋಡ, ಪುರಸಭೆ ಮುಖ್ಯಾಧಿಕಾರಿ ಶಂಭುಲಿಂಗ ದೇಸಾಯಿ,ರಾಜಶೇಖರ ಸಾಹು ಸೀರಿ, ಜಿಪಂ ಮಾಜಿ ಸದಸ್ಯರಾದ ಚಂದ್ರಶೇಖರ ಹರನಾಳ, ಶಹಾಪೂರ ವಾಣಿ ಸಂಪಾದಕರು ಹಾಗೂ ಕರ್ನಾಟಕ ಜರ್ನಲ್ ಲಿಸ್ಟ್ ಯೂನಿಯನ್ ಜಿಲ್ಲಾಧ್ಯಕ್ಷರಾದ ಈರಣ್ಣ ಹಾದಿಮನಿ ಕಾಸೀಂ ಪಟೇಲ್ ಮುದಬಾಳ, ರುಕುಂ ಪಟೇಲ ಇಜೇರಿ, ರಮೇಶ್ ಬಾಬು ವಕೀಲ, ಮುನ್ನಾ ಪಟೇಲ ಯಾಳವಾರ, ಬಿ.ಹೆಚ್.ವಾಲಿಪಾಟೀಲ, ಬಂಗಾರಪ್ಪ ಆಡೀನ್, ಸುಧಾ ಭಗವಂತರಾಯ್ ಬೆಣ್ಣೂರ್ ಸಾಯಿಬಣ್ಣ ದೊಡ್ಮನಿ, ಸಿದ್ದಣಗೌಡ ಮಾವನೂರ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರಾದ ಮಾಧ್ಯಮ ರತ್ನ ಸಂಪಾದಕರಾದ ಧನರಾಜ ರಾಥೋಡ್ ಡಾ. ಅಶೋಕ್ ದೊಡ್ಮನಿ ಚಂದ್ರಶೇಖರ್ ಕಟ್ಟಿಮನಿ ಚಂದ್ರಶೇಖರಗೌಡ ಪಾಟೀಲ್ ಸುರೇಶ ಹಿರೇಮಠ್ ಸಿದ್ದನಗೌಡ ಪಾಟೀಲ್ ಮಾಮನೂರ್ ಸಮಾಜ ಸೇವ ರತ್ನ ಪುರಸ್ಕೃತರಾದ ಉದ್ದಮಿಗಳಾದ ಬಸವರಾಜ್ ಪಾಟೀಲ್ ಸೋಮನಾಥಹಳ್ಳಿ ರೆಡ್ಡಿ ಸಮಾಜದ ತಾಲೂಕ ಅಧ್ಯಕ್ಷ ಶಿವ ರೆಡ್ಡಿ ಐನಾಪುರ್ ಬಿಜೆಪಿ ಯುವ ಮುಖಂಡರಾದ ಸುರೇಶ್ ಪಾಟೀಲ್ ನೇದಲಗಿ ಕನ್ನಡ ಸಾಹಿತ್ಯ ಪರಿಷತ್ತ ತಾಲೂಕ ಅಧ್ಯಕ್ಷರಾದ ಎಸ್ ಕೆ ಬಿರೇದಾರ ಸಿದ್ದನಗೌಡ ಪೊಲೀಸ್ ಪಾಟೀಲ್ ಹಳ್ಳಿ ವಕೀಲರಾದ ರವಿಚಂದ್ರ ಗುತೇದಾರ್ ಭಾರತ ಸರ್ಕಾರ ನೊಟರಿ ರಾಜಶೇಖರ್ ಶಿಲ್ಪಿ ವಕೀಲರು ಅಜ್ಜು ಲಕ್ಪತಿ ತಾಲೂಕ್ ಪಂಚಾಯಿತಿ ಮಾಜಿ ಉಪಾಧ್ಯಕ್ಷರದ ಶರಣಪ್ಪ ದೇಸಾಯಿ ಹಾಗೂ ಕಾಂಗ್ರೆಸ್ ಮುಖಂಡರಾದ ಮಲ್ಲಿಕಾರ್ಜುನ ಪೊಲೀಸ್ ಪಾಟೀಲ್ ಬೀರನೂರ್ ಎಸ್ ಡಿ ಎಂ ಸಿ ಮಾಜಿ ಅಧ್ಯಕ್ಷರಾದ ಶಿವಶರಪ್ಪ ಚಿಕ್ಕಮೇಟಿ ಕಲ್ಯಾಣ ಕರ್ನಾಟಕ ಕರವೇ ರಾಜ್ಯ ಅಧ್ಯಕ್ಷರಾದ ಶರಣು ಬೀರನೂರ ಕಾಂಗ್ರೆಸ್ ಮುಖಂಡರಾದ ಬಾಗರೆಡ್ಡಿ ಆಂದೋಲ ಕಾಂಗ್ರೆಸ್ ಯುವ ಮುಖಂಡರಾದ ಸುನಿಲ್ ಚನ್ನೂರ ಖ ಯುವ ಮುಖಂಡರಾದ ಅರುಣ್ ರೆಡ್ಡಿ ಶಿವಪುರ ದಲಿತ ಸಂಘರ್ಷ ಸಮಿತಿ ತಾಲೂಕ ಸಂಚಾಲಕರಾದ ಸಿದ್ರಾಮ ಕಟ್ಟಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ಅಂಬೇಡ್ಕರವಾದ ಜಿಲ್ಲಾ ಸಂಘಟನಾ ಸಂಚಾಲಕರಾದ ಶ್ರೀಹರಿ ಕರಕಿಹಳ್ಳಿ ಗೃಹ ರಕ್ಷಕ ದಳ ಘಟಕ ಅಧಿಕಾರಿ ಯಶವಂತ್ ಮಂದೇವಾಲ ಸೇಂಟ್ ಜಾನ್ ಶಾಲೆಯ ಅಧ್ಯಕ್ಷರಾದ ಭಾರತಿ ಬಿ ಪಾಟೀಲ್ ಎಸ್ ಕೆ ಡಿ ಆರ್ ಟಿ ಸಿ ಟ್ರಸ್ಟ್ ರೂಪ ಜಿ ಗೋಲ ಶಿಕ್ಷಕರಾದ ಸರೋಜಿನಿ ಹಳಿಮನಿ ಪತಂಜಲಿ ಯೋಗ ಸಮಿತಿ ಅಧ್ಯಕ್ಷ ರಾಜೇಶ್ವರಿ ಈರೇಗೌಡ ನಾಟಿ ವೈದ್ಯರದ ಶರಣಪ್ಪ ಸುಬೇದಾರ್ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಮುಖ್ಯ ಗುರುಗಳಾದ ರಾಜಶೇಖರ್ ಹರಳ ಬೀರನೂರ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಾದ ದೇವರಾಜ್ ಮೌರ್ಯ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಬೂದೆಪ್ಪ ಯಾದವ್ ವಿಶೇಷ ಸನ್ಮಾನ ಮಾಡಿ ಸತ್ಕರಿಸಲಾಯಿತು ಪ್ರಗತಿಪರ ಚಿಂತಕರು ಹಾಗೂ ರೈತ ಪರ ಬಸವಪರ ಸಾಹಿತಿಗಳು ಲೇಖಕರು ಪತ್ರಕರ್ತರು ಅಂಬೇಡ್ಕರ್ ಅನುವಾಯಿಗಳು ನಿರೂಪಣೆ ಸುರೇಶ್ ಹಿರೇಮಠ್ ಸ್ವಾಗತ ಬಿಎಚ್ ಮಾಲಿ ಪಾಟೀಲ್ ವಂದನಾರ್ಪಣೆ ಚಂದ್ರಶೇಖರ್ ಪಾಟೀಲ್ ಗುಡೂರ್ ಮಾಡಿದರು.

# ಮುಧೋಳ:ಹಾಲು ಹಾಗೂ ಬಿಸ್ಕೆಟ್ ವಿತರಿಸಿ ಬಸವ ಪಂಚಮಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜು.30: ತಾಲೂಕಿನ ಮುಧೋಳ(ಬಿ) ಗ್ರಾಮದಲ್ಲಿ ಪಂಚಮಿ ಹಬ್ಬದ ಪ್ರಯುಕ್ತ ಮಕ್ಕಳಿಗೆ ಹಾಲು ಹಾಗೂ ಬಿಸ್ಕೆಟ್ ವಿತರಿಸಿ ಬಸವ ಪಂಚಮಿ ಹಬ್ಬ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಬಸವಮಣಿ ಮಾತಾಜಿ,

ಹುಬ್ಬಳ್ಳಿ ಗುರುಬಸವ ಅನುಭವ ಮಂಟಪ ಇವರು ಮಾತನಾಡಿ, ಪಂಚಮಿ ಹಬ್ಬದಂದು ಕಲ್ಲು ನಾಗರಕ್ಕೆ ಹಾಲೆರೆದು ವ್ಯರ್ಥ ಮಾಡುವುದಕ್ಕಿಂತ ಹಸಿದ ಬಡ ಮಕ್ಕಳಿಗೆ ಹಾಲು ಕುಡಿಸಿದರೆ ಅದು ಅಮೃತಕ್ಕೆ ಸಮಾನವಾಗುತ್ತದೆ. ಇಂಥಹ ಮೂಢನಂಬಿಕೆ ಮತ್ತು ಅಂಧಶ್ರದ್ದೆಯನ್ನು ದೂರವಿಟ್ಟು ಸಂಬಂಧಗಳನ್ನು ಮಾನವೀಯತೆ

ಬೆಸೆಯುವ ಮೂಲಕ ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಯುವಕರು ಮುಂದಾಗಬೇಕು ಎಂದರು.

ಈ ವೇಳೆ ಪಿ.ಕೆ.ಪಿ.ಎಸ. ಅಧ್ಯಕ್ಷ ಗುರುನಾಥ ವಟಗೆ, ಗ್ರಾ.ಪಂ. ಸದಸ್ಯ ಗಜಾನಂದ ವಟಗೆ, ದಿಲೀಪ ಬಿರಾದಾರ, ಸಂತೋಷ ಮುಸ್ತಾಪುರೆ, ರೇವಣಪ್ಪ ಕುಂಬಾರ, ಅಹಮದ, ನರೇಂದ್ರ, ಪ್ರೇಮ್ ಹೊಸಖಂಡೆ, ರಾಜಕುಮಾರ ಬಿಚಕುಂದೆ, ಬಸವರಾಜ ಒಂಟೆ, ಬಾಲಾಜಿ, ಸುನೀಲ ಬಿಚಕುಂದೆ, ಸಂದೀಪ ದುಡುಕನಾಳೆ, ಶಿವಕುಮಾರ ಅಂಬುಲಗೆ ಸೇರಿದಂತೆ ಇನ್ನಿತರ ಇದ್ದರು. ಮಕ್ಕಳು ಹಾಲು ಕುಡಿದು ಆನಂದ ಪಟ್ಟರು.

# ಪ್ರಜಾತಂತ್ರ ಗಟ್ಟಿಯಾಗಿರಲು ಪತ್ರಿಕೆಗಳ ಪಾತ್ರ ಬಹುಮುಖ್ಯ : ಪ್ರಕಾಶ ಖಂಡ್ರೆ




ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಜು.30:ಪ್ರಜಾತಂತ್ರ ಗಟ್ಟಿಯಾಗಿ ನಿಂತು ಕೊಳ್ಳುವಲ್ಲಿ ಪತ್ರಿಕೆಗಳ ಪಾತ್ರ ಬಹುಮುಖ್ಯವಾಗಿದೆ ಎಂದು ಮಾಜಿ ಶಾಸಕ ಹಾಗು ಭಾಲ್ಕೇಶ್ವರ ಸಕ್ಕರೆ ಕಾರ್ಖಾನೆಯ ಅಧ್ಯಕ್ಷ ಪ್ರಕಾಶ ಖಂಡ್ರೆ ಹೇಳಿದರು.

ಪಟ್ಟಣದ ಬಿಜೆಪಿ ಕಾರ್ಯಾಲಯದಲ್ಲಿ ಬುಧವಾರ ಆಯೋಜಿಸಿದ 2025ನೇ ಸಾಲಿನ ಪತ್ರಿಕಾ ದಿನಾಚರಣೆ ಕಾರ್ಯಕ್ರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಸ್ವತಂತ್ರ ಭಾರತದ ಪ್ರಜಾತಂತ್ರ ಗಟ್ಟಿಯಾಗಿರುವಲ್ಲಿ ಮಾಧ್ಯಮಗಳು ಸಹಕಾರಿಯಾಗಿವೆ. ನಾನು ಶಾಸಕನಾಗಿದ್ದ ಸಂದರ್ಭದಲ್ಲಿ ಪತ್ರಿಕೆಗಳು ಕಣ್ಣುತೆರೆಸಿ ಅಭಿವೃದ್ಧಿ ಕಾರ್ಯಗಳಿಗೆ ಚುರುಕು ಮೂಡಿಸಿದವು. ಪತ್ರಿಕೆಗಳು ಬರೆದ ವರದಿಗಳನ್ನು ನೋಡಿಯೇ ನಾನು ಕ್ಷೇತ್ರದ ಅಭಿವೃದ್ಧಿ ಕಾರ್ಯಗಳ ಬೆಳವಣಿಗೆಗೆ ಸಹಕರಿಸದ್ದೆ ಎಂದರು. ಕ್ಷೇತ್ರದ ಕಬ್ಬು ಬೆಳೆದ ರೈತರು ಸಂಕಷ್ಟದಲ್ಲಿದ್ದಾಗ, ಪತ್ರಿಕೆಗಳ ವರದಿಯಿಂದಲೇ ಕ್ಷೇತ್ರದಲ್ಲಿ ಎರಡು ಕಬ್ಬಿನ ಕಾರ್ಖಾನೆಗಳು ಹುಟ್ಟಲು ಕಾರಣವಾಯಿತು ಎಂದು ಹೇಳಿದರು.

> ಮಾರ್ಗದರ್ಶನದಿಂದಲೇ ರಾಜಕೀಯ ನಾಯಕರು ಕೆಲಸಮಾಡುವರು. ಪತ್ರಿಕೆಗಳು ರಾಜಕೀಯ ನಾಯಕರಿಗೆ ಉತ್ತಮ ಮಾರ್ಗದರ್ಶನ ಮಾಡುತ್ತಿರುವ ಕಾರಣ ಅಭಿವೃದ್ಧಿ ಕಾರ್ಯಗಳಿಗೆ ಚುರುಕು ಮುಟ್ಟುತ್ತಿದೆ.
>
> –ಪ್ರಕಾಶ ಖಂಡ್ರೆ, ಮಾಜಿ ಶಾಸಕರು ಭಾಲ್ಕಿ.

ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ, ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಶಿವರಾಜ ಗಂದಗೆ, ಬಿಜೆಪಿ ತಾಲೂಕು ಅಧ್ಯಕ್ಷ ವೀರಣ್ಣ ಕಾರಬಾರಿ, ವೆಂಕಟರಾವ ಬಿರಾದಾರ, ಪಂಡಿತ ಶಿರೋಳೆ ಪತ್ರಕರ್ತರ ಕಾರ್ಯದ ಬಗ್ಗೆ ಮಾತನಾಡಿ ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಬಿಜೆಪಿ ಪ್ರಮುಖ ಚನ್ನಬಸವಣ್ಣ ಬಳತೆ, ಪತ್ರಕರ್ತರ ಸಂಘದ ಅಧ್ಯಕ್ಷ ಜಯರಾಜ ದಾಬಶೆಟ್ಟಿ, ಕಾರ್ಯದರ್ಶಿ ಗಣಪತಿ ಬೋಚರೆ, ಅಶೋಕ ರಾಜೋಳೆ, ಕೆ.ಡಿ.ಗಣೇಶ, ಜೈ ಭೀಮ, ದಿಗಂಬರರಾವ ಮಾನಕಾರಿ, ಬಾಬುರಾವ ಧೂಪೆ, ಸೂರಜಸಿಂಗ ರಜಪೂತ, ಸುರೇಶ ಹುಬಳಿಕರ, ಲುಂಬಿನಿ ಗೌತಮ, ಪಂಢರಿ ಮೇತ್ರೆ, ಡಾ।ಜಗದೀಶ ಭೂರೆ ಉಪಸ್ಥಿತರಿದ್ದರು.

ವೀರಣ್ಣಾ ಕಾರಬಾರಿ ಪ್ರಾಸ್ತಾವಿಕವಾಗಿ ಮಾತನಾಡಿ ಸ್ವಾಗತಿಸಿದರು. ಪಂಢರಿ ಮೇತ್ರೆ ನಿರೂಪಿಸಿದರು. ಸುರೇಶ ಕಾಣೇಕರ ವಂದಿಸಿದರು.

# ಆ.2, 3ರಂದು ಪ್ರಸೂತಿ ಮತ್ತು ಸ್ತ್ರೀ ರೋಗ ಸಮ್ಮೇಳನ: ಡಾ.ಹೇಮಲತಾ ಪಾಟೀಲ




ಬೀದರ. ಜು. 30 : ಆಗಸ್ಟ್ 2 ಹಾಗೂ 3ರಂದು ನಗರದ ಬ್ರಿಮ್ಸ್ ಕಾಲೇಜು ಅವರಣದ ಅಡಿಟೋರಿಯಮ್ ಹಾಲ್‌ನಲ್ಲಿ ಪ್ರಸೂತಿ ಮತ್ತು ಸ್ತ್ರೀ ರೋಗಗಳ ಬಗ್ಗೆ ಎರಡು ದಿವಸದ ಕಾರ್ಯಾಗಾರ ಹಾಗೂ ಸಮ್ಮೇಳನ ಹಮ್ಮಿಕೊಳ್ಳಲಾಗಿದೆ ಎಂದು ಪ್ರಸುತಿ ಮತ್ತು ಸ್ತ್ರೀ ರೋಗ ತಜ್ಞರ ಸಂಘದ ಸಂಘಟನಾ ಕಾರ್ಯದರ್ಶಿ ಡಾ.ಹೇಮಲತಾ ಪಾಟೀಲ ಹೇಳಿದರು.

ಬುಧವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಸಿಸಿ ಮಾತನಾಡಿರುವ ಅವರು, ಪ್ರಸುತಿ ಮತ್ತು ಸ್ತ್ರೀ ರೋಗ ತಜ್ಞರ ಸಂಘ, ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಬೀದರ್ ಮತ್ತು ಕರ್ನಾಟಕ ರಾಜ್ಯ ಪ್ರಸುತಿ ಮತ್ತು ಸ್ತ್ರೀ ರೋಗ ತಜ್ಞರ ಉತ್ತರ ವಲಯ ಇವರ ಸಂಯುಕ್ತಾಶ್ರಯದಲ್ಲಿ ಈ ಕಾರ್ಯಾಗಾರ ಮತ್ತು ಸಮ್ಮೇಳನ ಜರುಗಲಿದೆ. ದೇಶದ ಮೂಲೆ, ಮೂಲೆಗಳಿಂದ ನುರಿತ ತರಬೇತಿ ನೀಡುವ ಸಂಪನ್ಮೂಲ ವ್ಯಕ್ತಿಗಳು ಆಗಮಿಸುವರು. ಜಿಲ್ಲೆಯ ಸ್ತ್ರೀ ರೋಗ ತಜ್ಞರು, ಮಕ್ಕಳ ರೋಗ ತಜ್ಞರು ಹಾಗೂ ಅವರಲ್ಲಿ ಕೆಲಸ ಮಾಡುವ ಸಿಬ್ಬಂದಿಗಳಿಗೆ ಈ ತರಬೇತಿ ನೀಡಲಾಗುವುದು. ಬ್ರಿಮ್ಸ್‌ನಲ್ಲಿನ ಮಹಿಳೆಯರ ಮತ್ತು ಮಕ್ಕಳ ಬಗ್ಗೆ ಅಧ್ಯಯನ ಮಾಡುವ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಈ ಸಮ್ಮೇಳನದಲ್ಲಿ ಭಾಗವಹಿಸುವರು ಎಂದರು.

ಸಂಘದ ಉಪಾಧ್ಯಕ್ಷೆ ಡಾ.ಲಲಿತಮ್ಮ ಮಾತನಾಡಿ, 2015ರಲ್ಲಿ ಭಾರತದಲ್ಲಿ ಬಾಣಂತಿಯರ ಮರಣ ಪ್ರಮಾಣ ಸರಾಸರಿ 122 ಇದ್ದುದು 2024–25ರಲ್ಲಿ 88ಕ್ಕೆ ಇಳಿದಿದೆ. ಕರ್ನಾಟಕದಲ್ಲಿ ಹೋಲಿಸಿದರೆ 2015ರಲ್ಲಿ ಸರಾಸರಿ ಪ್ರಮಾಣ 97 ಇದ್ದುದು 2024–25ರಲ್ಲಿ 57ಕ್ಕೆ ಬಂದು ತಲುಪಿದೆ.

ಇದರ ಪ್ರಮಾಣ 30ಕ್ಕೆ ತರುವ ಗುರಿ ನಮ್ಮದಾಗಿದ್ದು, ಈ ಸಮ್ಮೇಳನದಲ್ಲಿ ನುರಿತ ಸ್ತ್ರೀ ರೋಗ ತಜ್ಞರಿಂದ ತರಬೇತಿ ನೀಡಿ ಹೆರಿಗೆ ಸಂದರ್ಭದಲ್ಲಿ ಆಗುವ ತೊಂದರೆ ನಿವಾರಣೆ ಹಾಗೂ ಸುಳಭ ರೀತಿಯ ಹೆರಿಗೆಗೆ ಅನುಕುಲ ಆಗುವ ನಿಟ್ಟಿನಲ್ಲಿ ಕೈಗೊಳ್ಳಬೇಕಾಗಿರುವ ಕ್ರಮಗಳ ಕುರಿತು ಮಾಹಿತಿ ನೀಡಲಾಗುವುದೆಂದರು.

ಕಾರ್ಯಕ್ರಮದ ವಿವರಣೆ ಮೇಲೆಬೆಳಕುಚಲ್ಲಿದ ಡಾ.ಲಲಿತಮ್ಮ ಅವರು, ಆಗಸ್ಟ್ 2ರಂದು ಸಾಯಂಕಾಲ 4 ಗಂಟೆಗೆ ಉದ್ಘಾಟನಾ ಸಮಾರಂಭ ಜರುಗಲಿದ್ದು, ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಶ ಪಾಟೀಲ ಸಮಾರಂಭ ಉದ್ಘಾಟಿಸಲಿದ್ದು, ರಾಜ್ಯದ ಅರಣ್ಯ, ಪರಿಸರ ಹಾಗೂ ಜೀವಶಾಸ್ತ್ರ ಸಚಿವರು ಮತ್ತು ಜಿಲ್ಲಾ ಉಸ್ತುವಾರಿ ಮಂತ್ರಿ ಈಶ್ವರ ಖಂಡ್ರೆ, ಪೌರಾಡಳಿತ ಸಚಿವ ರಹಿಮ್ ಖಾನ್, ಸಂಸದ ಸಾಗರ ಖಂಡ್ರೆ, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ ನಿರ್ದೇಶಕಿ ಡಾ.ಸುಜಾತಾ ರಾಠೋಡ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿ.ಪಂ ಸಿ.ಇ.ಓ ಗಿರೀಶ ಬದೋಲೆ, ಎಸ್.ಪಿ ಪ್ರದೀಪ ಗುಂಟಿ, ಬ್ರಿಮ್ಸ್ ಮುಖ್ಯ ಅಡಳಿತಾಧಿಕಾರಿ ಕು.ಸುರೇಖಾ, ಬ್ರಿಮ್ಸ್ ನಿರ್ದೇಶಕ ಡಾ.ಶಿವಕುಮಾರ ಶಟಕಾರ, ಕರ್ನಾಟಕ ರಾಜ್ಯ ಪ್ರಸುತಿ ಮತ್ತು ಸ್ತ್ರೀ ರೋಗ ತಜ್ಞರ ಸಂಘದ ಮಹಾ ಪೋಷಕರಾದ ಡಾ.ಎಮ್.ಜಿ ಹಿರೇಮಠ, ಪೋಷಕರಾದ ಡಾ.ನಾಗೆಆಜ. ಹೆಚ್, ಸಂಘದ ರಾಜ್ಯಾಧ್ಯಕ್ಷ ಡಾ.ದುರ್ಗಾದಾಸ ಅಪ್ಪಣ್ಣ, ರಾಜ್ಯ ಪ್ರಧಾನ ಕಾರ್ಯದರ್ಶಿ ಡಾ.ಶೋಭಾಗುಡಿ, ಕೆ.ಎಸ್.ಒ.ಜಿ.ಎ ಅಧ್ಯಕ್ಷೆ ಡಾ.ರಾಜಶ್ರೀ ಪಲಾಡಿ, ಖಜಾಂಚಿ ಡಾ.ಶೋಭಾ ಬೆಂಬಳಗಿ, ಕೆ.ಸಿ.ಒ.ಜಿ ಡೀನ್ ಡಾ.ಎಮ್.ಬಿ.ಬೆಲ್ಲದ, ಎಫ್.ಒ.ಜಿ.ಎಸ್.ಐ ಉಪಾಧ್ಯಕ್ಷೆ ಡಾ.ವಿದ್ಯಾ ಥೊಟ್ಟಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಜ್ಞಾನೇಶ್ವರ ನಿರಗುಡೆ, ಬ್ರಿಮ್ಸ್ ಆಸ್ಪತ್ರೆಯ ಅಧಿಕ್ಷಕ ಡಾ.ಶಿವಯೋಗಿ ಬಾಳಿ, ಜಿಲ್ಲಾ ಶಸ್ತ್ರ ಚಿಕಿತ್ಸೆಕ ಡಾ.ಎಮ್.ಡಿ ಅಹ್ಮದ್ದುದ್ದಿನ್, ಬ್ರಿಮ್ಸ್ ಕಾಲೇಜಿನ ಪ್ರಾಚಾರ್ಯ ಡಾ.ರಾಜೇಶ ಪಾರಾ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು ಎಂದು ವಿವರಿಸಿದರು.

ಪ್ರಸುತಿ ಮತ್ತು ಸ್ತ್ರೀ ರೋಗ ತಜ್ಞರ ಸಂಘದ ಕಾರ್ಯದರ್ಶಿ ಡಾ.ಸುಜಾತಾ ಬಡಿಗೇರ ಮಾತನಾಡಿ, ನಮ್ಮ ಬೀದರ್ ಜಿಲ್ಲೆಯಲ್ಲಿ ಹೆಚ್ಚಿನ ಅಪಾಯದ ಗರ್ಭಧಾರಣೆ ಅಂದರೆ ಮಧುಮೇಹ, ಕಾಮಾಲೆ ಹಾಗೂ ಅಧಿಕ ರಕ್ತದೊತ್ತಡ ಸಮಸ್ಯೆ ಹೊಂದಿರುವ ಗರ್ಭಿಣಿಯರು ಅಂತಹ ಮಹಿಳೆಯರ ಚಿಕಿತ್ಸೆಗೆ ಬೇಕಾಗಿರುವ ಹೆಚ್ಚಿನ ಜ್ಞಾನ ಮತ್ತು ಅದಕ್ಕೆ ಅವಶ್ಯಕತೆ ಇರುವ ತಯಾರಿಗಳನ್ನು ಹೇಗೆ ಇನ್ನು ಹೆಚ್ಚು ಅಭಿವೃದ್ಧಿಪಡಿಸಬೇಕು ಎಂಬುದರ ಕುರಿತು ನಮ್ಮೊಂದಿಗೆ ಚರ್ಚಿಸಲು ನಮ್ಮ ರಾಜ್ಯದ ಹಾಗೂ ಬೇರೆ ರಾಜ್ಯಗಳಾದ ಮಹಾರಾಷ್ಟ್ರ, ತೆಲಂಗಾಣ ಹಾಗೂ ಕೇರಳದಿಂದ ಪರಿಣಿತ ವೈದ್ಯರು ಸಂಪನ್ಮೂಲ ವ್ಯಕ್ತಿಗಳಾಗಿ ಬರುತ್ತಿದ್ದಾರೆ. ಇದರಿಂದ ನಮ್ಮ ಜಿಲ್ಲೆಯ ಪ್ರಸೂತಿ ಹಾಗೂ ಸ್ತ್ರೀರೋಗ ವೈದ್ಯರಿಗೆ ಹಾಗೂ ಗರ್ಭಿಣಿ ಸ್ತ್ರೀಯರಿಗೆ ತುಂಬಾ ಅನುಕೂಲವಾಗಬಹುದು. ಇಂತಹ ಒಂದು ಕಾರ್ಯಾಗಾರ ಹಾಗೂ ಸಮ್ಮೇಳನ ನಮ್ಮ ಜಿಲ್ಲೆಯಲ್ಲಿ ಪ್ರಥಮ ಬಾರಿಗೆ ನಡೆಯುತ್ತಿದೆ ಇದಕ್ಕೆ ಕಾರಣ ನಮ್ಮ ಜಿಲ್ಲೆಯ ಪ್ರಸೂತಿ ಮತ್ತು ಸ್ತ್ರೀರೋಗ ಶಾಸ್ತ್ರ ಸಂಘ ಕಾರಣ ಎಂದು ಬಣ್ಣಿಸಿದರು. ಸಂಘದ ಖಜಾಂಚಿ ಡಾ.ಶಾರದಾ ಗುದಗೆ ಮಾತನಾಡಿ, ಕಳೆದ ಐದಾರು ವರ್ಷಗಳಿಂದ ಜಿಲ್ಲೆಯಲ್ಲಿ ಲ್ಯಾಪ್ರಾಸ್ಕೋಪಿ ವತಿಯಿಂದ ಸರಳ ಗರ್ಭಧಾರಣೆ ಹಾಗೂ ಪ್ರಸುತಿಗೆ ಅನುಕುಲ ಆಗುತ್ತಿದ್ದು, ಅದು ಇನ್ನಷ್ಟು ಪರಿಣಾಮಕಾರಿಯಾಗಿ ಹೊರಹೊಮ್ಮಲು ಜಿಲ್ಲೆಯ ಎಲ್ಲ ಸ್ತ್ರೀ ಹಾಗೂ ಮಕ್ಕಳ ರೋಗ ತಜ್ಞರಿಗೆ ಈ ಕಾರ್ಯಾಗಾರ ಅನುಕೂಲ ಆಗಲಿದ್ದು, ಜಿಲ್ಲೆಯ ಮೇಲ್ತಿಳಿಸಿದ ವೈದ್ಯರು ಹಾಗೂ ಸಿಬ್ಬಂದಿಗಳು ಇ ಎರಡು ದಿವಸದ ಕಾರ್ಯಾಗಾರ ಮತ್ತು ಸಮ್ಮೇಳನದಲ್ಲಿ ಭಾಗವಹಿಸುವಂತೆ ಕರೆ ನೀಡಿದರು.

# ಆ. 1ರಂದು ಪತ್ರಿಕಾ ದಿನಾಚರಣೆ



ಮಲ್ಲಮ್ಮ ನುಡಿ ವಾರ್ತೆ ಔರಾದ:ಜು.30:ಕರ್ನಾಟಕ ರಕ್ಷಣಾ ವೇದಿಕೆ(ಪ್ರವೀಣ್‌ಕುಮಾರ್ ಶೆಟ್ಟಿ ಬಣ) ವತಿಯಿಂದ ಪತ್ರಿಕಾ ದಿನಾಚರಣೆ ಕಾರ್ಯಕ್ರಮವನ್ನು ಆಗಸ್ಟ್ 1, 2025 ರಂದು ಕನ್ನಡ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.ಈ ವಿಶೇಷ ಸಂದರ್ಭದಲ್ಲಿ ಹಣೇಗಾಂವ ಶ್ರೀಗಳು ದಿವ್ಯ ಸಾನಿಧ್ಯ ವಹಿಸುವರು, ಗೌರವಾಧ್ಯಕ್ಷರಾದ ಬಸವರಾಜ ಶೆಟ್ಟಕರ ಪತ್ರಿಕೋದ್ಯಮದ ಮಹತ್ವವನ್ನು ಪ್ರತಿಪಾದಿಸುವವರು ಹಿರಿಯ ಪತ್ರಕರ್ತರಿಗೆ ಸನ್ಮಾನ, ಸಮಾಜಮುಖಿ ಚರ್ಚಾಸತ್ರಗಳು ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಪ್ರೆಸ್ ದಿನದ ಸಂಭ್ರಮವನ್ನು ಇನ್ನಷ್ಟು ಅರ್ಥಪೂರ್ಣವಾಗಿಸಲು, ಎಲ್ಲಾ ಪತ್ರಕರ್ತ ಬಂಧುಗಳು, ಮಾಧ್ಯಮ ಕ್ಷೇತ್ರದ ಗಣ್ಯರು ಮತ್ತು ಕನ್ನಡಾಭಿಮಾನಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿ ಅದನ್ನು ಯಶಸ್ವಿಗೊಳಿಸಬೇಕಾಗಿ ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್ ಕುಮಾರ್ ಶೆಟ್ಟಿ ಬಣ ಹೃತ್ಪೂರ್ವಕವಾಗಿ ಆಹ್ವಾನಿಸುತ್ತಿದೆ ಎಂದು ತಾಲೂಕಾಧ್ಯಕ್ಷರು ಕರವೇ ಅನಿಲ ದೇವಕತ್ತೆ ತಿಳಿಸಿದ್ದಾರೆ.

# ಕಲ್ಯಾಣ ಕರ್ನಾಟಕ ವಿಭಾಗ ಮಟ್ಟದ ಮಾಧ್ಯಮ ತರಬೇತಿ: ಪತ್ರಕರ್ತರಿಗೆ ಆಹ್ವಾನ

ಕಲಬುರಗಿ,ಜು.30:ಕರ್ನಾಟಕ ಮಾಧ್ಯಮ ಅಕಾಡೆಮಿಯು ದಿನಾಂಕ 6–8–2025 ರಂದು ಬೀದರ್‌ನಲ್ಲಿ ಕಲ್ಯಾಣ ಕರ್ನಾಟಕ ವಿಭಾಗ ಮಟ್ಟದ ಮಾಧ್ಯಮ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಿದೆ.

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಶ್ರೀ ಈಶ್ವರ್ ಖಂಡ್ರೆ ಅವರು ಸಮಾರಂಭವನ್ನು ಉದ್ಘಾಟಿಸಲಿದ್ದು, ಪರಿಸರ ಸಂರಕ್ಷಣೆಯಲ್ಲಿ ಮಾಧ್ಯಮಗಳ ಪಾತ್ರದ ಕುರಿತು ಮಾತನಾಡಲಿದ್ದಾರೆ. ಪೌರಾಡಳಿತ ಸಚಿವ ಶ್ರೀ ರಹೀಂ ಖಾನ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ತರಬೇತಿ ಕಾರ್ಯಕ್ರಮದಲ್ಲಿ "ನ್ಯೂಸ್ ರೂಂ ನಲ್ಲಿ ಂಖ ಮತ್ತು ನಾನು" ಹಾಗೂ "ಸುದ್ದಿಯಲ್ಲಿ ನಿಖರತೆ ಮತ್ತು ಪರಿಣಾಮಕಾರಿ ಸಂವಹನ" ಎಂಬ ವಿಷಯಗಳ ಕುರಿತು ಗೋಷ್ಠಿ ಹಾಗೂ ಸಂವಾದ ನಡೆಯಲಿದೆ. ಕಲ್ಯಾಣ ಕರ್ನಾಟಕ ಭಾಗದ ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ, ವಿಜಯನಗರ ಹಾಗೂ ಬಳ್ಳಾರಿ ಜಿಲ್ಲೆಯ ಪತ್ರಕರ್ತರು ಈ ತರಬೇತಿಯಲ್ಲಿ ಭಾಗವಹಿಸಬಹುದು. ಈ ತರಬೇತಿಯು ಪತ್ರಕರ್ತರ ವೃತ್ತಿಕೌಶಲ್ಯವನ್ನು ಉತ್ತಮಪಡಿಸುವ ಉದ್ದೇಶದಿಂದ ಹಮ್ಮಿಕೊಳ್ಳಲಾಗಿದೆ. ಪತ್ರಕರ್ತರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧ್ಯಕ್ಷೆ ಶ್ರೀಮತಿ ಆಯೇಶಾ ಖಾನಂ ತಿಳಿಸಿದ್ದಾರೆ.

ಕಲ್ಯಾಣ ಕರ್ನಾಟಕದ ಇತರ ಜಿಲ್ಲೆಗಳಿಂದ ಆಗಮಿಸುವ ಮುಂಚಿತವಾಗಿಯೇ ನೋಂದಾಯಿಸಿಕೊಂಡಿರುವ ಪತ್ರಕರ್ತರಿಗೆ ತರಬೇತಿ ದಿನದಂದು ವಸತಿ ಸೌಲಭ್ಯ ಒದಗಿಸಲಾಗುವುದು. ಆಸಕ್ತರು https://forms.gle/uwoA67T1b5gBPDuB8 ಗೂಗಲ್ ಫಾರ್ಮ್ ಭರ್ತಿ ಮಾಡಿ ಆಗಸ್ಟ್ 2 ರೊಳಗೆ ನೋಂದಾಯಿಸಿಕೊಳ್ಳುವಂತೆ ಈ ಮೂಲಕ ಕೋರಿದೆ.

# ಒಳ ಮೀಸಲಾತಿ ಜಾರಿಗೆ ರಾಜ್ಯ ಕಾಂಗ್ರೆಸ್ ಸರ್ಕಾರ ಕಾಲಹರಣ ಡಿಸಿ ಕಚೇರಿ ಮುಂದೆ ಧರಣಿ

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ನ್ಯಾ.ಸಧಾಶಿವಾಯೋಗ ವರದಿನೀಡಿದ್ದು ಅಲ್ಲದೆ ಮತ್ತೊಂದು ಬಾರಿ ಎಸ್,ಸಿ,ಎಸ್,ಟಿ,ಗಳ ಸರ್ವೆ ಮಾಡುವದರ ಮುಖಾಂತರ ವರದಿ ನೀಡಿದ್ದರೂ, ಇಂದಿನವರೆಗೂ ರಾಜ್ಯ ಕಾಂಗ್ರೆಸ್ ಸರ್ಕಾರ ಒಳ ಮಿಸಲಾತಿ ಜಾರಿಗೆ ತರುವಲ್ಲಿ ಮೀನ ಮೇಶ ಎಣಿಸುತ್ತಿದೆ, ಸುಖಾ ಸುಮ್ಮನೆ ಜಾರಿಗೆ ವಿಳಂಭ ನಡೆಯುತ್ತಿದೆ ಈ ಕುರಿತು ಶಿಘ್ರ



ಜಾರಿಗೆ ಒತ್ತಾಯಿಸಿ ನಾಳೆ ಯಾದಗಿರಿ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಧರಣಿ ಸತ್ಯಾಗ್ರಹ ನಡೆಸಲಾಗುತ್ತದೆ ಎಂದು ಒಳ ಮೀಸಲಾತಿ ಹೋರಾಟ ಸಮಿತಿಯ ಅಧ್ಯಕ್ಷರಾದ ವಾಸುದೇವ ಕಟ್ಟಿಮನಿ ವಕೀಲರು ತಿಳಿಸಿದರು,

ಈ ಕುರಿತು ನಗರದ ಪ್ರವಾಸಿ ಮಂದಿರದಲ್ಲಿ ಸಭೆನಡೆಸಿ ಮಾತನಾಡಿದ ಅವರು ನಾಳೆ ನಡೆಯುವ ಈ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಅವರು ಪತ್ರಿಕೆ ಪ್ರಕಟಣೆಯ ಮುಖಾಂತರ ಕೋರಿದರು. ಈ ಸಭೆಯಲ್ಲಿ ಮುಖಂಡರಾದ ಶಾಂತಪ್ಪ ಕಟ್ಟಿಮನಿ, ಮಾನಪ್ಪ ವಠಾರ, ಧರ್ಮಣ್ಣ ಹೋತಪೇಟ, ಪರಶುರಾಮ ರೋಜಾ, ಭೀಮರಾಯ ರ ಬನಳ್ಳಿ, ಸೇರಿದಂತೆ ಅನೇಕರು ಹಾಜರಿದ್ದರು.

# ಮಾನವ ಕಳ್ಳಸಾಗಾಣಿಕೆ ಮಾಹಾ ಅಪರಾಧ –ಸಿದ್ದಕಿ.

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ತಮ್ಮ ವಯಕ್ತಿಕ ಲಾಭಕ್ಕಾಗಿ ಮನಷ್ಯರನ್ನು ಸಾಗಿಸಿಕೊಂಡು ದುಸ್ಕೃತ್ಯ ಮಾಡುವದು ಮಾಹಾ ಅಪರಾಧವಾಗಿದೆ ಎಂದು ತಾಲುಕಾ ವಕೀಲರ ಸಂಘದ ಅಧ್ಯಕ್ಷರಾದ ಯುಸೂಫ ಸಿದ್ದಕಿ ತಿಳಿಸಿದರು, ಅವರು ಶಹಾಪುರದ



ಬಾಲಕರ ಪ್ರೌಡ ಶಾಲೆಯಲ್ಲಿ ಹಮ್ಮಿಕೊಂಡ ಮಾನವ ಕಳ್ಳಸಾಗಾಣಿಕೆ ವಿರೋಧಿ ದಿನಾಚರಣೆ ಅಂಗವಾಗಿ ಹಮ್ಮಿಕೊಂಡ ಕಾರ್ಯಕ್ರಮವನ್ನು ಉಧ್ಘಾಟಿಸಿಮಾತನಾಡಿದರು, ಕರ್ನಾಟಕ ಕಾನೂನು ಸೇವೆಗಳ ಪ್ರಾಧಿಕಾರ, ಮತ್ತು ಕಾನೂನು ಏವೆಗಳ ಸಮಿತಿ ಶಹಾಪುರ, ಶಿಕ್ಷಣ ಇಲಾಖೆ, ಪೋಲಿಸ್ ಇಲಾಖೆ ಆಶ್ರೆಯದಲ್ಲಿ ನಡೆದ ಈ ಸಮಾರಂಭದಲ್ಲಿ ಅಧ್ಯಕ್ಷತೆಯನ್ನು ಶಾಲಾ ಮುಖ್ಯಗುರುಗಳಾದ ಟಿ.ಪಿ.ದೊತ್ರೆ. ಕಾರ್ಯದರ್ಶಿಗಳಾದ ಸಂತೋಷ ಸತ್ಯಂಪೇಟ್, ಸರ್ಕಾರಿ ಅಭಿಯೋಜಕರಾದ ಮರೆಪ್ಪ ವಕೀಲರಾದ ಸಿದ್ದು ಪಾಸ್ಪೋಲ್ ಜೈಲಾಲ ತೋಟದ ಮನಿ ಪಿಎಸ್,ಐ ಶ್ಯಾಮಸುಂದರ ನಾಯಕ, ಭಾಗವಹಿಸಿದ್ದರು,

### ಶಿಕ್ಷಕನಿಂದ ಮಾರಣಾಂತಿಕ ಹಲ್ಲೆ, ಜೀವ ಬೆದರಿಕೆ:– ಕೇಸ್ ದಾಖಲು

# ಮುಂಡರಗಿ ಶಾಲಾ ಶಿಕ್ಷಕ ಖಲೀಲ್ ಸಾಬ್ ಗೂಂಡಾ ವರ್ತನೆ, ಬಂಧನಕ್ಕೆ ಆಗ್ರಹ

(ಎಂ.ರಫೀಕ್ ಪಟೇಲ್)

ಮಲ್ಲಮ್ಮನುಡಿವಾರ್ತೆಯಾದಗಿರಿ:– ಪಾಠ ಬೋಧನೆ ಮಾಡಿ, ಮಕ್ಕಳ ಭವಿಷ್ಯ ರೂಪಿಸಬೇಕಾಗಿರುವ ಶಿಕ್ಷಕರೊಬ್ಬರು ರಾಕ್ಷಸ ಅವತಾರ ತಾಳಿರುವ ಘಟನೆ ತಾಲೂಕಿನ ಭೀಮನಹಳ್ಳಿ ಗ್ರಾಮದಲ್ಲಿ ನಡೆದಿದೆ.

ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ಮುಂಡರಗಿ ಗ್ರಾಮದ ಶಿಕ್ಷಕರಾಗಿರುವ ಖಲೀಲ್ ಸಾಬ್ ಅವರು, ಆಸ್ತಿ ವಿಚಾರಕ್ಕೆ ಭೀಮನಹಳ್ಳಿ ಗ್ರಾಮದ ಜುಬೆಲ್ ಸಾಬ್ ಎಂಬುವವರ ಮೇಲೆ ಮಾರಣಾಂತಿಕ ಹಲ್ಲೆ ಮಾಡಿದ್ದು, ಗಂಭೀರ ಗಾಯಗೊಂಡಿರುವ ವ್ಯಕ್ತಿ ರಾಯಚೂರಿನ ರಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ದಾಖಲಾಗಿದ್ದಾರೆ.

ಹಲ್ಲೆಗೊಳಾಗಿರುವ ಜುಬೆಲ್ ಸಾಬ್ ಎಂಬುವವರು ಜಮೀನಿನಲ್ಲಿ ಕೆಲಸ ಮಾಡುವ ವೇಳೆ ಏಕಾಏಕಿ





ದಾಳಿ ಮಾಡಿರುವ ಶಿಕ್ಷಕ ಕಲೀಲ್ ಸಾಬ್ ಸೇರಿದಂತೆ ಅವರ ಐವರ ತಂಡ ಮನಸ್ಸೊ, ಇಚ್ಛೆ ಥಳಿಸಿ ಬೆತ್ತಗಳಿಂದ ಹೊಡಿಬಡಿ ಮಾಡಿ ರಾಕ್ಷಸ ಕೃತ್ಯ ಎಸೆಗಿದ್ದಾರೆಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ಶಿಕ್ಷಕ ವೃತ್ತಿಯಲ್ಲಿದ್ದು ಕಾನೂನು ಕೈಗೆ ತೆಗೆದುಕೊಂಡಿರುವ ಮುಖ್ಯ ಆರೋಪಿ ಕಲೀಲ್ ಸಾಬ್ ಸೇರಿದಂತೆ ಒಟ್ಟು ಐದು ಜನರ ವಿರುದ್ಧ ಸೈದಾಪುರ ಪೊಲೀಸ್ ಠಾಣೆಯಲ್ಲಿ ಐಪಿಸಿ ಸೆಕ್ಷನ್ 352, 351(3), 189(2),191(2), 115(2)BNSಕಾಯ್ದೆಡಿ ಈಖುಖ ದಾಖಲಾಗಿದ್ದು. ತಕ್ಷಣ ಗೂಂಡಾ ವರ್ತನೆ ತೋರಿದ ಶಿಕ್ಷಕರ ಖಲೀಲ್ ಸಾಬ್ ಅವರನ್ನು ಸೇವೆಯಿಂದ ಅಮಾನತುಗೊಳಿಸಿ, ಪೊಲೀಸರು ಈತನನ್ನು ಬಂಧಿಸಬೇಕೆಂದು ನಾಗರೀಕರು ಒತ್ತಾಯಿಸಿದ್ದಾರೆ. ಒಂದು ವೇಳೆ ಬಂಧಿಸದಿದ್ದರೆ ಪ್ರಜ್ಞಾನವಂತ ನಾಗರಿಕರು ಉಗ್ರವಾದ ಹೋರಾಟ ಮಾಡುವುದಾಗಿ ಈ ಮೂಲಕ ಎಚ್ಚರಿಕೆ ನೀಡಿದ್ದಾರೆ.

# ವಿವಿಧ ಬೇಡಿಕೆ ಈಡೇರಿಸುವಂತೆ ಜಿಲ್ಲಾ ಪೊಲೀಸ್ ಅದಿಕ್ಷಕರು ಕಲಬುರ್ಗಿ ರವರಿಗೆ ಕರವೇ ವತಿಯಿಂದ ಮನವಿ



ಮಲ್ಲಮ್ಮ ನುಡಿ ವಾರ್ತೆ

ಸೇಡಂ, ಜು, 30, ತಾಲೂಕಿನ ಮಳಖೇಡ ಮತ್ತು ಕುರಕುಂಟಾ ಠಾಣೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೊಲೀಸ ಸಿಬ್ಬಂದಿಗಳಿಗೆ ನೂತನ ವಸತಿಗೃಹಗಳ ಸೌಲಭ್ಯ ಒದಗಿಸಬೇಕೆಂದು

ಮಾನ್ಯ ಪೊಲೀಸ ಅಧಿಕ್ಷಕರು ಕಲಬುರ್ಗಿ ರವರಿಗೆ

ಡಾ,ರಾಮಚಂದ್ರ ಗುತ್ತೇದಾರ ಕರವೇ ಸೇಡಂ ತಾಲೂಕಾಧ್ಯಕ್ಷರು ಮನವಿ ಪತ್ರ ನೀಡಿ ಮಾತನಾಡಿ, ಪಟ್ಟಣದ ಬಸವೇಶ್ವರ ವೃತ್ತದಿಂದ ವಾಸವದತ್ತ ಸಿಮೆಂಟ್ ಕಾರ್ಖಾನೆವರೆಗೆ ಚತುಸ್ಪತ ರಸ್ತೆ ಇದ್ದರು ಕೂಡ ಎಡಭಾಗ ಮತ್ತು ಬಲಭಾಗಕ್ಕೆ ಆಂಧ್ರ, ತೆಲಂಗಾಣ, ತಮಿಳುನಾಡು, ಮಹಾರಾಷ್ಟ್ರ, ಕೇರಳ, ಗೋವಾ, ಮೂಲದ ಟ್ರಕ್ ಗಳು ಸಿಮೆಂಟ್ ಕಂಪನಿಗೆ ಲೋಡಿಂಗ್ ಮಾಡಿಕೊಳ್ಳಲು ರಸ್ತೆ ಬದಿ ಯಲ್ಲಿ ನಿಲ್ಲುಸುವುದರಿಂದ ಸಂಚಾರ ಮಾಡುವ ವಾಹನಗಳಿಗೆ ತೊಂದರೆಯಾಗುತ್ತಿದ್ದೂ .

ರಸ್ತೆ ಅಪಘಾತಗಳು ಸಂಭವಿಸುತ್ತಿವೆ ಆದ್ದರಿಂದ ಟ್ರಕ್ ಗಳನ್ನು ರಸ್ತೆ ಬದಿಯಲ್ಲಿ ನಿಲ್ಲಿಸದೆ ಬೇರೆಕಡೆ ನಿಲ್ಲಿಸಲು

ವ್ಯವಸ್ಥೆ ಮಾಡಬೇಕು. ಸೇಡಂ ದಿಂದ ಹೈದ್ರಾಬಾದ್ ಹೇಗುವ ರಾಜ್ಯಹೆದ್ದಾರಿ ರಸ್ತೆಗೆ ಅಂಟಿಕೊಂಡಿರುವ ರಂಜೋಳ್ ಗ್ರಾಮದ ಕೂಡ ರಸ್ತೆಯ ಕ್ರಾಸ್ ಬಳಿ ತಿಂಗಳಿಗೆ ಮೂರು ನಾಲ್ಕು ಅಪಘಾತ ಗಳು ಸಂಭವಿಸುತ್ತಿವೆ ಆದ ಕಾರಣ ರಾಜ್ಯ ಹೆದ್ದಾರಿಗೆ ಆದಷ್ಟು ಬೇಗನೆ ರೋಡ್ ಬ್ರೇಕರ ಗಳನ್ನು ಅಳವಡಿಸಬೇಕು ಎಂದು ಮಾತನಾಡಿದರು. ಈ ಸಂದರ್ಭದಲ್ಲಿ ಗೋಪಾಲ ನಟೆಕಾರ್ ಕರವೇ ಕಲ್ಯಾಣ ಕರ್ನಾಟಕ ವಿಭಾಗದ ಪ್ರಧಾನ ಕಾರ್ಯದರ್ಶಿ, ವಿಶ್ವನಾಥ್ ಪಾಟೀಲ ಜಿಲ್ಲಾಧ್ಯಕ್ಷರು ಕಲಬುರ್ಗಿ, ರಾಜಶೇಖರ ಬಂಟನೂರ, ಚಂದ್ರಶೇಖರ ಮಡಿವಾಳ, ಸತೀಶ ಬಿರನೂರ,

ನಿಜಲಿಂಗ ಸ್ವಾಮಿ, ವಾಸುದೇವ, ಇನ್ನಿತರರು ಇದ್ದರು

# ಒಪೆಕ್ ಆಸ್ಪತ್ರೆಯಿಂದ ತಿದ್ದುಪಡಿ ನೇಮಕಾತಿ ಅಧಿಸೂಚನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 30–: ಇಲ್ಲಿನ ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಅಧೀನದ ರಾಜೀವ್ ಗಾಂಧಿ ಸೂಪರ್ ಸ್ಪೆಷಾಲಿಟಿ (ಓಪೆಕ್) ಆಸ್ಪತ್ರೆಯು ದಿನಾಂಕ 16–07–2025ರಂದು ಹೊರಡಿಸಿದ ಅಧಿಸೂಚನೆ ಅನ್ವಯ ರಾಜೀವ್ ಗಾಂಧಿ ಸೂಪರ್ ಸ್ಪೆಷಾಲಿಟಿ (ಓಪೆಕ್) ಆಸ್ಪತ್ರೆಯಲ್ಲಿ ಬೋಧ–ಕೇತರ ಹುದ್ದೆಗಳಿಗೆ ಹೊರಗುತ್ತಿಗೆ ಆಧಾರದ ಮೇಲೆ ಒಟ್ಟು 90 ಬೋಧಕೇತರ ಹುದ್ದೆಗಳ ನೇಮಕಾತಿ ಮಾಡಿಕೊಳ್ಳಲು ಅಧಿಸೂಚನೆ ಹೊರಡಿಸಲಾಗಿರುತ್ತದೆ. ರಿಟ್ ಪಿಟಿಷನ್ ಸಂಖ್ಯೆ:200099/2024 ಅನ್ವಯ (ಮಾನ್ಯ ನ್ಯಾಯಾಲಯದ ಪ್ರಕರಣದಲ್ಲಿನ ಅಭ್ಯರ್ಥಿಗಳಿಗೆ ಮಾತ್ರ) ಮಾನ್ಯ ಉಚ್ಚ ನ್ಯಾಯಾಲಯ, ಕಲಬುರ್ಗಿ ಅವರ ಆದೇಶದಂತೆ ಕ್ರಮ ಸಂಖ್ಯೆ 9 ಮತ್ತು 10 ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅನುಕೂಲವಾಗಲು ದಿನಾಂಕ 11–08–2025ರಂದು ಕೊನೆಯ ದಿನಾಂಕ ಆಗಿರುತ್ತದೆ.

ಅರ್ಹತೆಯ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಉಳಿದಂತೆ ಯಾವುದೇ ಬದಲಾವಣೆ ಇರುವುದಿಲ್ಲ ಎಂದು ಓಪೆಕ್ ಆಸ್ಪತ್ರೆಯ ವಿಶೇಷಾಧಿಕಾರಿಗಳು ಮತ್ತು ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮಹಾತ್ವಾಕಾಂಕ್ಷಿ ಜಿಲ್ಲೆಯ ಕನಸು ನನಸು ಮಾಡಲು ಎಲ್ಲರೂ ಶ್ರಮಿಸೋಣ : ಡಿಸಿ ಹರ್ಷಲ್ ಭೋಯರ್

# ಸಂಪೂರ್ಣಾ ಅಭಿಯಾನ ಸಮ್ಮಾನ ಕಾರ್ಯಕ್ರಮ – ವಿವಿಧ ಸಿಬ್ಬಂದಿಗಳಿಗೆ ಸನ್ಮಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜು:30: ಜಿಲ್ಲಾಡಳಿತ, ಜಿಪಂ ಸೇರಿದಂತೆ ಎಲ್ಲ ಇಲಾಖೆಗಳ ಹಿರಿಯ,ಕಿರಿಯ ಅಧಿಕಾರಿಗಳು ಮತ್ತು ಸಿಬ್ಬಂದಿ, ಜನಪ್ರತಿನಿಧಿಗಳ ಹಾಗೂ ಸಾರ್ವಜನಿಕರ ಸಹಕಾರದಿಂದ ಕೇಂದ್ರ ಸರ್ಕಾರದ ಮಹಾತ್ವಾಕಾಂಕ್ಷಿ ಜಿಲ್ಲೆಯ ಕನಸು ನನಸು ಮಾಡಲು ಸಂಪೂರ್ಣವಾಗಿ ಶ್ರಮಿಸೋಣ ಎಂದು ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಹೇಳಿದರು.



ಕೇಂದ್ರ ಸರ್ಕಾರದ ನೀತಿ ಆಯೋಗದ ಮಹಾತ್ವಾಕಾಂಕ್ಷಿ ಜಿಲ್ಲೆ ಯಾದಗಿರಿ ಮತ್ತು ಮಹಾತ್ವಾಕಾಂಕ್ಷಿ ಬ್ಲಾಕ್ ವಡಗೇರಾ ಯೋಜನೆಯಡಿ ಸಂಪೂರ್ಣ ಅಭಿಯಾನ ಸಮ್ಮಾನ ಸಮಾರೋಹ ಮತ್ತು ಆಕಾಂಕ್ಷಾ ಹಾಟ್ ಉದ್ಘಾಟನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಸಾಧಕ ಅಧಿಕಾರಿ, ಸಿಬ್ಬಂದಿಗಳಿಗೆ ಪ್ರಮಾಣಪತ್ರ ವಿತರಿಸಿ ಗೌರವಿಸಿ ಅವರು ಮಾತನಾಡಿದರು.

ಅಭಿವೃದ್ಧಿಗಾಗಿ ಸರ್ಕಾರ ನೀಡಿದ ಸೂಚಾಂಕ್ಯಗಳಲ್ಲಿ ಮಹಾತ್ವಾಕಾಂಕ್ಷಿ ಜಿಲ್ಲೆ ಯಾದಗಿರಿ ತನ್ನ ನಿಗದಿತ ಗುರಿ ಆರಕ್ಕೆ ಮಾಡುವ ಮೂಲಕ ಗುರಿ ತಲುಪಿದರೆ, ವಡಗೇರಾ ಬ್ಲಾಕ್ ಆರಲ್ಲಿ ಐದು ಕೆಲಸಗಳನ್ನು ಮಾಡುವ ಮೂಲಕ ಹೆಚ್ಚಿನ ಸಾಧನೆ ಮಾಡಿದೆ ಎಂದರು.

ಇದಕ್ಕಾಗಿ ಶ್ರಮಿಸಿದ ಎಲ್ಲರಿಗೂ ಅಭಿನಂದಿಸಿದ ಡಿಸಿ ಅವರು, ಮುಂದೇ ಕೂಡಾ ಇದೆ ರೀತಿ ಕೆಲಸ ಮಾಡುವಂತೆ ಸಲಹೆ ನೀಡಿದರು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಜಿಪಂ ಸಿಇಓ ಲವೀಶ್ ಒರಡಿಯಾ, ಈ ಸಾಧನೆಗೆ ಆಶಾ, ಅಂಗನವಾಡಿ ಕಾರ್ಯಕರ್ತರು, ಶಿಕ್ಷಕರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ತಾಲೂಕು ಮಟ್ಟದ ಹಿರಿಯ ಅಧಿಕಾರಿಗಳು ಹಾಕಿದ ಶ್ರಮಕ್ಕೆ ಫಲ ಸಿಕ್ಕಿದೆ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ನೀತಿ ಆಯೋಗದ ಆದೇಶದಂತೆ ಈ ಕಾರ್ಯಕ್ರಮ ಆಯೋಜಿಸಿ, ಗುರಿ ತಲುಪಲು ಶ್ರಮಿಸಿದ ತಳಮಟ್ಟದಿಂದ ಹಿರಿಯ ಅಧಿಕಾರಿಗಳನ್ನು ಗುರುತಿಸಿ ಇಂದು ಪ್ರಮಾಣ ಪತ್ರ ನೀಡುವ ಮೂಲಕ ಗೌರವಿಸಲಾಗಿದೆ ಎಂದರು.

ಇನ್ನೂ ಹೆಚ್ಚಿನ ರೀತಿಯಲ್ಲಿ ನಾವೆಲ್ಲರೂ ಕೆಲಸ ಮಾಡುವ ಮೂಲಕ ಕೇಂದ್ರ ಸರ್ಕಾರದ ಈ ಯೋಜನೆಯನ್ನು ಯಶಸ್ಸಿಯಾಗಿ ಮಾಡೋಣ ಎಂದರು.

ಹೆಚ್ಚುವರಿ ಡಿಸಿ ರಮೇಶ ಕೋಲಾರ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರಥ್ವಿಕ್ ಶಂಕರ್, ಸಿಪಿಓ ಕುಮಲಯ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಜಿಲ್ಲಾ,ತಾಲೂಕು ಮಟ್ಟದ ಅಧಿಕಾರಿಗಳು, ಆಶಾ,ಅಂಗನವಾಡಿ ಕಾರ್ಯಕರ್ತೆಯರು ಸೇರಿದಂತೆ ಇತರರಿದ್ದರು. ಅಧಿಕಾರಿ ರಿಯಾಜ್ ಪಟೇಲ್ ನಿರೂಪಿಸಿದರು.

ಬೆಳ್ಳಿ ಪದಕ ನೀಡಿ ಗೌರವ ವಡಗೇರಾ ತಾಲೂಕಿನ ತಾಪಂ ಇಓ ಮಲ್ಲಿಕಾರ್ಜನ ಸಂಗ್ವಾರ್ ಅವರಿಗೆ ನೀತಿ ಆಯೋಗದ ಆದೇಶದಂತೆ ಡಿಸಿ ಹರ್ಷಲ್ ಭೋಯರ್ ಅವರು ಬೆಳ್ಳಿಪದಕ ನೀಡಿ ವಿಶೇಷವಾಗಿ ಸನ್ಮಾನಿಸಿದರು. ವಿವಿಧ ಇಲಾಖೆಗಳ ಸುಮಾರು 90 ಜನರಿಗೆ ಪ್ರಮಾಣ ಪತ್ರ ನೀಡಿ ಗೌರವಿಸಲಾಯಿತು.

ಸೀರೆ ಖರೀದಿಸಿದ ಡಿಸಿ ! ಇಂದಿನಿಂದ ಮೂರು ದಿನಗಳವರೆಗೂ ಇರುವ ಆಕಾಂಕ್ಷಾ ಹಾಟ್ ನ ವಿವಿಧ ಮಳಿಗೆಗಳಿಗೆ ಚಾಲನೆ ನೀಡಿದ ಡಿಸಿ ಹರ್ಷಲ್ ಭೋಯರ್ ಅವರು ಸಿರಿ ಮಳಿಗೆ ಕಾಣುತ್ತಲೇ ಅಲ್ಲಿಗೆ ತೆರಳಿ ಸೀರೆಯೊಂದು ಖರೀದಿಸಿರು. ಅದೇ ರೀತಿ ಪೆನ್ಸಿಲ್ ಇತರೆ ವಸ್ತುಗಳನ್ನು ಸಹ ಹಣ ನೀಡಿ ಖರೀದಿಸಿದ್ದು ಗಮನ ಸೆಳೆಯಿತು. ಈ ವೇಳೆ ಅಲ್ಲಿ ಹಾಕಲಾಗಿರುವ ವಿವಿಧ ವಸ್ತುಗಳ ಮಾರಾಟದ ಸುಮಾರು 15ಕ್ಕೂ ಹೆಚ್ಚು ಮಳಿಗೆಗಿಗೆ ಎಸ್ಪಿ ಪ್ರಥ್ವಿಕ್ ಶಂಕರ್, ಜಿಪಂ ಸಿಇಓ ಲವೀಶ್ ಓರ್ಡಿಯಾ ಅವರ ಜೊತೆ ಭೇಟಿ ನೀಡಿದ ಡಿಸಿ ಅಲ್ಲಿನ ವಿವಿಧ ವಸ್ತುಗಳ ಬಗ್ಗೆ ತಿಳಿದುಕೊಂಡರು. ಮೂರು ದಿನಗಳ ಈ ಆಕಾಂಕ್ಷಾ ಹಾಟ್ ಸ್ಥಳಕ್ಕೆ ಜನರು ಹೆಚ್ಚಿಗೆ ಬಂದು ವಸ್ತುಗಳನ್ನು ಖರೀದಿಸಿ ವ್ಯಾಪಾರಕ್ಕೆ ಪ್ರೋತ್ಸಾಹ ನೀಡಬೇಕೆಂದರು.

### ಆರೋಗ್ಯಕರ ಸಮಾಜ ನಿರ್ಮಾತೃ ಡಾ. ಮಹಾಂತ ಶಿವಯೋಗಿಗಳ

# ಜನ್ಮ ದಿನ : ಆಗಸ್ಟ್ 1 ವ್ಯಸನ ಮುಕ್ತ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಜು.30:ದುರ್ವ್ಯಸನಗಳು ಹಾಗೂ ದುಶ್ಚಟಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಿ, ಮನಪರಿವರ್ತಿಸಿ, ಜನರಲ್ಲಿನ ದುಶ್ಚಟಗಳನ್ನೇ ತಮ್ಮ ಜೋಳಿಗೆಯಲ್ಲಿ ಭಿಕ್ಷೆಯ ರೂಪದಲ್ಲಿ ಸಂಗ್ರಹಿಸಿ ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಶ್ರಮಿಸಿದವರು ಡಾ|| ಮಹಾಂತ ಶಿವಯೋಗಿಗಳು, ಬಾಗಲಕೋಟೆಯ ಜಮಖಂಡಿ ತಾಲೂಕಿನ ಹಿಪ್ಪರಗಿ ಗ್ರಾಮದಲ್ಲಿ ಆಗಸ್ಟ್ 1, 1930 ರಲ್ಲಿ ಜನಿಸಿದ ಡಾ|| ಮಹಾಂತ ಶಿವಯೋಗಿಗಳು ತಮ್ಮ 10ನೇ ವಯಸ್ಸಿಗೆ ಸವದಿಯ ವಿರಕ್ತಮಠದ ಕಿರಿಯ ಸ್ವಾಮೀಜಿಗಳಾದರು.

ಕಾಶಿಯಲ್ಲಿ ಸಂಸ್ಕೃತ, ಹಿಂದಿ, ಯೋಗ, ಶಾಸ್ತ್ರೀಯ ಸಂಗೀತದಲ್ಲಿ ವಿಶೇಷ ಪರಿಣಿತಿ ಸಾಧಿಸಿದರು. ಉತ್ತರ ಕರ್ನಾಟಕದಲ್ಲಿ ಭೀಕರ ಬರಗಾಲ ಬಂದ ಕಾರಣ ಕಾಶಿಯಿಂದ ಆಗಮಿಸಿ, ನೂರಾರು ಗ್ರಾಮಗಳಲ್ಲಿ ಗಂಜಿ ಕೇಂದ್ರ ಆರಂಭಿಸಿ ದಾಸೋಹ ಮಾಡಿದ್ದು ಮಾತ್ರವಲ್ಲದೇ ಗೋಶಾಲೆಗಳನ್ನು ಆರಂಭಿಸಿ ಮೇವು ಮತ್ತು ನೀರಿನ ವ್ಯವಸ್ಥೆ ಮಾಡಿದರು.

1970 ರಲ್ಲಿ ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರ ಸಂಸ್ಥಾನ ಮಠದ 19ನೇ ಪೀಠಾಧಿಕಾರಿಯಾಗಿ ನಂತರ 2018 ರ ವರೆಗೆ ಅಖಂಡ 48 ವರ್ಷಗಳ ಕಾಲ ಅವರ ಸಾಧನೆ ಅಪಾರವಾದುದು. ನಿರಂತರ ಅನ್ನ ದಾಸೋಹ, ವಚನ ಮಾಂಗಲ್ಯ, ದೇವದಾಸಿ ವಿಮೋಚನಾ ಸಂಸ್ಥೆ, ದೇವದಾಸಿಯರ ಮಕ್ಕಳಿಗೆ ಟ್ರಸ್ಟ್ ಸ್ಥಾಪನೆ, ನಿರುದ್ಯೋಗಿಗಳಿಗೆ ಮತ್ತು ವಿಧವೆಯರಿಗೆ ಕಾಯಕ ಸಂಜೀವಿನಿ ಸಂಸ್ಥೆ ಸ್ಥಾಪನೆ, ನಿಸರ್ಗ ಚಿಕಿತ್ಸೆ–ಯೋಗ ಕೇಂದ್ರ ಸ್ಥಾಪನೆ, ಶಾಖಾ ಮಠಗಳಿಗೆ ಪ.ಜಾತಿ ಮತ್ತು ಪಂಗಡಗಳ ಯುವಕರಿಗೆ ಧರ್ಮ ಸಂಸ್ಕಾರ ನೀಡಿ ಪಟ್ಟಾಭಿಷೇಕ ಮಾಡಿದ್ದು, ಮಹಿಳಾ ಸಾಧಕಿಯರಿಗೆ ಜಂಗಮ ದೀಕ್ಷೆ ನೀಡಿ ಮಠಾಧಿಕಾರಿಯನ್ನಾಗಿ ಮಾಡಿದ್ದು, ಮಠದ ನೂರಾರು ಎಕರೆ ಭೂಮಿಯನ್ನು ಆಯಾ ಗ್ರಾಮಗಳ ರೈತರಿಗೆ ಕೃಷಿ ಮಾಡಿ ಬದುಕಲು ನೀಡಿದ್ದು ಮುಂತಾದ ಹಲವು ಸಮಾಜಮುಖಿ ಕಾರ್ಯಗಳನ್ನು ಮಾಡಿದರು.

ಪ್ರಮುಖವಾಗಿ ಸ್ವಾಮೀಜಿಯವರು ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ 1975 ರಿಂದ ಕೈಗೊಂಡ ಮಹಾಂತ ಜೋಳಿಗೆ ಕಾರ್ಯಕ್ರಮ ಅತ್ಯಂತ ವಿಶಿಷ್ಟವಾದುದು, ಕುಡಿತದ ಚಟದಿಂದ ಪ.ಜಾತಿಯ ಯುವಕನೊಬ್ಬ ನಿಧನದ ಸುದ್ದಿ ಕೇಳಿ ಅವನ ಕೇರಿಗೆ ಸಾಂತ್ವನ ಹೇಳಲು ತೆರಳಿದ್ದ ಸ್ವಾಮಿಗಳಿಗೆ ಆತನ ಪತ್ನಿ ಮತ್ತು ಮಕ್ಕಳು ಉಪವಾಸದಿಂದ ದು:ಖಿಸುವುದನ್ನು ಕಂಡರು. ಇಂತಹ ಸಾವಿರಾರು ಕುಟುಂಬಗಳ ಕುಡಿತ ಮತ್ತು ಇತರೇ ದುಶ್ಚಟಗಳಿಂದ ಹಾಳಾಗಿರುವುದನ್ನು ಅರಿತು, ಇಂತಹ ದುಶ್ಚಟಗಳಿಗೆ ಒಳಗಾಗಿರುವವನ್ನು ಮುಕ್ತಿಗೊಳಿಸುವ ಉದ್ದೇಶದಿಂದ ಮಹಾಂತ ಜೋಳಿಗೆ ಯೋಜನೆ ಆರಂಭಿಸಿದರು. ಬಟ್ಟೆಯ ಚೀಲದ ಜೋಳಿಗೆ ಹಿಡಿದು, ಕುಡಿತದ ಚಟದಿಂದ ನಿಧನನಾದ ಪ.ಜಾತಿಯ ಯುವಕನ ಕೇರಿಗೆ ಮೊದಲಿಗೆ ತೆರಳಿದ ಸ್ವಾಮೀಜಿಗಳು, ಅಲ್ಲಿನ ಗುಡಿಸಲು ಮನೆಗಳಿಗೆ ತೆರಳಿ ಮದ್ಯಪಾನ, ತಂಬಾಕು ಸೇರಿದಂತೆ ಎಲ್ಲಾ ರೀತಿಯ ದುಶ್ಚಟಗಳ ಬಗ್ಗೆ ಅಲ್ಲಿನ ಜನತೆಗೆ ಮನ ಮುಟ್ಟುವಂತೆ ತಿಳುವಳಿಕೆ ನೀಡಿ ಮನಪರಿವರ್ತನೆ ಮಾಡಿದರು.

ದುರ್ವಸನಿಗಳು ತಮ್ಮ ಎಲ್ಲಾ ದುಶ್ಚಟಗಳ ವಸ್ತುಗಳನ್ನು ಸ್ವಾಮೀಜಿ ಅವರ ಜೋಳಿಗೆಗೆ ಹಾಕಿ, ಇನ್ನೆಂದೂ ಅವುಗಳನ್ನು ಬಳಸುವುದಿಲ್ಲ ಎಂದು ಪ್ರಮಾಣ ಮಾಡಿದರು.

ಜಾತಿ–ಮತ–ಪಂಗಡ–ಧರ್ಮ–ಭಾಷೆ–ದೇಶವೆನ್ನದೇ ಇಡೀ 42 ವರ್ಷಗಳ ಕಾಲ ದೇಶದಲ್ಲಿ ಮಾತ್ರವಲ್ಲದೇ ಇಂಗ್ಲೆಂಡ್ ಸೇರಿದಂತೆ ವಿದೇಶದಲ್ಲೂ ತಮ್ಮ ಮಹಾಂತ ಜೋಳಿಗೆ ಹಿಡಿದು ಜನರಲ್ಲಿನ ದುಶ್ಚಟಗಳ ಭಿಕ್ಷೆ ಬೇಡಿದರು.

ಮಹಾಂತ ಶಿವಯೋಗಿಗಳು ವ್ಯಸನ ಮುಕ್ತ ವ್ಯಕ್ತಿ–ಕುಟುಂಬ–ಸಮಾಜ–ಗ್ರಾಮಗಳ ನಿರ್ಮಾಣ ಮಾಡುವ ಜೊತೆಗೆ ತಮ್ಮ ಜೋಳಿಗೆ ಕಾರ್ಯಕ್ರಮದಲ್ಲಿ ನಾಡಿನ ಪ್ರಖ್ಯಾತ ವೈದ್ಯರು, ಸಮಾಜ ವಿಜ್ಞಾನಿಗಳು, ಸಾಹಿತಿಗಳು, ಸಮಾಜ ಕಳಕಳಿಯ ಕವಿಗಳು, ಧರ್ಮ ಗುರುಗಳನ್ನು ಆಹ್ವಾನಿಸಿ ಅವರಿಂದ ಉಪನ್ಯಾಸಗಳನ್ನು ಮಾಡಿಸುವ ಮೂಲಕ ವ್ಯಸನಗಳ ಮನಪರಿವರ್ತನೆ ಮಾಡುವುದರ ಜೊತೆಗೆ ಮಕ್ಕಳು, ವಿದ್ಯಾರ್ಥಿಗಳು–ಯುವ ಜನಾಂಗ ಇಂತಹ ಚಟಗಳಿಗೆ ಬಲಿಯಾಗದಂತೆ ಅರಿವು ಮೂಡಿಸುತ್ತಿದ್ದರು. ಇದರಿಂದಾಗಿ ಲಕ್ಷಾಂತರ ಜನ ವ್ಯಸನಗಳಿಂದ ಮುಕ್ತರಾಗಿ ಅವರ ಕುಟುಂಬಗಳು ನೆಮ್ಮದಿಯ ಜೀವನ ಸಾಗಿಸುತ್ತಿವೆ. ಡಾ. ಮಹಾಂತ ಶಿವಯೋಗಿ ಅವರ ಜನ್ಮ ದಿನವಾದ ಆಗಸ್ಟ್ 1 ನ್ನು ರಾಜ್ಯ ಸರ್ಕಾರವು ರಾಜ್ಯಾದ್ಯಂತ ವ್ಯಸನ ಮುಕ್ತ ದಿನವನ್ನಾಗಿ ಆಚರಿಸಲು ನಿರ್ಧರಿಸಿ ಆದೇಶಿಸಿದ್ದು, ಕರ್ನಾಟಕ ರಾಜ್ಯವನ್ನು ವ್ಯಸನ ಮುಕ್ತ ರಾಜ್ಯವಾಗಿ ಮಾಡಲು ಸಾರ್ವಜನಿಕರು ಹಾಗೂ ಯುವಜನತೆ ವ್ಯಸನಗಳಿಂದ ಮುಕ್ತವಾಗಲು ಈ ದಿನಾಚರಣೆ–ಯು ಪ್ರೇರಣೆಯಾಗಲಿದೆ.

ಆಗಸ್ಟ್ 1 ರಂದು ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದ ಎಲ್ಲಾ ಇಲಾಖೆಗಳು ಸಮನ್ವಯದೊಂದಿಗೆ ಶಾಲಾ ಕಾಲೇಜು ವಿದ್ಯಾರ್ಥಿಗಳು ಸಾರ್ವಜನಿಕರನ್ನು ಒಗ್ಗೂಡಿಸಿ ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಕೈಜೋಡಿಸುವ ವಚನ ಪ್ರಮಾಣ ಹಾಗೂ ಜಯಂತಿ ಕಾರ್ಯಕ್ರಮ ಆಯೋಜಿಸಿ ಶ್ರೀಗಳ ಜಯಂತಿ ಆಚರಿಸಲಾಗುತ್ತಿದೆ.

# ಕಂದಾಯ ಗ್ರಾಮ ರಚನೆಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜುಲೈ 30–ಖಾಸಗಿ ಜಮೀನುಗಳಲ್ಲಿ ನೆಲೆಸಿರುವ ದಾಖಲೆ ರಹಿತ ಜನವಸತಿಗಳನ್ನು ಕಂದಾಯ ಗ್ರಾಮ ಅಥವಾ ಗ್ರಾಮದ ಭಾಗವಾಗಿ ಪರಿವರ್ತಿಸಿ ಅಲ್ಲಿಯ ನಿವಾಸಿಗಳಿಗೆ ಹಕ್ಕು ಪತ್ರ ನೀಡುವ ಕುರಿತು ಮಾನ್ಯ ಸರ್ಕಾರದ ಆದೇಶವಿದ್ದು, ಅದರಂತೆ ಜಿಲ್ಲೆಯಲ್ಲಿನ ಅರ್ಹ ಪ್ರಕರಣಗಳಲ್ಲಿ ಕಂದಾಯ ಗ್ರಾಮ ಮತ್ತು ಉಪ ಗ್ರಾಮಗಳನ್ನು ರಚನೆ ಮಾಡಲಾಗುತ್ತಿದ್ದು, ಜಿಲ್ಲೆಯ ಸಾರ್ವಜನಿಕರು ಅರ್ಹತೆ ಹೊಂದಿದಲ್ಲಿ ಸಂಬಂಧಿಸಿದ ತಾಲೂಕು ಕಾರ್ಯಾಲಯಗಳಲ್ಲಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಲ್ಯಾಣ ಕರ್ನಾಟಕ ವಿಭಾಗ ಮಟ್ಟದ ಮಾಧ್ಯಮ ತರಬೇತಿ : ಪತ್ರಕರ್ತರಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯದಗಿರಿ: ಕರ್ನಾಟಕ ಮಾಧ್ಯಮ ಅಕಾಡೆಮಿಯು ದಿನಾಂಕ 6–8–2025 ರಂದು ಬೀದರ್‌ನಲ್ಲಿ ಕಲ್ಯಾಣ ಕರ್ನಾಟಕ ವಿಭಾಗ ಮಟ್ಟದ ಮಾಧ್ಯಮ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಿದೆ.

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಶ್ರೀ ಈಶ್ವರ್ ಖಂಡ್ರೆ ಅವರು ಸಮಾರಂಭವನ್ನು ಉದ್ಘಾಟಿಸಲಿದ್ದು, ಪರಿಸರ ಸಂರಕ್ಷಣೆಯಲ್ಲಿ ಮಾಧ್ಯಮಗಳ ಪಾತ್ರದ ಕುರಿತು ಮಾತನಾಡಲಿದ್ದಾರೆ. ಪೌರಾಡಳಿತ ಸಚಿವ ಶ್ರೀ ರಹೀಂ ಖಾನ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ತರಬೇತಿ ಕಾರ್ಯಕ್ರಮದಲ್ಲಿ “ನ್ಯೂಸ್ ರೂಂ ನಲ್ಲಿ ಎಐ ಮತ್ತು ನಾನು” ಹಾಗೂ "ಸುದ್ದಿಯಲ್ಲಿ ನಿಖರತೆ ಮತ್ತು ಪರಿಣಾಮಕಾರಿ ಸಂವಹನ" ಎಂಬ ವಿಷಯಗಳ ಕುರಿತು ಗೋಷ್ಠಿ ಹಾಗೂ ಸಂವಾದ ನಡೆಯಲಿದೆ.

ಕಲ್ಯಾಣ ಕರ್ನಾಟಕ ಭಾಗದ ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ, ವಿಜಯನಗರ ಹಾಗೂ ಬಳ್ಳಾರಿ ಜಿಲ್ಲೆಯ ಪತ್ರಕರ್ತರು ಈ ತರಬೇತಿಯಲ್ಲಿ ಭಾಗವಹಿಸಬಹುದು. ಈ ತರಬೇತಿಯು ಪತ್ರಕರ್ತರ ವೃತ್ತಿಕೌಶಲ್ಯವನ್ನು ಉತ್ತಮಪಡಿಸುವ ಉದ್ದೇಶದಿಂದ ಹಮ್ಮಿಕೊಳ್ಳಲಾಗಿದೆ. ಪತ್ರಕರ್ತರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧ್ಯಕ್ಷೆ ಶ್ರೀಮತಿ ಆಯೇಶಾ ಖಾನಂ ತಿಳಿಸಿದ್ದಾರೆ.

ಕಲ್ಯಾಣ ಕರ್ನಾಟಕದ ಇತರ ಜಿಲ್ಲೆಗಳಿಂದ ಆಗಮಿಸುವ ಮುಂಚಿತವಾಗಿಯೇ ನೋಂದಾಯಿಸಿಕೊಂಡಿರುವ ಪತ್ರಕರ್ತರಿಗೆ ತರಬೇತಿ ದಿನದಂದು ವಸತಿ ಸೌಲಭ್ಯ ಒದಗಿಸಲಾಗುವುದು. ಆಸಕ್ತರು https://forms.gle/uwoA67T1b5gB-PDuB8 ಗೂಗಲ್ ಫಾರ್ಮ್ ಭರ್ತಿ ಮಾಡಿ ಆಗಸ್ಟ್ 2 ರೊಳಗೆ ನೋಂದಾಯಿಸಿಕೊಳ್ಳುವಂತೆ ಈ ಮೂಲಕ ಕೋರಿದೆ.

# ವೀರಶೈವ ಲಿಂಗಾಯ ಪಂಚಸಾಲಿ ನೌಕರರ ಘಟಕಕ್ಕೆ ಪದಾಧಿಕಾರಿಗಳ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು: ಲಿಂಗಸುಗೂರು ತಾಲೂಕು ಹಾಗೂ ರಾಯಚೂರು ಜಿಲ್ಲೆಯ ವೀರಶೈವ ಲಿಂಗಾಯತ ಪಂಚಮಸಾಲಿ ಸಮುದಾಯ ಹಾಗೂ ಪಂಚಮಸಾಲಿ ಸಮುದಾಯದ ನೌಕರರ ಸಂಘಕ್ಕೆ ಹೊಸದಾಗಿ ಪದಾಧಿಕಾರಿಗಳ ಆಯ್ಕೆ ಮಾಡಲಾಗಿದೆ.

ದೇವರಾಜ ನಾಡಗೌಡ ಅಧ್ಯಕ್ಷ, ಸಂಗಣ್ಣ ಕೊಮನೂರು ಉಪಾಧ್ಯಕ್ಷ, ಲಿಂಗರಾಜ ಮಾ.ಪಾ. ಪ್ರದಾನ ಕಾರ್ಯದರ್ಶಿ, ಬಸವರಾಜ ಗಸ್ತಿ ಸಂಘಟನಾ ಕಾರ್ಯದರ್ಶಿ, ಖಜಾಂಚಿ ನಾಗಪ್ಪ ಬೋದಾವತ್, ಶರಣಪ್ಪ ಬಂಡಿ ಸಹ ಕಾರ್ಯದರ್ಶಿ ಆಯ್ಕೆ ಮಾಡಲಾಗಿದೆ.

ಮಹಾಂತೇಶ ಪಾಟೀಲ್ ಜಿಲ್ಲಾಧ್ಯಕ್ಷ, ವೀರೇಶ ತೇರೆದಾಳ ಜಿಲ್ಲಾ ನೌಕರರ ಘಟಕದ ಅಧ್ಯಕ್ಷ, ವಿಜಯ ಲಕ್ಷ್ಮೀ ದೇಸಾಯಿ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ, ಡಾ.ಸುಭಾಸ್ ಪಲ್ಲೇದ ತಾಲೂಕ ಅಧ್ಯಕ್ಷ, ವಿರೇಶ ಪಾಟೀಲ್ ಯುವ ಘಟಕದ ಅಧ್ಯಕ್ಷ, ದೇವಪುತ್ರ ಸರ್ಜಾಪುರ ಪ್ರದಾನ ಕಾರ್ಯದರ್ಶಿ, ಅಮರೇಗೌಡ ಪಾಟೀಲ್ ಬೆಂಡೋಣಿ ಉಪಾಧ್ಯಕ್ಷ, ವಿಜಯ ಕುಮಾರ ಕಾಳಾಪುರ ಉಪಾಧ್ಯಕ್ಷ, ಸಂಗಪ್ಪ ನಗಿಮುಖದ ಉಪಾಧ್ಯಕ್ಷ, ಅಮರೇಗೌಡ ಕಾರ್ಯದರ್ಶಿ, ಅಮರೇಶ ತಾವರಗೇರೆ ಕಾರ್ಯದರ್ಶಿ, ಶಿವಕುಕಮಾರ ಎ.ಕಾಳಾಪುರ ಯುವ ಘಟಕದ ಕೋಶಾಧ್ಯಕ್ಷ, ಚಂದ್ರಶೇಖರ ಗೌಡೂರು ಜಿಲ್ಲಾ ಉಪಾಧ್ಯಕ್ಷ, ಶರಣಪ್ಪ ಜಾಲಹಳ್ಳಿ ರೈತ ಘಟಕದ ಅಧ್ಯಕ್ಷ ಆಯ್ಕೆ ಮಾಡಲಾಗಿದೆ.

ಫೋಟೋ01: ವೀರಶೈವಲಿಂಗಾಯ ಪಂಚಮಸಾಲಿ ಸಮುದಾಯಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ ಮಾಡಲಾಗಿದೆ.

## ಮಾನವ ಕಳ್ಳ ಸಾಗಾಣಿಕೆ ತಡೆಗೆ ಎಲ್ಲಾ ಇಲಾಖೆಗಳು ಒಗ್ಗೂಡಿ ಕೆಲಸ ಮಾಡಬೇಕು: ನ್ಯಾ.ರಾಜೇಶ್ ಎನ್.ಹೊಸಮನೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.30–ಮಾನವ ಕಳ್ಳ ಸಾಗಾಣಿಕೆ ತಡೆಗೆ ಎಲ್ಲಾ ಇಲಾಖೆಗಳ ಅಧಿಕಾರಿಗಳು ಒಗ್ಗೂಡಿ ಕೆಲಸ ಮಾಡಿದಾಗ ಮಾತ್ರ ಅದನ್ನು ತಡೆಯಲು ಸಾಧ್ಯವಾಗುತ್ತದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಹೇಳಿದರು.

ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ "ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ" ನಗರದ ಜಿಲ್ಲಾ ಪಂಚಾಯತ್ ನ ನಜೀರ್ ಸಾಬ್ ಸಭಾಗಂಣದಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ವಿವಿಧ ಸಹಭಾಗೀದಾರರ ಇಲಾಖೆಯ ಅಧಿಕಾರಿಗಳಿಗೆ ಹಾಗೂ ಕಾವಲು ಸಮಿತಿಯ ಸದಸ್ಯರಿಗೆ ಬುಧವಾರ ಏರ್ಪಡಿಸಿದ್ದ ಜಿಲ್ಲಾ ಮಟ್ಟದ ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಮಾನವನನ್ನು ಕೊಂಡುಕೊಳ್ಳಲು ಕಾನೂನಿನಲ್ಲಿ ಅವಕಾಶವಿಲ್ಲ. ಕಡಿಮೆ ವರ್ಷದ ಮಕ್ಕಳನ್ನು ದುಡ್ಡಿನ ಆಮೀಷ ಒಡ್ಡಿ ಮಾರಾಟ ಮಾಡಲಾಗುತ್ತಿದ್ದು, ಇದು ಕಾನೂನು ಪ್ರಕಾರ ತಪ್ಪು. ಸಮಾಜದಲ್ಲಿ ಇದೀಗ ಮಾನವ ಕಳ್ಳಸಾಗಾಣಿಕೆಯು ಬಹುದೊಡ್ಡ ಸಮಸ್ಯೆಯಾಗಿ ಬೆಳೆದಿದ್ದು,ಅದರಲ್ಲೂ ಮಾನವ ಕಳ್ಳಸಾಗಾಣಿಕೆಗೆ ಹೆಚ್ಚಾಗಿ ಬಲಿಯಾಗುತ್ತಿರುವವರು ಮಹಿಳೆಯರು ಮತ್ತು ಮಕ್ಕಳು. ಇದರಿಂದ ಎಲ್ಲರೂ ಎಚ್ಚೆತ್ತುಕೊಳ್ಳಬೇಕು ಎಂದರು.

ಬಡತನ,ನಿರುದ್ಯೋಗ,ತಂದೆ–ತಾಯಿಗಳಿಗೆ ವಿದ್ಯಾಭ್ಯಾಸದ ಕೊರತೆ ಇವೆಲ್ಲವೂ ಮಾನವ ಕಳ್ಳಸಾಗಾಣಿಕೆಗೆ ದಾರಿಯಾಗುತ್ತದೆ. ಮಹಿಳೆಯರು ಆಮಿಷಗಳಿಗೆ ಬಲಿಯಾಗಿ ಮೋಸ ಹೋಗುವುದನ್ನು ತಡೆಯಬೇಕು. ಮಕ್ಕಳನ್ನು ತುಂಬಾ ಜಾಗೃತೆಯಿಂದ ಬೆಳೆಸಲು ಹೆಚ್ಚು ಅರಿವು ಮೂಡಿಸುವ ಕಾರ್ಯವಾಗಬೇಕು ಎಂದರು.

ಅಂಗನವಾಡಿ ಕೇಂದ್ರ ಮತ್ತು ಶಾಲೆಗಳಲ್ಲಿ ಮಕ್ಕಳು ಗೈರಾಗಿದ್ದಲ್ಲಿ ಹಾಜರಾತಿ ನೀಡಬಾರದು. ಮನೆ ಭೇಟಿ ನೀಡಬೇಕು. ವಾಸ್ತವ ಪರಿಶೀಲಿಸಬೇಕು. ಇದರಿಂದ ಆ ಮಗು ನಾಪತ್ತೆ, ಬಾಲ್ಯವಿವಾಹ, ಬಾಲಕಾರ್ಮಿಕ ಪದ್ಧತಿಯಲ್ಲಿ ತೊಡಗಿಕೊಂಡಿದೆ ಎಂಬುದು ಪತ್ತೆಯಾಗುತ್ತದೆ. ಮಗು ಗೈರಾಗಿದ್ದು, ಹಾಜರಾತಿ ನೀಡಿದಲ್ಲಿ ಆ ದಿನ ಆ ಮಗು ಕಾಣೆಯಾಗಿದ್ದಲ್ಲಿ ಅಥವಾ ಬಾಲ್ಯವಿವಾಹದಂತಹ ಘಟನೆ ಸಂಭವಿಸಿದಲ್ಲಿ ನೀವೇ ಜವಾಬ್ದಾರರಾಗುತ್ತೀರಿ ಎಂದು ಅಂಗನವಾಡಿ ಕಾರ್ಯಕರ್ತೆಯರಿಗೆ ಎಚ್ಚರಿಸಿದರು.

ಮಕ್ಕಳಿಗೆ ಕಾನೂನಿನಾತ್ಮಕ ಸೌಲಭ್ಯಗಳನ್ನು ದೊರಕಿಸಿಕೊಟ್ಟಾಗಾ ಮಗುವು ಬಲಿಷ್ಠವಾಗಿ ಬೆಳೆಯುತ್ತದೆ ಹಾಗೂ ದೇಶವು ಸುಭೀಕ್ಷ ರಾಷ್ಟ್ರವಾಗಿ ಬೆಳೆಯಲಿದೆ ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್‌ನ ಉಪ ಕಾರ್ಯದರ್ಶಿ ಶಶಿಕಾಂತ ಶಿವಪೂರೆ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಸಮಾಜದಲ್ಲಿನ ಅಪ್ರಾಪ್ತ ಮಕ್ಕಳು, ಮಹಿಳೆಯರು ಸೇರಿದಂತೆ ವ್ಯಕ್ತಿಗಳನ್ನು ಕಳ್ಳ ಸಾಗಾಣಿಕೆ ಮಾಡಿ ಲೈಂಗಿಕ ಶೋಷಣೆ, ಭಿಕ್ಷಾಟನೆ, ಜೀತ, ಬಾಲ ಕಾರ್ಮಿಕರ ಕೆಲಸ, ಅಂಗಾಂಗ ಕಸಿ, ಬಾಲ್ಯ ವಿವಾಹ ಮತ್ತು ವೇಶ್ಯೆವಾಟಿಕೆ ಚಟುವಟಿಕೆಗಳಲ್ಲಿ ಬಳಸಿಕೊಳ್ಳಲಾಗುತ್ತಿದ್ದು, ಈ ಕುರಿತು ಸಾರ್ವಜನಿಕರಲ್ಲಿ ಕಾನೂನು ಮತ್ತು ಶಿಕ್ಷೆ ಬಗ್ಗೆ ಜಾಗೃತಿ ಮೂಡಿಸಿ ಸಂಪೂರ್ಣವಾಗಿ ನಿರ್ಮೂಲನೆಯಾಗಿಸಲು ಅಧಿಕಾರಿಗಳು ಕಾರ್ಯನಿರ್ವಹಿಸಬೇಕಿದೆ ಎಂದು ಹೇಳಿದರು.

ಪ್ರತಿಯೊಬ್ಬರೂ ಸಾಮಾಜಿಕ ಜಾಲತಾಣ ಬಳಕೆಯಲ್ಲಿ ಎಚ್ಚರವಹಿಸಬೇಕು. ನಿಮ್ಮ ಆಸಕ್ತಿಗಳನ್ನು ಬೇರೊಬ್ಬರೂ ಕದ್ದಾಲಿಸುವುದನ್ನು ಸಹ ನಾವು ಗಮನಿಸಬೇಕಿದೆ. ಇದರಿಂದ ಜಾಗರೂಕರಾಗಬೇಕಿದೆ ಎಂದು ತಿಳಿಸಿದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎಳೆ ನಾಗಪ್ಪ ಅವರು ಮಾತನಾಡಿ, ಮಾನವ ಕಳ್ಳ ಸಾಗಾಣಿಕೆ ದಂಧೆಯು ಸಮಾಜದ ಕಪ್ಪು ಚುಕ್ಕೆಯಾಗಿ ಪರಿಣಮಿಸಿದ್ದು, ಮಾನವ ಕಳ್ಳ ಸಾಗಾಣಿಕೆಯು ವಿದ್ಯಾವಂತರಿಂದಲೇ ನಡೆಯುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ ಎಂದು ವಿಷಾಧ ವ್ಯಕ್ತಪಡಿಸಿದರು.

ಕಾರ್ಯಾಗಾರದಲ್ಲಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಮಾಜಿ ಅಧ್ಯಕ್ಷರು ಹಾಗೂ ವಕೀಲರಾದ ತ್ರಿವೇಣಿ ಪತ್ತಾರ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ "ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ" ಕುರಿತು ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಾಗಾರ ಆರಂಭಕ್ಕೂ ಮುನ್ನ ನ್ಯಾಯಾಧೀಶರಾದ ರಾಜೇಶ್ ಎನ್. ಹೊಸಮನೆ ಅವರು ಪ್ರತಿಜ್ಞಾವಿಧಿ ಬೋಧಿಸಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಸವಿತ.ಸಿ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭದಲ್ಲಿ ಮಹಿಳಾ ಪೊಲೀಸ್ ಠಾಣೆಯ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಹನುಮಂತಪ್ಪ, ಬಳ್ಳಾರಿ (ನಗರ) ಹಾಗೂ (ಗ್ರಾಮಾಂತರ) ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮೋಹನ್ ಕುಮಾರಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಾನೂನು ಪರಿವೀಕ್ಷಣಾಧಿಕಾರಿ ಈಶ್ವರ್ ರಾವ್ ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಯರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು ಹಾಗೂ ಇನ್ನೀತರರು ಉಪಸ್ಥಿತರಿದ್ದರು.

## ಸಾಂಕ್ರಾಮಿಕ ರೋಗಗಳು ಹರಡದಂತೆ ಎಚ್ಚರಿಕೆ ವಹಿಸಿ: ಡಿಹೆಚ್‌ಓ ಡಾ.ಯಲ್ಲಾ ರಮೇಶ್ ಬಾಬು

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.30–ತುಂಗಭದ್ರಾ ನದಿಗೆ ಹೆಚ್ಚುವರಿ ನೀರು ಬಿಟ್ಟಿರುವ ಹಿನ್ನಲೆಯಲ್ಲಿ ಪ್ರವಾಹದ ನೀರು ಬ್ಯಾಕ್ಟೀರಿಯಾ, ವೈರಸ್ ಮತ್ತು ಇತರೆ ರೋಗಾಣುಗಳಿಂದ ಕಲುಷಿತಗೊಂಡಿರಬಹುದಾಗಿದ್ದು, ಸಾರ್ವಜನಿಕರು ಎಚ್ಚರವಹಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಹೇಳಿದರು.

ಬುಧವಾರ ಕಂಪ್ಲಿ ಪಟ್ಟಣದ ಕೋಟೆ ಪ್ರದೇಶಕ್ಕೆ ಭೇಟಿ ನೀಡಿ ಸಾರ್ವಜನಿಕರಿಗೆ ಮುಂಜಾಗ್ರತಾ ಕ್ರಮಗಳ ಬಗ್ಗೆ ಮಾಹಿತಿ ನೀಡುತ್ತಾ, ನೀರಿನ ಹರಿಯುವ ಮಟ್ಟ ಹೆಚ್ಚಾಗಿ ಹಾವು ಚೇಳು ಇತರೆ ವಿಷ ಜಂತುಗಳು ಜನವಾಸ ಪ್ರದೇಶಕ್ಕೆ ಬರುವ ಸಂಭವವಿದೆ. ನೀರಿನ ಹರಿವಿನಿಂದ ಅಪಾಯ ಸಂಭವಿಸುವ ಸಂದರ್ಭದಲ್ಲಿ ಸುರಕ್ಷತೆಗಾಗಿ ಎತ್ತರದ ಪ್ರದೇಶಗಳಿಗೆ ಸ್ಥಳಾಂತರಗೊಳ್ಳಬೇಕು ಎಂದು ತಿಳಿಸಿದರು.

ಹಾವು ನಂಜು ನಿರೋಧಕ ಲಸಿಕೆ, ಓ.ಆರ್.ಎಸ್ ದ್ರಾವಣ, ನೆಗಡಿ ಕೆಮ್ಮು ಜ್ವರದ ಮಾತ್ರೆ, ಐ.ವಿ.ಫ್ಲೂಡ್, ಹ್ಯಾಲೋಜನ್ ಮಾತ್ರೆ, ಬ್ಲೀಚಿಂಗ್ ಪೌಡರ್ ಇತರೆ ಚಿಕಿತ್ಸಾ ಸೇವಾ ಸೌಲಭ್ಯಗಳು ಸಾಕಷ್ಟು ಪ್ರಮಾಣದಲ್ಲಿ ಮುಂಚೂಣಿಯಾಗಿ ಸಂಗ್ರಹಿಸಿ ಎಚ್ಚರಿಕೆ ವಹಿಸಲಾಗಿದೆ ಎಂದರು.

ಸಮುದಾಯದಲ್ಲಿ ಗೃಹ ಆರೋಗ್ಯ ಕಾರ್ಯಕ್ರಮ, ಗರ್ಭಿಣಿ, ಗಂಡಾಂತರ ಗರ್ಭಿಣಿಯರ ಕಾಳಜಿ, ಸುಸೂತ್ರ ಹೆರಿಗೆ ಸೌಲಭ್ಯ, ತಾಯಿ ಮಗುವಿನ ಆರೈಕೆ ಕುರಿತಂತೆ ಆರೋಗ್ಯ ಪರ ಕ್ರಮಗಳನ್ನು ಅನುಸರಿಸಬೇಕು. ಅಪಾಯಕಾರಿ ಪ್ರದೇಶಗಳಲ್ಲಿನ ಜನಾರೋಗ್ಯ ಸಮೀಕ್ಷೆ ಪ್ರತಿದಿನ ನಡೆಸಬೇಕು. ಸಾಂಕ್ರಾಮಿಕ ರೋಗಗಳು ಹರಡದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಆರೋಗ್ಯ ಸಿಬ್ಬಂದಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ದಿಶಾ ಸಮಿತಿಯ ಸದಸ್ಯ ಎ.ಸಿ.ದಾನಪ್ಪ, ಆರೋಗ್ಯ ಮೇಲ್ವಿಚಾರಕ ಟಿ.ವಿರೂಪಾಕ್ಷಪ್ಪ, ತಾಲ್ಲೂಕ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಬಸವರಾಜ್ ಸೇರಿದಂತೆ ಆಶಾ ಕಾರ್ಯಕರ್ತೆಯರು ಹಾಜರಿದ್ದರು.

## ಕೆಎಸ್‌ಆರ್ ಟಿಸಿ ಬಸ್ ಡಿಕ್ಕಿ ಯುವಕರಿಬ್ಬರ ಸಾವು

ಮಲ್ಲಮ್ಮ ನುಡಿ ವಾರ್ತೆ

ಕೋಲಾರ,ಜು.28–ವೇಗವಾಗಿ ಬಂದ ಕೆಎಸ್‌ಆರ್ ಟಿಸಿ ಬಸ್ ಡಿಕ್ಕಿ ಹೊಡೆದು ಬೈಕ್ ನಲ್ಲಿ ಹೋಗುತ್ತಿದ್ದ ಇಬ್ಬರು ಮೃತಪಟ್ಟಿರುವ ದಾರುಣ ಘಟನೆ ಕೆಜಿಎಫ್ ತಾಲೂಕಿನ ಗೊಲ್ಲಹಳ್ಳಿ ಬಳಿ ಸಂಭವಿಸಿದೆ.

ಮೃತರು ಪೌಲ್ಟ್ರಿ ಫಾರಂನಲ್ಲಿ ಕೆಲಸ ಮಾಡುತ್ತಿದ್ದ ಅಭಿಷೇಕ್ ಗೌಡ (30) ಮತ್ತು ಸಭ್ಯ (29) ಮೃತಪಟ್ಟವರು. ಇವರಿಬ್ಬರು ಬೈಕ್ ನಲ್ಲಿ ಕೆಲಸದ ನಿಮಿತ್ತ ಹೋಗುತ್ತಿದ್ದಾಗ ಮಾರ್ಗ ಮಧ್ಯದ ಕೆಜಿಎಫ್ ತಾಲೂಕಿನ ಗೊಲ್ಲಹಳ್ಳಿ ಬಳಿ ಕೆಎಸ್‌ಆರ್ ಟಿಸಿ ಬಸ್ ಡಿಕ್ಕಿ ಹೊಡೆದಿದೆ.

ಡಿಕ್ಕಿಯ ರಭಸಕ್ಕೆ ಗಂಭೀರವಾಗಿ ಗಾಯಗೊಂಡ ಇವರಿಬ್ಬರೂ ಮೃತಪಟ್ಟಿದ್ದು, ಪ್ರಕರಣ ದಾಖಲಿಸಿ ಸ್ಥಳಕ್ಕೆ ಧಾವಿಸಿ ಪರಿಶೀಲನೆ ಕೈಗೊಂಡ ಬೇತಮಂಗಲ ಪೋಲೀಸರು ಮುಂದಿನ ತನಿಖೆಯನ್ನು ಕೈಗೊಂಡಿದ್ದಾರೆ.

## ಬೆಳೆ ವಿಮೆ ನೋಂದಣಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.30–ತೋಟಗಾರಿಕೆ ಇಲಾಖೆ ವತಿಯಿಂದ 2025–26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಮರುವಿನ್ಯಾಸಗೊಳಿಸಿದ ಹವಾಮಾನಾಧಾರಿತ ಬೆಳೆ ವಿಮೆ ಯೋಜನೆಯಡಿ ನೋಂದಣಿ ಪ್ರಕ್ರಿಯೆ ಆರಂಭವಾಗಿದ್ದು, ರೈತರು ನೋಂದಾಯಿಸಿಕೊಳ್ಳಬೇಕು ಎಂದು ತೋಟಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

ಪ್ರಕೃತಿ ವಿಕೋಪಗಳು/ಹವಾಮಾನ ವೈಪರೀತ್ಯಗಳಾದ ಅತಿವೃಷ್ಟಿ, ಅನಾವೃಷ್ಟಿ, ಬಿರುಗಾಳಿ, ಆಲಿಕಲ್ಲು ಮಳೆ, ಪ್ರವಾಹ, ಸಿಡಿಲಿನಿಂದ ಉಂಟಾಗುವ ಬೆಂಕಿ ಅವಘಡ ಇತ್ಯಾದಿ ಕಾರಣಗಳಿಂದ ಸಂಭವಿಸಬಹುದಾದ ಬೆಳೆಹಾನಿಯ ನಷ್ಟದ ಪರಿಹಾರವನ್ನು ಬೆಳೆ ವಿಮೆ ಘಟಕವಾರು ನಿರ್ಧರಿಸಿ ಬೆಳೆ ನಷ್ಟದ ಪರಿಹಾರ ನೀಡುವುದರ ಮೂಲಕ ರೈತರಿಗೆ ನೆರವಾಗುತ್ತದೆ.

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಅನುಷ್ಠಾನಗೊಳಿಸಲು ಬಳ್ಳಾರಿ, ಕುರುಗೋಡು, ಕಂಪ್ಲಿ, ಸಂಡೂರು ಮತ್ತು ಸಿರುಗುಪ್ಪ ತಾಲ್ಲೂಕುಗಳ ಗ್ರಾಮ ಪಂಚಾಯತಿಗಳಲ್ಲಿ ಹಸಿಮೆಣಸಿನಕಾಯಿ ಮತ್ತು ದಾಳಿಂಬೆ ಬೆಳೆಯನ್ನು ಅಧಿಸೂಚಿಸಲಾಗಿದೆ.

ಬೆಳೆ ವಿಮೆಗೆ ನೋಂದಾಯಿಸಿಕೊಳ್ಳಲು ಆಗಸ್ಟ್ 11 ಕೊನೆಯ ದಿನ. ವಿಮಾ ಕಂಪನಿ–ಎಸ್‌ಬಿಐ ಇನ್ಸುರೆನ್ಸ್.

*ಹಸಿಮೆಣಸಿನಕಾಯಿ:* ವಿಮಾ ಮೊತ್ತ–ರೂ.71,000(ಪ್ರತಿ ಹೆಕ್ಟೇರ್‌ಗೆ), ರೈತರು ಪಾವತಿಸಬೇಕಾದ ಪ್ರೀಮಿಯಂ ಮೊತ್ತ(ಪ್ರತಿ ಹೆಕ್ಟೇರ್‌ಗೆ)–ರೂ.3,550.

*ದಾಳಿಂಬೆ:* ವಿಮಾ ಮೊತ್ತ–ರೂ.1,27,000(ಪ್ರತಿ ಹೆಕ್ಟೇರ್‌ಗೆ), ರೈತರು ಪಾವತಿಸಬೇಕಾದ ಪ್ರೀಮಿಯಂ ಮೊತ್ತ(ಪ್ರತಿ ಹೆಕ್ಟೇರ್‌ಗೆ)– ರೂ.6,350 ಪಾವತಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಬಳ್ಳಾರಿ, ಕುರುಗೋಡು ಮತ್ತು ಕಂಪ್ಲಿಯ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ–ದೂ.08392–278177. ಮೊ.9448511649. ಸಂಡೂರು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ–ದೂ.08395–260389, ಮೊ.9740934208. ಸಿರುಗುಪ್ಪ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ–ದೂ.08396–222066, ಮೊ.9448910277 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆ.01 ರಂದು "ಜಾನಪದ ಸಂಗೀತ" ಕಲಿಕಾ ತರಬೇತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.30–ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಪರಿಶಿಷ್ಟ ಜಾತಿಯ ವಿದ್ಯಾರ್ಥಿನಿಯರಿಗೆ ಆ.01 ರಂದು ಸಂಜೆ 05 ಗಂಟೆಗೆ ನಗರದ ಕೋಟೆಯ ಡಾ.ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ನಂತರ ಬಾಲಕಿಯರ ವಸತಿ ನಿಲಯದಲ್ಲಿ "ಜಾನಪದ ಸಂಗೀತ" ಕಲಿಕಾ ತರಬೇತಿ ಕಾರ್ಯಕ್ರಮ ಆಯೋಜಿಸಲಾಗಿದೆ.

ಕಲಬುರಗಿ ವಲಯದ ಕಲಬುರಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ಬಸವರಾಜ ಹೂಗಾರ ಅವರು ಕಾರ್ಯಕ್ರಮ ಉದ್ಘಾಟಿಸುವರು. ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಚಿದಾನಂದಪ್ಪ ಅವರು ಅಧ್ಯಕ್ಷತೆ ವಹಿಸುವರು.

ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ರಾಜೇಶ್ವರಿ.ಬಿ ಮುಖ್ಯ ಅತಿಥಿಗಳಾಗಿ ತರಬೇತಿದಾರರಾಗಿ ಜಾನಪದ ಗಾಯಕ ಎಸ್.ಎಂ. ಹುಲುಗಪ್ಪ ಸೇರಿದಂತೆ ಇತರರು ಭಾಗವಹಿಸುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ತಿಳಿಸಿದ್ದಾರೆ.

## ಭದ್ರತೆಗೆ ಮತ್ತೊಂದು ಹೆಸರೆ ಅಂಚೆ ಇಲಾಖೆ:ಶಿವಾನಂದ ರಬಕವಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಯಲಬುರ್ಗಾ ಮನೆ ಬಾಗಿಲಿಗೆ ಹೋಗಿ ಸೇವೆಯನ್ನು ನೀಡುವ ಏಕೈಕ ಸಂಸ್ಥೆ ಅಂಚೆ ಇಲಾಖೆ ಸಮರ್ಪಕವಾಗಿ ಮಾಡುವ ಮೂಲಕ ಜನರ ಅಭಿಲಾಷೆಗಳನ್ನು ಈಡೇರಿಸುವದರ ಜೊತೆಗೆ ಬದ್ರತೆಗೆ ಮತ್ತೊಂದು ಹೆಸರೆ ಅಂಚೆ ಇಲಾಖೆ ಆಗಿದೆ ಎಂದು ಕೊಪ್ಪಳ ವಿಭಾಗೀಯ ಅಂಚೆ ಇಲಾಖೆಯ ಅಧೀಕ್ಷಕರಾದ ಶಿವಾನಂದ ರಬಕವಿ ರವರು ಹೇಳಿದರು

ಪಟ್ಟಣದ ಅಂಚೆ ಕಛೇರಿಯಲ್ಲಿ ಏರ್ಪಡಿಸಿದ ಜನ ಸ್ಪಂದನಾ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು ಜನರ ವಿಶ್ವಾಸವನ್ನು ಸುಮಾರು 200 ವರುಷಗಳಿಂದ ಉಳಿಸಿಕೊಳ್ಳುವದರೊಂದಿಗೆ ಪ್ರಾಮಣಿಕತೆಗೆ ಹೆಸರಾದ ಇಲಾಖೆ ಈಗ ಬ್ರಹತ ಆಕಾರವಾಗಿ ಬೆಳೆಯಲು ನಾಡಿನ ಜನತೆ ಪ್ರೀತಿ ವಿಶ್ವಾಸವೆ ಕಾರಣವೆಂದು ಹೆಮ್ಮೆಯಿಂದ ಹೇಳಲು ಖುಷಿ ಆಗುತ್ತದೆ ಎಂದರು..ಅನೇಕ ಜನಪರ ಯೋಜನೆಗಳನ್ನು ಇಲಾಖೆ ಜಾರಿಗೆ ತಂದಿದೆ ಅದರ ಸದುಪಯೋಗವನ್ನು ಜನರು ತೆಗೆದುಕೊಳ್ಳಬೇಕೆಂದು ಮನವಿ ಮಾಡಿದರು. ಪ.ಪಂ. ಅಧ್ಯಕ್ಷ ಅಂದಯ್ಯ ಕಳ್ಳಿಮಠ, ಮಾಜಿ ಅಧ್ಯಕ್ಷ ಅಂದಾನಗೌಡ ಉಳ್ಳಾಗಡ್ಡಿ, ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ವೀರಣ್ಣ ನಿಂಗೋಜಿ, ಪ.ಪಂ.ಮುಖ್ಯಾಧಿಕಾರಿ ನಾಗೇಶ ರವರು ಮಾತನಾಡಿ ಪ್ರಾಮಾಣಿಕತೆಗೆ ಹೆಸರಾದ ಅಂಚೆ ಇಲಾಖೆ ಎಲ್ಲರ ಮನದಲ್ಲಿ ಹಚ್ಚ ಹಸಿರಾಗಿದೆ . ಪತ್ರ ಸಂಸ್ಕೃತಿ ಈಗ ಮರೆ ಮಾಚಿದೆ ಎಂದು ವಿಷಾದಿಸಿದರು. ಅಂಚೆ ಪಾಲಕ ವೀರೇಶ ಜೂಚನಿ ಅಧ್ಯಕ್ಷತೆ ವಹಿಸಿದ್ದರು.

ಶರಣಪ್ಪ ಬನ್ನಿಕೊಪ್ಪ,ಬಸಣ್ಣ, ವಿಜಯ, ದಾನಕೈ ಇನ್ನೀತರರು ಉಪಸ್ಥಿತರಿದ್ದರು. ಅಂಚೆ ನಿರೀಕ್ಷಕರಾದ ಸಾಗರ ಹಂಚಿನಾಳರವರು ಪ್ರಾಸ್ತಾವಿಕವಾಗಿ ಮಾತನಾಡಿದರು ಅಂಚೆ ಇಲಾಖೆ ಸಿಬ್‌ಂದಿಗಳಾದ ಸ್ನೇಹ ಹಾಗೂ ಸಂಗಡಿಗರು ಪ್ರಾರ್ಥಿಸಿದರು ಶರಣಪ್ಪ ರವರು ಸ್ವಾಗತಿಸಿದರು ಸುಭಾಸ ನಿರೂಪಿಸಿ ವಂದಿಸಿದರು.

## ಜೂಜಾಟ: 10 ಜನರ ಬಂಧನ, 1.12 ಲಕ್ಷ ನಗದು ಜಪ್ತಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.30–ಅಫಜಲಪುರ ರಸ್ತೆಯ ಕೊಳ್ಳೂರ ಹತ್ತಿರದ ಜಮೀನು ಒಂದರಲ್ಲಿ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಫರಹತಾಬಾದ ಪೊಲೀಸ್ ಠಾಣೆ ಪಿಐ ಮಲ್ಲಿಕಾರ್ಜುನ ಇಕ್ಕಳಕಿ, ಸಿಬ್ಬಂದಿಗಳಾದ ಎಎಸ್‌ಐ ಅಶೋಕ, ರಾಜು ಕಮತಿ, ರಾಜಕುಮಾರ ಮೂಲಗೆ, ಕರಣಸಿಂಗ್, ರಫೀಕ್ ಮುಲ್ಲಾ, ಮಂಜುನಾಥ, ದುರ್ಗೇಶ, ಕಲ್ಯಾಣಕುಮಾರ, ಲಿಂಗರಾಜ ಮತ್ತು ಪ್ರಕಾಶ ಅವರು ದಾಳಿ ನಡೆಸಿ 10 ಜನರನ್ನು ಬಂಧಿಸಿದ್ದಾರೆ.

ಅಬ್ದುಲ್ ಮಜೀದ್, ಯುವರಾಜ ಪವಾರ್, ನಾಗರಾಜ ಕಲಶೆಟ್ಟಿ, ಪ್ರಕಾಶ ಇಳಕಲ್, ಅಹ್ಮದ್ ಪಾಶಾಮಿಯಾ, ಜಬೇರ್ ಪಟೇಲ್, ಜಯರಾಮ ರಾಠೋಡ್, ವೆಂಕಟೇಶ ಕುಂಬಾರ, ವಿಜಯಕುಮಾರ ಪೂಜಾರಿ, ಭವಾನಿಸಿಂಗ್ ರಜಪೂತ ಎಂಬುವವರನ್ನು ಬಂಧಿಸಿ 1.12 ಲಕ್ಷ ರೂ.ನಗದು ಮತ್ತು 52 ಇಸ್ಪೀಟ್ ಎಲೆಗಳನ್ನು ಜಪ್ತಿ ಮಾಡಿದ್ದಾರೆ. ಪೊಲೀಸರು ದಾಳಿ ನಡೆಸಿದ ವೇಳೆ ಕಾಶಿನಾಥ ಪಾಟೀಲ ಎಂಬಾತ ಓಡಿ ಹೋಗಿದ್ದು, ಈ ಸಂಬಂಧ ಫರಹತಾಬಾದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ರೈತರು ಬೆಳೆಗಳ ಅಗತ್ಯಕ್ಕೆ ತಕ್ಕಂತೆ ರಸಗೊಬ್ಬರಗಳನ್ನು ಬಳಸಿ–ಯೂರಿಯಾ ಗೊಬ್ಬರಕ್ಕೆ ಆತಂಕ ಬೇಡ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.30–ಜಿಲ್ಲೆಯ ರೈತರು ತಾವು ಬೆಳೆಯುವ ಬೆಳೆಗಳ ಅಗತ್ಯಕ್ಕೆ ತಕ್ಕಂತೆ ರಸಗೊಬ್ಬರಗಳನ್ನು ಬಳಸಬೇಕು. ಯೂರಿಯಾ ರಸಗೊಬ್ಬರಕ್ಕೆ ಆತಂಕಪಡುವ ಅಗತ್ಯವಿಲ್ಲ ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನ ಜುಲೈ ಮಾಹೆಯವರೆಗೆ ಒಟ್ಟು 27025 ಮೆ.ಟನ್‌ಗಳ ಬೇಡಿಕೆ ಇದ್ದು, ಇಲ್ಲಿಯವರೆಗೆ ಪ್ರಾರಂಭಿಕ ಶಿಲ್ಕು ಸೇರಿ 34,163 ಮೆ.ಟನ್ ದಾಸ್ತಾನು ಮಾಡಲು, ಈ ಪೈಕಿ 25,887 ಮೆ.ಟನ್ ವಿತರಣೆಯಾಗಿ 8,286 ಮೆ.ಟನ್‌ಗಳಷ್ಟು ದಾಸ್ತಾನು ಉಳಿದಿದೆ.

ಜಿಲ್ಲೆಯಲ್ಲಿ ಪ್ರಸ್ತಕ ಸಾಲಿನ ಮುಂಗಾರು ಹಂಗಾಮಿಗೆ ಕೃಷಿ ಮತ್ತು ತೋಟಗಾರಿಕೆ ಬೆಳೆಗಳ ಬಿತ್ತನೆ ಮಾಡಲು ಲಭ್ಯವಿದ್ದ ಒಟ್ಟು 2,81,522 ಹೆಕ್ಟೇರ್ ಸಾಗುವಳಿ ಪ್ರದೇಶಕ್ಕೆ ಅನುಗುಣವಾಗಿ ಯೂರಿಯಾ ರಸಗೊಬ್ಬರಗಳ ಬೇಡಿಕೆ ಅಂದಾಜಿಸಲಾಗಿ ಮಾಹೆವಾರು ಕಾರ್ಯಕ್ರಮವನ್ನು ಸರಬರಾಜುದಾರರುವಾರು ರೂಪಿಸಿಕೊಳ್ಳಲಾಗಿದೆ. ಪ್ರಸಕ್ತ ಸಾಲಿನಲ್ಲಿ ಪೂರ್ವ ಮುಂಗಾರು ಮಳೆಯು ಉತ್ತಮವಾಗಿ ಬಂದ ಕಾರಣ ಹೆಚ್ಚಿನ ಪ್ರದೇಶದಲ್ಲಿ ಬೆಳೆಗಳನ್ನು ಬಿತ್ತನೆ ಮಾಡಲು ರೈತರು ಉತ್ಸುಕತೆ ತೋರಿದ ಪರಿಣಾಮವಾಗಿ ಎರಡು, ಮೂರು ವರ್ಷಗಳಿಂದ ಮೆಣಸಿನಕಾಯಿ ಬೆಳೆಯ ಬೆಲೆಯಲ್ಲಿ ಕುಸಿತವಾದ ಪರಿಣಾಮ ಜಿಲ್ಲೆಯಲ್ಲಿ ಮೆಕ್ಕೆಜೋಳ ಮತ್ತು ಹತ್ತಿ ಬೆಳೆಯ ಬಿತ್ತನೆ ಪ್ರದೇಶ ಕ್ರಮವಾಗಿ 24,000 ಹೆಕ್ಟೇರ್‌ನಿಂದ 30,000 ಹೆಕ್ಟೇರ್‌ಗೆ ಹಾಗೂ 20,000 ಹೆಕ್ಟೇರ್‌ನಿಂದ 25,000 ಹೆಕ್ಟೇರ್‌ಗೆ ಏರಿಕೆಯಾಗಿದೆ. ಮುಖ್ಯವಾಗಿ ತುಂಗಭದ್ರ ನದಿಯ ನೀರನ್ನು ಕಾಲುವೆಗಳಿಗೆ ಮುಂಚಿತವಾಗಿ ಹರಿಸಿರುವುದರಿಂದ ಸಂಯುಕ್ತ ಗೊಬ್ಬರಗಳಿಗೆ ಹೋಲಿಕೆ ಮಾಡಿದಲ್ಲಿ ಯೂರಿಯಾ ರಸಗೊಬ್ಬರದ ಬೆಲೆ ಕಡಿಮೆಯಿರುವುದರಿಂದ ಸಮತೋಲನವಾಗಿ ರಸಗೊಬ್ಬರಗಳನ್ನು ಬಳಸದೇ ಕೇವಲ ಯೂರಿಯಾ ರಸಗೊಬ್ಬರವನ್ನು ಹೆಚ್ಚಾಗಿ ಬಳಸುತ್ತಿರುವುದು ಕಂಡುಬಂದಿದೆ ಮತ್ತು ವಿಜ್ಞಾನಿಗಳು ಹಾಗೂ ಇಲಾಖೆಯಿಂದ ಶಿಫಾರಸ್ಸು ಮಾಡಲಾದ ಪ್ರಮಾಣಕ್ಕಿಂತ ರೈತರು ಹೆಚ್ಚಿನ ಪ್ರಮಾಣದಲ್ಲಿ ಬಳಕೆ ಮಾಡುತ್ತಿರುವುದು ಹಾಗೂ ಕೆಲವು ರೈತರು ಬೆಳೆಯ ವಿವಿಧ ಹಂತಗಳಲ್ಲಿ ಬಳಕೆಗೆ ಬೇಕಾದ ರಸಗೊಬ್ಬರಗಳನ್ನು ಮುಂಗಡವಾಗಿ ಖರೀದಿಸಿ ದಾಸ್ತಾನು ಮಾಡಿಕೊಂಡಿದ್ದಾರೆ.

ಈ ಮೇಲಿನ ಕಾರಣಗಳಿಂದಾಗಿ ಮಾಹೆವಾರು ಯೂರಿಯಾ ರಸಗೊಬ್ಬರದ ಬೇಡಿಕೆ, ಸರಬರಾಜು, ವಿತರಣೆ ಮತ್ತು ದಾಸ್ತಾನು ಇಲಾಖೆಯು ರೂಪಿಸಿದ ಯೋಜನೆಯನುಸಾರ ಇದ್ದಾಗ್ಯೂ ಸಹ ಜಿಲ್ಲೆಯ ರೈತರಿಂದ ಯೂರಿಯಾ ರಸಗೊಬ್ಬರಕ್ಕೆ ಹೆಚ್ಚಿನ ಬೇಡಿಕೆ ಪದೇ ಪದೇ ಬರುತ್ತಿರುವುದನ್ನು ಕೃಷಿ ಇಲಾಖೆಯು ಗಂಭೀರವಾಗಿ ಪರಿಗಣಿಸಿ ಮುಂಗಾರು ಪೂರ್ವ ಮತ್ತು ಪ್ರಸಕ್ತ ಮುಂಗಾರಿನಲ್ಲಿ ಕೃಷಿ ಪರಿಕರ ಮಾರಾಟ ಮಳಿಗೆಗಳಿಗೆ ಜಿಲ್ಲೆಯ ಸಗಟು ಮತ್ತು ಚಿಲ್ಲರೆ ರಸಗೊಬ್ಬರ ಪರಿವೀಕ್ಷಕರು ಅನಿರೀಕ್ಷಿತ ಭೇಟಿ ನೀಡಿ ರಸಗೊಬ್ಬರದ ದಾಸ್ತಾನಿನ ಜೊತೆಗೆ ರಸಗೊಬ್ಬರ ನಿಯಂತ್ರಣ ಆದೇಶ 1985ರಡಿಯ ಎಲ್ಲಾ ಅಂಶಗಳನ್ನು ಪಾಲಿಸುತ್ತಿರುವ ಬಗ್ಗೆ ಪರಿಶೀಲನೆ ನಡೆಸುತ್ತಿದ್ದಾರೆ.

ಅಭಿಯಾನ ರೂಪದಲ್ಲಿ ಜಿಲ್ಲೆಯ 450ಕ್ಕೂ ಹೆಚ್ಚು ಮಳಿಗೆಗಳನ್ನು ಸಮಗ್ರವಾಗಿ ತಪಾಸಣೆ ಕೈಗೊಂಡು ಗುಣ ನಿಯಂತ್ರಣದಡಿ ಸುಮಾರು 200ಕ್ಕೂ ಮೇಲ್ಪಟ್ಟು ಮಾದರಿಗಳನ್ನು ಸಂಗ್ರಹಿಸಿ ವಿಶ್ಲೇಷಣೆಗೆ ಒಳಪಡಿಸಿ ರಸಗೊಬ್ಬರಗಳ ಗುಣಮಟ್ಟವನ್ನು ಖಾತ್ರಿಪಡಿಸಿಕೊಳ್ಳಲು ಹಾಗೂ ದಾಸ್ತಾನು ಮತ್ತು ವಿತರಣೆಯಲ್ಲಿ ರಸಗೊಬ್ಬರ ವಿತರಕರು ಪಾಲಿಸಬೇಕಾದ ಅಗತ್ಯ ಕ್ರಮಗಳ ಕುರಿತು ಪರವಾನಿಗೆ ಹೊಂದಿರುವುದು, ಬಿಲ್ಲುಗಳನ್ನು ಕಡ್ಡಾಯವಾಗಿ ನೀಡುವ ಬಗ್ಗೆ, ಹೆಚ್ಚಿನ ದರಕ್ಕೆ ಮಾರಾಟ ಮಾಡದಿರುವ ಬಗ್ಗೆ ಹೋಬಳಿ, ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ವಿವಿಧ ಸಭೆಗಳಲ್ಲಿ ಅಗತ್ಯ ಎಚ್ಚರಿಕೆ ಮತ್ತು ಸೂಚನೆಗಳನ್ನು ಸಹ ನೀಡಲಾಗಿದೆ. ಜೊತೆಗೆ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದ ನಿರ್ದೇಶನಗಳನ್ವಯ ಯೂರಿಯಾ ಗೊಬ್ಬರದ ಅವೈಜ್ಞಾನಿಕ ಬಳಕೆಯ ದುಷ್ಪರಿಣಾಮಗಳು ಮತ್ತು ವೈಜ್ಞಾನಿಕವಾಗಿ ಅಭಿವೃದ್ಧಿಪಡಿಸಲಾದ ನ್ಯಾನೋ ರಸಗೊಬ್ಬರಗಳನ್ನು (ವಿಶೇಷವಾಗಿ ನ್ಯಾನೋ ಯೂರಿಯಾ ಮತ್ತು ಡಿ.ಎ.ಪಿ) ಪರ್ಯಾಯವಾಗಿ ಬಳಸುವ ಕುರಿತು ಅರಿವು ಮೂಡಿಸಲಾಗುತ್ತಿದೆ. ಬೆಳೆಗಳ ಪದ್ಧತಿಯಲ್ಲಿ ಆದ ಹೆಚ್ಚಿನ ಬದಲಾವಣೆ, ಯೂರಿಯಾ ರಸಗೊಬ್ಬರದ ಕಡಿಮೆ ಬೆಲೆ ಮತ್ತು ಸಂಯುಕ್ತ ಗೊಬ್ಬರಗಳ ಹೆಚ್ಚಿನ ಬೆಲೆ ಮುಂಚಿತವಾಗಿ ಆಗಮಿಸಿದ ಮುಂಗಾರು ಹಾಗೂ ತುಂಗಭದ್ರ ನದಿ ನೀರು ಮತ್ತು ರೈತರ ಅವೈಜ್ಞಾನಿಕವಾಗಿ ಬಳಸುತ್ತಿರುವ ಪ್ರಮಾಣದ ಕಾರಣ ಜಿಲ್ಲೆಯಲ್ಲಿನ ಯೂರಿಯಾ ಗೊಬ್ಬರದ ಬೇಡಿಕೆ ಹೆಚ್ಚುತ್ತಿರುತ್ತದೆ. ಜಿಲ್ಲೆಯಲ್ಲಿ ಹೆಚ್ಚಿನ ಕೊರತೆ ಇಲ್ಲದಿದ್ದರೂ ಮಾಹೆವಾರು ರೂಪಿಸಿರುವ ರಸಗೊಬ್ಬರಗಳ ಕಾರ್ಯಕ್ರಮದ ಅನುಸಾರ ಸರಬರಾಜು, ವಿತರಣೆ ಮತ್ತು ದಾಸ್ತಾನನ್ನು ಸರಿದೂಗಿಸಿ ರೈತರಿಗೆ ಅವಶ್ಯವಿರುವ ಯೂರಿಯಾ ಗೊಬ್ಬರದ ಜೊತೆಗೆ ಇತರೆ ಅವಶ್ಯಕತೆ ಗೊಬ್ಬರಗಳನ್ನು ಒದಗಿಸಲು ಇಲಾಖೆಯು ನಿರಂತರ ಕ್ರಮವಹಿಸಲಾಗಿದೆ.

ಮುಂದಿನ ದಿನಗಳಲ್ಲಿ ಉದ್ಭವಿಸಬಹುದಾದ ಬೇಡಿಕೆಯನ್ನು ಸಹ ಈಗಾಗಲೇ ಮಾಹೆ ಹಾಗು ಸರಬರಾಜುದಾರರವಾರು ರೂಪಿಸಿಕೊಂಡಿರುವ ಗುರಿಗಳನ್ವಯ ದಾಸ್ತಾನು ಮಾಡಿ ಸೂಕ್ತ ರೀತಿಯಲ್ಲಿ ವಿತರಿಸಲಾಗುತ್ತದೆ ಹಾಗೂ ಈ ಸಮಯದಲ್ಲಿ ಯಾವುದೇ ಕೃಷಿ ಪರಿಕರ ಮಾರಾಟಗಾರರು ಸಂಬಂಧಿಸಿದ ಕಾನೂನುಗಳನ್ನು ಉಲ್ಲಂಘಿಸಿದ್ದಲ್ಲಿ ಅಗತ್ಯ ವಸ್ತುಗಳ ಕಾಯ್ದೆ 1955ರಡಿ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು.

ರೈತರಿಗೆ ರಸಗೊಬ್ಬರಗಳನ್ನು ಹೆಚ್ಚಿನ ದರದಲ್ಲಿ ಮಾರಾಟ ಮಾಡುತ್ತಿರುವ ಬಗ್ಗೆ ಅಥವಾ ಕೃತಕ ಅಭಾವ ಸೃಷ್ಠಿಸುವ ಪ್ರಸಂಗಗಳು ಕಂಡುಬಂದಲ್ಲಿ ಆಯಾ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರು, ಹೋಬಳಿ ಮಟ್ಟದ ರೈತ ಸಂಪರ್ಕ ಕೇಂದ್ರಗಳ ಕೃಷಿ ಅಧಿಕಾರಿಗಳನ್ನು ಸಂಪರ್ಕಿಸಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಸರ್ಕಾರದ ವಿರುದ್ಧ ಬಿಜೆಪಿ ರೈತಮೋರ್ಚಾ ಪ್ರತಿಭಟನೆ

# ಕಾಂಗ್ರೆಸ್ ಸರಕಾರ ಆಡಳಿತ ಸ್ಥಿರತೆಯನ್ನು ಕಳೆದುಕೊಂಡಿದೆ: ಚರಂತಿಮಠ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.30–ರಾಜ್ಯದಲ್ಲಿ ರೈತರಿಗೆ ಅಗತ್ಯ ರಸಗೊಬ್ಬರ ಪೂರೈಕೆಯಲ್ಲಿ ರಾಜ್ಯ ಕಾಂಗ್ರೆಸ್ ಸರಕಾರ ಸಂಪೂರ್ಣವಾಗಿ ವಿಫಲವಾಗಿದ್ದು, ಆಡಳಿತ ಸ್ಥಿರತೆಯನ್ನು ಕಳೆದುಕೊಂಡಿದೆ ಎಂದು ಮಾಜಿ ಶಾಸಕ ವೀರಣ್ಣ ಚರಂತಿಮಠ ಹೇಳಿದರು.

ನಗರದ ಬಸವೇಶ್ವರ ವೃತ್ತದಲ್ಲಿ ಬುಧವಾರ ಭಾರತೀಯ ಜನತಾ ಪಾರ್ಟಿ ಜಿಲ್ಲಾ ರೈತ ಮೋರ್ಚಾ ಹಾಗೂ ಬಾಗಲಕೋಟೆ ವಿಧಾನಸಭಾ ಮತ ಕ್ಷೇತ್ರದಿಂದ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಹಮ್ಮಿಕೊಂಡ ಬೃಹತ್ ಪ್ರತಿಭಟನೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ರಾಜ್ಯಾದ್ಯಂತ ಕೃಷಿ ಚಟುವಟಿಕೆಗಳು ಆರಂಭವಾಗಿದ್ದರೂ ಕಾಂಗ್ರೆಸ್ ಸರ್ಕಾರ ಮಾತ್ರ ರೈತರಿಗೆ ಅಗತ್ಯವಿರುವ ರಸಗೊಬ್ಬರ ವಿತರಿಸದೇ ರೈತರನ್ನು ಸಂಕಷ್ಟಕ್ಕೆ ದೂಡಿದೆ ಎಂದು ಆರೋಪಿಸಿದರು.

8.70 ಲಕ್ಷ ಮೆಟ್ರಿಕ್ ಟನ್ ಗೊಬ್ಬರವನ್ನು ಕೇಂದ್ರ ಸರಕಾರ ಕೊಟ್ಟಿದ್ದರೂ ಕೂಡಾ, ರಾಜ್ಯ ಸರಕಾರ ಗೊಬ್ಬರದ ಕೃತಕ ಅಭಾವ ನಿರ್ಮಾಣ ಮಾಡಿ, ರೈತರಲ್ಲಿ ಗೊಂದಲ ಸೃಷ್ಟಿಸಿದೆ. ರಾಜ್ಯದಲ್ಲಿ ಬಿಜೆಪಿ ಆಡಳಿತವಿದ್ದಾಗ ಯಾವುದೇ ತರಹ ರಸಗೊಬ್ಬರ ಕೊರತೆ–ಯಾಗದಂತೆ ರೈತರಿಗೆ ವಿತರಿಸಲಾಗಿತ್ತು, ರೈತಪರ ಎಂದು ಹೇಳಿಕೊಳ್ಳುವ ಸರಕಾರ, ಪ್ರತಿವರ್ಷ ರೈತರಿಗೆ ಕೇಂದ್ರ ಸರಕಾರ 6 ಸಾವಿರ, ರಾಜ್ಯದಿಂದ 4 ಸಾವಿರ ಸೇರಿ 10 ಸಾವಿರ ರೂ ನೀಡುತ್ತಿತ್ತು. ಈಗ ಆ ಯೋಜನೆಗಳು ಸ್ಥಗಿತಗೊಂಡಿವೆ. ಹೀಗಾಗಿ ಕಾಂಗ್ರೆಸ್ ಸರಕಾರ ತಾನು ರೈತ ವಿರೋಧಿ ಎನ್ನುವುದನ್ನು ಸಾಬೀತುಪಡಿಸಿದೆ ಎಂದರು.

ರೈತ ಮೋರ್ಚಾ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಗಡಿಯನ್ನವರ ಮಾತನಾಡಿ, ಕೇಂದ್ರ ಸರಕಾರ ಯೂರಿಯಾ ಗೊಬ್ಬರವನ್ನು ನಮ್ಮ ರಾಜ್ಯವೂ ಸೇರಿದಂತೆ ಎಲ್ಲ ರಾಜ್ಯಗಳಿಗೂ ನೀಡುತ್ತಿದೆ ಆದರೆ ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಯೂರಿಯಾ ಗೊಬ್ಬರದ ಕೃತಕ ಅಭಾವವನ್ನು ಸೃಷ್ಟಿಸುತ್ತಿದೆ, ಸರಕಾರ ರೈತ ವಿರೋಧಿಯಾಗಿದೆ ಎಂದರು.

ಪ್ರತಿಭಟನೆಯಲ್ಲಿ ರೈತಮೋರ್ಚಾದ ಶಶಿಕುಮಾರ ಗುಡನ್ನವರ, ರಮೇಶ ಹಾದಿಮನಿ ದೂಳಪ್ಪ ಕೊಪ್ಪದ. ಮುಖಂಡರಾದ ಡಾ.ಎಂ.ಎಸ್. ದಡ್ಡೆನ್ನವರ, ರಾಜು ನಾಯ್ಕರ, ಬಸವರಾಜ ಯಂಕಂಚಿ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಉಪಾಧ್ಯಕ್ಷೆ ಶೋಭಾ ರಾವ್, ಶಶಿಕಲಾ ಮಜ್ಜಗಿ, ಜ್ಯೋತಿ ಭಜಂತ್ರಿ, ಬಸವರಾಜ ಹುನಗುಂದ, ಉಮೇಶ ಹಂಚಿನಾಳ, ಶ್ರೀಧರ ನಾಗರಬೆಟ್ಟ, ಶಿವಾನಂದ ಟವಳಿ, ಪ್ರಭು ಹಡಗಲಿ ಸೇರಿದಂತೆ ಅನೇಕ ಕಾರ್ಯಕರ್ತರು ಭಾಗವಹಿಸಿದ್ದರು.

ಇದಕ್ಕೂ ಮುಂಚೆ ಪಕ್ಷದ ಕಾರ್ಯಾಲಯ ಶಿವಾನಂದ ಜಿನ್‌ದಿಂದ ಪಾದಯಾತ್ರೆ ಮೂಲಕ ಬಸವೇಶ್ವರ ಸರ್ಕಲ್ ಗೆ ಆಗಮಿಸಿ ಮಾನವ ಸರಪಳಿ ನಿರ್ಮಿಸಿ ಪ್ರತಿಭಟನೆ ಮಾಡಲಾಯಿತು.

# ಜನಪರ ಕಳಕಳಿಯ ಧೀಮಂತ ನಾಯಕ ಎಸ್.ಆರ್.ಪಾಟೀಲ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಮುತ್ಸದ್ದಿ ರಾಜ–ಕಾರಣಿ, ಜನಪರ ಕಳಕಳಿಯುಳ್ಳ ಮಾಜಿ ಸಚಿವ ಬಾಡಗಂಡಿಯ ಎಸ್. ಆರ್.ಪಾಟೀಲರ ಬದುಕು ಹಾಗೂ ಅವರ ಜನೋಪಯೋಗಿ ಕಾರ್ಯಗಳು ಇತರರಿಗೆ ಮಾದರಿಯಾಗಿವೆ.

ಅಧಿಕಾರ ಇರಲಿ, ಇರದಿರಲಿ ಎಂದಿಗೂ ಜನಪರ ಚಿಂತನೆಯಿಂದ ಹಿಂದೆ ಸರಿದವರಲ್ಲ. ಸದಾ ಸಮಾಜಕ್ಕಾಗಿ ಮಿಡಿಯುವ ಅವರ ತುಡಿತ ಕಳೆದ 50 ವರ್ಷಗಳಿಂದಲೂ ಮುಂದುವರೆದುಕೊಂಡು ಬಂದಿದೆ. ಅಂತೆಯೇ ಶಿಕ್ಷಣ, ಆರ್ಥಿಕ, ಸಾಮಾಜಿಕ ಕ್ಷೇತ್ರದಲ್ಲಿ ಅವರು ಸಾಧನೆಯ ಶಿಖರವನ್ನೇರಿದ್ದು, ಪುಟ್ಟ ಹಳ್ಳಿ ಬಾಡಗಂಡಿಯನ್ನು ನಾಡಿನ ಜನ ತಿರುಗಿ ನೋಡುವಂತೆ ಮಾಡಿದ್ದಾರೆ.

'ಒಬ್ಬ ಸುಸಂಸ್ಕೃತ ಮನುಷ್ಯ ಶೃತಿ ತೀಡಿ ಇಟ್ಟ ವೀಣೆಯಂತೆ, ಅದರಿಂದ ಎಂದೂ ಅಪಸ್ವರ ಹೊರಡದು' ಎನ್ನುವ ಮಾಸ್ತಿಯವರ ಮಾತು ಎಸ್.ಆರ್.ಪಾಟೀಲರಿಗೆ ಅನ್ವಯಿಸುತ್ತಿದ್ದು, ಸರಳ ಜೀವನ, ಎಲ್ಲರನ್ನು ಆತ್ಮೀಯವಾಗಿ ಕಾಣುವ, ಪ್ರೀತಿಯಿಂದ ಕುಶಲೋಪರಿ ವಿಚಾರಿಸುವ ಅವರ ಗುಣ ಎಲ್ಲರಿಗೂ ಅಚ್ಚುಮೆಚ್ಚು.

ಹಳ್ಳಿಗಾಡಿನ ಮಕ್ಕಳೂ ವಿದ್ಯಾವಂತರಾಗಬೇಕು, ಪಟ್ಟಣಗಳಲ್ಲಿ ಸಿಗುವ ಶಿಕ್ಷಣ ಅವರಿಗೂ ಸಿಗಬೇಕು ಎನ್ನುವ ಉದಾತ್ತ ಚಿಂತನೆಯನ್ನು ಹೊತ್ತು ಹುಟ್ಟೂರು ಬಾಡಗಂಡಿಯಲ್ಲೇ ಬಾಪೂಜಿ ಇಂಟರನ್ಯಾಷನಲ್ ಶಾಲೆ ಆರಂಭಿಸಿದರು. ಈಗ ಅದು ಹೆಮ್ಮರವಾಗಿ ಬೆಳೆದು ಸಾವಿರಾರು ವಿದ್ಯಾರ್ಥಿಗಳು ಅಲ್ಲಿ ಅಧ್ಯಯನ ಮಾಡುತ್ತಿದ್ದಾರೆ.

ಆರ್ಥಿಕ ಕ್ಷೇತ್ರದಲ್ಲೂ ಸಾಧನೆಗೆ ಮುಂದಾದ ಎಸ್.ಆರ್.ಪಾಟೀಲರು, 1997 ರಲ್ಲಿ ಬೀಳಗಿ ಪಟ್ಟಣ ಸಹಕಾರಿ ಬ್ಯಾಂಕ್ ಪ್ರಾರಂಭಿಸಿ ವಿಜಯಪುರದ ಪೂಜ್ಯ ಶ್ರೀ ಸಿದ್ದೇಶ್ವರ ಸ್ವಾಮೀಜಿ ಅವರ ಅಮೃತ ಹಸ್ತದಿಂದ ಉದ್ಘಾಟನೆಗೊಳಿಸಿದರು. ಅದು ಸಹ ಇಂದು 25 ವರ್ಷಗಳನ್ನು ಕಂಡು ರಜತ ಮಹೋತ್ಸವ ಆಚರಿಸಿಕೊಂಡಿತು. ಹೀಗೆ ಎಸ್. ಆರ್.ಪಾಟೀಲ ಪ್ರತಿಯೊಂದು ಕ್ಷೇತ್ರದಲ್ಲೂ ಜನಪರ ಕಾರ್ಯಗಳಿಗೆ ಪ್ರಾಧಾನ್ಯತೆ ನೀಡಿ ಅದರಲ್ಲಿಯೇ ನೆಮ್ಮದಿಯ ಬದುಕು ಕಂಡವರು.

ರಾಜಕೀಯದಲ್ಲೂ ಅವರು ಹೆಜ್ಜೆಗುರುತು ಮೂಡಿಸಿ ಮತ್ತೊಬ್ಬರಿಗೆ ಮಾದರಿಯಾಗಿದ್ದಾರೆ. ತತ್ವ, ಪಕ್ಷನಿಷ್ಠೆ, ಪ್ರಾಮಾಣಿಕತೆ, ಸೇವಾ ಮನೋಭಾವ ಇಟ್ಟುಕೊಂಡು ಸುದೀರ್ಘ ರಾಜ–ಕಾರಣ ಮಾಡುತ್ತ ಬಂದಿರುವ ಎಸ್.ಆರ್.ಪಾಟೀಲರು, ಅಖಂಡ ವಿಜಯಪುರ ಜಿಲ್ಲೆಯ ಜಿಲ್ಲಾ ಪಂಚಾಯತಿ ಪ್ರತಿಪಕ್ಷದ ನಾಯಕರಾಗಿ, ವಿಧಾನ ಪರಿಷತ್ ಸದಸ್ಯರಾಗಿ, ಸಚಿವರಾಗಿ, ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾಗಿ, ಬಿಡಿಸಿಸಿ ಬ್ಯಾಂಕ್ ಚೇರಮನ್ ರಾಗಿ ಹಾಗೂ ವಿಧಾನ ಪರಿಷತ್ತಿನ ಪ್ರತಿಪಕ್ಷದ ನಾಯಕರಾಗಿ ಅವರು ಮಾಡಿರುವ ಕಾರ್ಯಗಳು ಜನಮಾನಸದಲ್ಲಿ ಉಳಿಯುವಂತವುಗಳು.

ದಕ್ಷತೆ, ಪ್ರಾಮಾಣಿಕತೆ, ಛಲಗಾರಿಕೆ ಎಸ್ಸಾರ ಪಾಟೀಲರ ಗುಣಗಳು. ಯುವಕರಿಗೆ ಉದ್ಯೋಗ



ಒದಗಿಸಬೇಕೆನ್ನುವ ಚಿಂತನೆಯೊಂದಿಗೆ ಸಕ್ಕರೆ ಕಾರ್ಖಾನೆ, ಬೀಳಗಿ ಪಟ್ಟಣ ಸಹಕಾರಿ ಬ್ಯಾಂಕು, ಬಾಪೂಜಿ ಪತ್ತಿನ ಸಹಕಾರಿ ಬ್ಯಾಂಕು ಹೀಗೆ ಹಲವು ಸಂಸ್ಥೆಗಳನ್ನು ಪ್ರಾರಂಭಿಸಿ ನೂರಾರು ಜನರಿಗೆ ಉದ್ಯೋಗ ಕಲ್ಪಿಸಿದ್ದಾರೆ. ಒಟ್ಟಾರೆ ಹೇಳುವುದಾದರೆ ಒಂದು ಸರಕಾರ ಮಾಡಬೇಕಾದ ಅನೇಕ ಕಾರ್ಯಗಳನ್ನು ಪಾಟೀಲರೇ ಮಾಡಿರುವುದು ಮೆಚ್ಚುವಂತಹದ್ದು.

ಜಾತ್ಯಾತೀತ, ಪಕ್ಷಾತೀತ ವ್ಯಕ್ತಿಯಾಗಿ ಬೆಳೆದಿರುವ ಎಸ್. ಆರ್.ಪಾಟೀಲರು, ರಾಜಕೀಯವಾಗಿ ಕಾಂಗ್ರೆಸ್ ಪಕ್ಷದ ಧುರೀಣರಾಗಿದ್ದರೂ ಎಲ್ಲ ಪಕ್ಷಗಳ ಮುಖಂಡರೊಂದಿಗೆ ಆತ್ಮೀಯತೆ ಹೊಂದಿದವರು. ಹೀಗಾಗಿ ಅವರದು ಮೇರು ವ್ಯಕ್ತಿತ್ವ. ಹಿಂದುಳಿದ ವರ್ಗದವರ ಏಳಿಗೆಗಾಗಿ ಸದಾ ಮಿಡಿಯುವ ಅವರ ವ್ಯಕ್ತಿತ್ವಕ್ಕೆ ನಾಡಿನ ಹರ–ಗುರು ಚರಮೂರ್ತಿಗಳಿಂದ ಹಿಡಿದು ಸಾಮಾನ್ಯ ಮನುಷ್ಯನಿಂದಲೂ ಪ್ರಶಂಸೆ ವ್ಯಕ್ತವಾಗಿದೆ. ಸರಕಾರ ಹಾಗೂ ಸಂಘ ಸಂಸ್ಥೆಗಳಿಂದ ಹಲವಾರು ಪ್ರಶಸ್ತಿಗಳಿಗೆ ಭಾಜನರಾಗಿರುವ ಎಸ್. ಆರ್.ಪಾಟೀಲರಿಗೆ ಕರ್ನಾಟಕ ಸರಕಾರದಿಂದ 'ಶ್ರೇಷ್ಠ ಸಹಕಾರಿ ಪ್ರಸಸ್ತಿ' ಲಭಿಸಿದೆಯಲ್ಲದೇ, 2021–22ನೇ ಸಾಲಿನ ಅತ್ಯುತ್ತಮ ಶಾಸಕ ಪ್ರಶಸ್ತಿಗೆ ಅವರಿಗೆ ನೀಡಲಾಗಿದೆ.

ಪಾಟೀಲರಿಗೆ ಈಗ 77 ವರ್ಷ. ಈಗಲೂ ಅವರಲ್ಲಿ ಜನಪರ ಕಾಳಜಿಯ ಹುಮ್ಮಸ್ಸು ಕುಗ್ಗಿಲ್ಲ. ಇದಕ್ಕೆ ಈಗ ಬಾಡಗಂಡಿಯಂತಹ ಚಿಕ್ಕ ಗ್ರಾಮದಲ್ಲಿ ಅವರು ಪ್ರಾರಂಭಿಸಿರುವ ಮೆಡಿಕಲ್ ಕಾಲೇಜು ಸಾಕ್ಷಿಯಾಗಿದೆ.

ಮೆಡಿಕಲ್ ಕಾಲೇಜ ಸ್ಥಾಪಿಸುವುದು ಸಾಮಾನ್ಯವಾದ ಕೆಲಸವಲ್ಲ. ಸರಕಾರಕ್ಕೆ ಸಾಧ್ಯವಾಗದ ಕೆಲಸವನ್ನು ಎಸ್.ಆರ್.ಪಾಟೀಲರು ಮಾಡಿ ತೋರಿಸಿದ್ದು, ನೂರಾರು ಹಳ್ಳಿಗಳ ಜನರಿಗೆ ಬಾಡಗಂಡಿಯ ಮೆಡಿಕಲ್ ಕಾಲೇಜು ಈಗ ಆರೋಗ್ಯ ಸೇವೆ ಒದಗಿಸುತ್ತಿದೆ. ನುರಿತ ತಜ್ಞ ವೈದ್ಯರು, ಉಪನ್ಯಾಸಕರು, ಆರೋಗ್ಯ ಸಿಬ್ಬಂದಿ ಕಾಲೇಜಿನಲ್ಲಿದ್ದು, ಬಡವರ ಪಾಲಿಗೆ ಆರೋಗ್ಯದ ಕಾಮಧೇನು ಆಗಿದೆ ಎಂದರೆ ತಪ್ಪಾಗಲಿಕ್ಕಿಲ್ಲ.

ಇದೆಲ್ಲವನ್ನೂ ನೋಡಿದಾಗ ಎಸ್.ಆರ್.ಪಾಟೀಲರಿಗೆ ಇರುವ ದೂರದೃಷ್ಠಿ, ಸಾಮಾಜಿಕ ಕಳಕಳಿ ಎಂತಹದ್ದು ಎನ್ನುವುದು ತಿಳಿಯುತ್ತದೆ. ಸಾಮಾನ್ಯವಾಗಿ ಯಾವ ವ್ಯಕ್ತಿಯಾಗಲಿ, ಸರಕಾರವಾಗಲಿ ಮೆಡಿಕಲ್ ಕಾಲೇಜು ತೆರೆಯಬೇಕೆಂದರೆ ಪಟ್ಟಣ ಪ್ರದೇಶವನ್ನು ಹುಡುಕುತ್ತಾರೆ. ಆದರೆ ಪಾಟೀಲರು, ಪುಟ್ಟ ಗ್ರಾಮ ಬಾಡಗಂಡಿಯಲ್ಲಿ ಸ್ಥಾಪನೆ ಮಾಡಿರುವುದು ಎಲ್ಲರನ್ನೂ ಹುಬ್ಬೇರಿಸುವಂತೆ ಮಾಡಿದೆ. ಇದುವೇ ಅವರ ಬದ್ಧತೆ ಎಂದು ಹೇಳಬಹುದಾಗಿದೆ.

ಎಸ್.ಆರ್.ಪಾಟೀಲರು ಪ್ರತಿ ಕೆಲಸದಲ್ಲೂ ಇತರರಿಗೆ ಮಾದರಿಯಾಗಿದ್ದಾರೆ. ಅವರ ಹೃದಯ ಶ್ರೀಮಂತಿಕೆ, ಪ್ರಜ್ಞಾವಂತಿಕೆ, ದೂರದೃಷ್ಠಿ, ಜನಪರ ಚಿಂತನೆಗಳು, ಕೆಲಸದಲ್ಲಿನ ಬದ್ಧತೆ, ಪ್ರಾಮಾಣಿಕತೆ ಇವೆಲ್ಲವುಗಳು ಅವರನ್ನು ಎಲ್ಲರೂ ಮೆಚ್ಚಿಕೊಳ್ಳುವಂತೆ ಮಾಡಿವೆ. ಜೊತೆಗೆ ಅವರನ್ನೂ ಎತ್ತರಕ್ಕೆ ಬೆಳೆಸಿವೆ ಎನ್ನುವುದರಲ್ಲಿ ಎರಡು ಮಾತಿಲ್ಲ.

ಪ್ರಾಮಾಣಿಕ ರಾಜಕಾರಣಿ, ಪ್ರಾಮಾಣಿಕ ಸಹಕಾರಿಯಾಗಿ ಬೆಳೆದು ಬಂದಿರುವ ಎಸ್.ಆರ್.ಪಾಟೀಲರು ಬದುಕಿನುದ್ದಕ್ಕೂ ದೊಡ್ಡವರಾಗಿಯೇ ಮುಂದುವರೆದಿದ್ದಾರೆ. ಅವರ ಬದುಕು ಹೀಗೆಯೇ ಸಾಗಲಿ, ಸಮಾಜಕ್ಕೆ ಅವರ ಸೇವೆ ನಿರಂತರವಾಗಿ ಮುಂದುವರೆಯಲಿ, ಅವರ ಕತೃತ್ವ ಶಕ್ತಿ, ಸಾಮಾಜಿಕ ಕಳಕಳಿ, ಪ್ರಾಮಾಣಿಕತೆ ಎಲ್ಲವುಗಳು ಇತರರಿಗೆ ಮಾದರಿಯಾಗಲಿ, ಅವರು ನೂರ್ಕಾಲ ಬದುಕಿ ಬಾಳಿ ಸಮಾಜಕ್ಕೆ ಬೆಳಕಾಗಲಿ. ಅದಕ್ಕಾಗಿ ದೇವರು ಅವರಿಗೆ ಶಕ್ತಿ, ಕೃಪಾಶೀರ್ವಾದ ದಯಪಾಲಿಸಲಿ ಎಂದು ಪ್ರಾರ್ಥಿಸುತ್ತ, ಜುಲೈ 31 ರಂದು ಅವರ ಹುಟ್ಟು ಹಬ್ಬ. ಅವರಿಗೆ ಈ ಮೂಲಕ ಹಾರ್ದಿಕ ಶುಭಾಶಯಗಳು.



ಜಗದೀಶ ಮ. ಹದ್ಲಿ
ತಿಮ್ಮಾಪೂರ
ಮೊ. 9611761979

ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ । ಜಾಗೃತಿ ಕರಪತ್ರ ಬಿಡುಗಡೆ

# ಮಾನವ ಕಳ್ಳ ಸಾಗಾಣಿಕೆ ತಡೆಗೆ ಜಾಗೃತಿ ಅಗತ್ಯ : ಡಿಸಿ ಸಂಗಪ್ಪ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಜುಲೈ 30– ಜಿಲ್ಲೆಯಲ್ಲಿ ಮಾನವ ಕಳ್ಳ ಸಾಗಾಣಿಕೆ ತಡೆಗೆ ಶಾಲಾ ಕಾಲೇಜುಗಳ ಹಂತದಲ್ಲಿ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ದೇಶದ ಆಸ್ತಿ ಮಕ್ಕಳಾಗಿದ್ದು, ಲೈಂಗಿಕ ಶೋಷಣೆಗಾಗಿ, ಮಕ್ಕಳ ಒತ್ತಾಯ ಪೂರ್ವಕ ಬಿಕ್ಷಾಟನೆಗಾಗಿ, ಜೀತಕ್ಕಾಗಿ, ಬಾಲ ಕಾರ್ಮಿಕತೆಗಾಗಿ, ಅಂಗಾಂಗ ಕಸಿಗಾಗಿ, ಬಾಲ್ಯ ವಿವಾಹಗಳಂತಹ ಅನಿಷ್ಠ ಪದ್ದತಿಗಳಿಂದ ಕಳ್ಳಸಾಗಾಣಿಕೆ ನಡೆಯುತ್ತಿವೆ. ಇದನ್ನು ಹತ್ತಿಕ್ಕಲು ಎಲ್ಲ ಸಹಕಾರ ಅಗತ್ಯವಾಗಿದೆ ಎಂದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ ಮಾತನಾಡಿ ಮಾನವ ಕಳ್ಳ ಸಾಗಾಣಿಕೆ ಯಂತಹ ಅನಿಷ್ಟ ಪದ್ದತಿಗಳನ್ನು ತೊಡೆದು ಹಾಕುವ ಮೂಲಕ ಮಕ್ಕಳನ್ನು ಮುಖ್ಯವಾಹಿನಿಗೆ ತರುವ ಕೆಲಸವಾಗಬೇಕು. ಇಂತಹ ವಿಷಯಕ್ಕೆ ಸಂಬಂಧಿಸಿದಂತೆ ಉಚ್ಚ ನ್ಯಾಯಾಲಯದ ಸಹಾಯವಾಣಿ 15100ಗೆ ಕರೆ ಮಾಡಿ ಮಾಹಿತಿ ನೀಡಬಹುದಾಗಿದೆ ಎಂದು ತಿಳಿಸಿದರು. ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಪ್ರಸನ್ನ ದೇಸಾಯಿ ಮಾತನಾಡಿ ಮಾನವ ಕಳ್ಳಸಾಗಾಣಿಕೆ ಎಂಬುದು ಸಾಮಾನ್ಯ ಮಹಿಳೆಯರಿಗೆ ಸಮಾಜದಲ್ಲಿ ಜೀವನ ನಡೆಸಲು ಸಮಸ್ಯೆಯಾಗುತ್ತಿದೆ. ಮಹಿಳೆಯರನ್ನು ಕಳ್ಳ ಸಾಗಾಣಿಕೆಯಿಂದ ಅವರನ್ನು ಬೇರೆ ಬೇರೆ ಕೆಲಸ ಕಾರ್ಯಗಳಿಗೆ ಬಳಸಿಕೊಳ್ಳುತ್ತಿದ್ದು, ಕೆಲವು ಮಾರಕ ಕಾಯಿಲೆಗಳಿಗೆ ತುತ್ತಾಗುತ್ತಿದ್ದಾರೆ. ಅವರಿಗೆ ನೆರವು ನೀಡುವುದು, ಉತ್ತಮ ಸೌಲಭ್ಯ ಕಲ್ಪಸುವುದರ ಜೊತೆಗೆ ಶಿಕ್ಷಣದಿಂದ ವಂಚಿತರಾಗದಂತೆ ನೋಡಿಕೊಳ್ಳಬೇಕು ಎಂದರು.

ಜಿಲ್ಲೆಯಲ್ಲಿ ಕಳೆದ 2023–24 ರಲ್ಲಿ ಬಾಲ್ಯವಿವಾಹಕ್ಕೆ ಸಂಬಂಧಿಸಿದಂತೆ 22 ಪ್ರಕರಣಗಳು ಕಂಡುಬಂದರೆ, 2024–25 ರಲ್ಲಿ 15, 2025–26 ರಲ್ಲಿ 2 ಪ್ರಕರಣಗಳು ಕಂಡುಬಂದಿರುತ್ತವೆ. ಅದೇ ರೀತಿಯ ಬಾಲ ಕಾರ್ಮಿಕಕ್ಕೆ ಸಂಬಂಧಿಸಿದಂತೆ 2023–24 ರಲ್ಲಿ 3, 2024–25 ರಲ್ಲಿ 1 ಪ್ರಕರಣಗಳು ದಾಖಲಾಗಿರುತ್ತವೆ ಎಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳು ಹೇಳಿದರು.

ಈ ಸಂದರ್ಭದಲ್ಲಿ ಮಾನವ ಕಳ್ಳ ಸಾಗಾಣಿಕೆ ಕುರಿತು ಪ್ರತಿಜ್ಞಾವಿಧಿ ಬೋಧಿಸಲಾಯಿತು. ಅಲ್ಲದೇ ಪ್ರಚಾರದ ಕರಪತ್ರಗಳನ್ನು ಸಹ ಬಿಡುಗಡೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಮೇಶ ಚವ್ಹಾಣ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಮುಂಡಲೀಕ ಕಾಂಬಳೆ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಕೆ.ಪ್ರಭಾಕರ, ಹಿರಿಯ ಸಹಾಯಕ ನಿರ್ದೇಶಕಿ ಸುಮಂಗಲಾ ಹಿರೇಮನಿ, ಜಿಲ್ಲಾ ನಿರೂಪಣಾಧಿಕಾರಿ ಮಂಜುನಾಥ ಪರಸನ್ನವರ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಡಾ.ವೀಣಾ ಎಂ. ಸೇರಿದಂತೆ ಇತರರು ಉಪಸ್ಥಿತರಿದ್ದರು.

ಕೃಷಿಯಲ್ಲಿ ನ್ಯಾನೋ ಯೂರಿಯಾ, ಡಿಎಪಿ ತಂತ್ರಜ್ಞಾನ ಬಳಕೆ

# ರೈತರಲ್ಲಿ ಅರಿವು ಮೂಡಿಸುವ ಅಭಿಯಾನಕ್ಕೆ ಡಿಸಿ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಜುಲೈ 30 : ಜಿಲ್ಲೆಯಲ್ಲಿ ನ್ಯಾನೋ ಯೂರಿಯಾ ಹಾಗೂ ನ್ಯಾನೋ ಡಿಎಪಿಗಳ ಬಳಕೆ ಕುರಿತು ರೈತರಲ್ಲಿ ಅರಿವು ಮೂಡಿಸುವ ನಿಟ್ಟಿನಲ್ಲಿ ಪ್ರಚಾರ ಆಂದೋಲನಕ್ಕೆ ಜಿಲ್ಲಾಧಿಕಾರಿ ಸಂಗಪ್ಪ ಬುಧವಾರ ಚಾಲನೆ ನೀಡಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕೃಷಿ ಇಲಾಖೆ ಹಾಗೂ ಇಫ್ಕೋ ಸಂಸ್ಥೆಯ ಸಹಯೋಗದಲ್ಲಿ ಹಮ್ಮಿಕೊಂಡ ಪ್ರಚಾರ ಆಂದೋಲನ ವಾಹನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು ನ್ಯಾನೋ ತಂತ್ರಜ್ಞಾನ ಇಂದು ಹೆಚ್ಚು ಪ್ರಚಲಿತದಲ್ಲಿದ್ದು, ಕೃಷಿಯಲ್ಲಿ ಅಳವಡಿಸಲಾಗುತ್ತಿದೆ. ಇಂತಹ ನ್ಯಾನೋ ಬಳಕೆಯಿಂದ ಮಣ್ಣನ್ನು ರಕ್ಷಿಸಿಕೊಳ್ಳಬಹುದು ಹಾಗೂ ಪರಿಸರ ಸ್ನೇಹಿಯಾಗಿದೆ ಎಂದರು. ವ್ಯವಸಾಯದಲ್ಲಿ ಯೂರಿಯಾದ ಅತಿಯಾದ ಬಳಕೆಯಿಂದ ಮಣ್ಣಿನ ಆರೋಗ್ಯ, ಬೆಳೆ ಇಳುವರಿ, ಮತ್ತು ಪರಿಸರದ ಮೇಲೆ ಹಾನಿಕಾರಕ ಪರಿಣಾಮವನ್ನುಂಟು ಮಾಡುತ್ತದೆ. ನ್ಯಾನೋ ತಂತ್ರಜ್ಞಾನ ಕೃಷಿಯಲ್ಲಿ ಅಳವಡಿಸಲು ರೈತರು ಮುಂದಾಗಬೇಕಿದೆ. ಈ ಹಿನ್ನಲೆಯಲ್ಲಿ ಇಫ್ಕೋ ಸಂಸ್ಥೆಯವರು ಜಿಲ್ಲೆಯಾದ್ಯಂತ ನ್ಯಾನೋ ಯೂರಿಯಾ ಹಾಗೂ ನ್ಯಾನೋ ಡಿಎಪಿ ಗಳ ಬಳಕೆಯ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಆಂದೋಲನ ಕೈಗೊಂಡಿದ್ದು, ರೈತರು ನ್ಯಾನೋದ ತಂತ್ರಜ್ಞಾನ ಅಭಿಯಾನದ ಸದುಪಯೋಗ ಪಡೆದುಕೊಳ್ಳುವಂತೆ ಕೋರಿದರು.

ಈ ಸಂದರ್ಭದಲ್ಲಿ ಡ್ರೋನ್ ಮೂಲಕ ನ್ಯಾನೋ ಯೂರಿಯಾ ಸಿಂಪರಣೆಯ ಪ್ರಾತ್ಯಕ್ಷಿಕೆಯನ್ನು ತೋರಿಸಲಾಯಿತು. ಕಾರ್ಯಕ್ರಮದಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ ರುಥ್ರೇನ್, ಜಿಲ್ಲಾ ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಕಳ್ಳೇನ್ನವರ, ಉಪ ನಿರ್ದೇಶಕ ಎಲ್.ಐ.ರೂಡಗಿ, ತೋಟಗಾರಿಕೆ ಇಲಾಖೆಯ ಉಪನಿರ್ದೇಶಕ ರವೀಂದ್ರ ಹಕಾಟಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಜುಲೈ.30 : ಪ್ರಸಕ್ತ ಸಾಲಿನ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಅಲೆಮಾರಿ/ ಅರೆಅಲೆಮಾರಿ ವಿದ್ಯಾರ್ಥಿವೇತನ, ಶುಲ್ಕ ಮರುಪಾವತಿ ಹಾಗೂ ವಿದ್ಯಾಸಿರಿ ಯೋಜನೆಗೆ ಅರ್ಜಿ ಸಲ್ಲಿಸಲು ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1ರ ಅಲೆಮಾರಿ/ಅರೆಅಲೆಮಾರಿ ವಿದ್ಯಾರ್ಥಿಗಳಿಂದ https://ssp.postmatric.karnataka.gov.in ಮೂಲಕ ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 30 ಕೊನೆಯ ದಿನಾಂಕವಾಗಿದೆ. ಅರ್ಹ ವಿದ್ಯಾರ್ಥಿಗಳು ಈ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಜುಲೈ.30 : ಕರ್ನಾಟಕ ಬಯಲಾಟ ಅಕಾಡೆಮಿ ರಾಜ್ಯದ ವಿವಿಧ ಜಿಲ್ಲೆಗಳ ಬಯಲಾಟ ಕಲೆಗಳ ಅಧ್ಯಯನ ಹಾಗೂ ಪರಿಚಯಕ್ಕಾಗಿ ಜಿಲ್ಲಾವಾರು ಬಯಲಾಟ ಪರಿಚಯ ಪುಸ್ತಕ ಪ್ರಕಟಿಸಲು ಯೋಜನೆ ರೂಪಿಸಿದೆ. ಈ ಕುರಿತು ಆಸಕ್ತ ಯುವ ಸಂಶೋಧಕರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿದಾರರು ಕನ್ನಡ, ಜಾನಪದ, ಭಾಷಾವಿಜ್ಞಾನ, ಸಮಾಜಶಾಸ್ತ್ರ, ರಾಜ್ಯಶಾಸ್ತ್ರ ಅಥವಾ ಮಾನವ ಶಾಸ್ತ್ರ ವಿಷಯಗಳಲ್ಲಿ ಸ್ನಾತ–ಕೋತ್ತರ ಪದವಿದರರಾಗಿರಬೇಕು. ಡಾಕ್ಟರೇಟ್ ಹೊಂದಿರುವವರಿಗೆ ಆದ್ಯತೆ ನೀಡಲಾಗುವುದು. ಆಯ್ಕೆಯಾದರು ತಮ್ಮ ಆಯ್ದ ಜಿಲ್ಲೆಯ ಬಯಲಾಟಗಳ ಕುರಿತು ಕನಿಷ್ಠ 100 ರಿಂದ ಗರಿಷ್ಠ 150 ಪುಟಗಳ ಎ4 ಗಾತ್ರದ ಪುಸ್ತಕವನ್ನು ಮೂರು ತಿಂಗಳೊಳಗೆ ರಚಿಸಬೇಕು.

ಲೇಖಕರಿಗೆ ₹10,000 ಗೌರವ ಧನ ಹಾಗೂ 50 ಮುದ್ರಿತ ಪುಸ್ತಕಗಳು ನೀಡಲಾಗುವುದು. ಪುಸ್ತಕದಲ್ಲಿ ಜಿಲ್ಲೆಯ ಭೌಗೋಳಿಕ, ಸಾಂಸ್ಕೃತಿಕ ಹಿನ್ನೆಲೆ, ಬಯಲಾಟ ಪ್ರಕಾರಗಳು, ಹಸ್ತಪ್ರತಿಗಳ ಶೋಧನೆ, ಕಲಾವಿದರು, ಜಾತ್ರೆ–ಹಬ್ಬಗಳ ಕಾಲದ ಪ್ರದರ್ಶನಗಳು ಸೇರಿದಂತೆ ವಿವಿಧ ಅಂಶಗಳು ಒಳಗೊಂಡಿರಬೇಕು. ಬಹುಪಾಲ ಮಾಹಿತಿ ಕ್ಷೇತ್ರಕಾರ್ಯದ ಆಧಾರಿತವಾಗಿರಬೇಕು ಮತ್ತು ಛಾಯಾಚಿತ್ರಗಳೂ ಅವಶ್ಯಕವಾಗಿವೆ.

ಅರ್ಜಿ ಸಲ್ಲಿಸಲು ವಿಳಾಸ: ರಿಜಿಸ್ಟ್ರಾರ್, ಕರ್ನಾಟಕ ಬಯಲಾಟ ಅಕಾಡೆಮಿ, ಕಲಾಭವನ, ಸಾಂಸ್ಕೃತಿಕ ಸಂಕೀರ್ಣ, ಸೆಕ್ಟರ್–19, 6ನೇ ರಸ್ತೆ, ನವನಗರ, ಬಾಗಲಕೋಟೆ. ಹೆಚ್ಚಿನ ಮಾಹಿತಿಗೆ: 08354–235070 / 8970678147 ಸಂಪರ್ಕಿಸಬಹುದು ಎಂದು ಬಯಲಾಟ ಅಕಾಡೆಮಿ ರಿಜಿಸ್ಟ್ರಾರ್ ಕಸ್ತೂರಿ ಪಾಟೀಲ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

ಬಾಗಲಕೋಟೆ: ಜುಲೈ.30: ಮೈಸೂರು ವಿಶ್ವವಿದ್ಯಾನಿಲಯಕ್ಕೆ ಅನುಬಂಧಿತ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು (ಕಾವಾ), ಸಿದ್ದಾರ್ಥನಗರ, ಮೈಸೂರು ಸಂಸ್ಥೆಯಲ್ಲಿ 2025–26ನೇ ಶೈಕ್ಷಣಿಕ ಸಾಲಿಗೆ ಮಾಸ್ಟರ್ ಆಫ್ ವಿಜ್ಯುಯಲ್ ಆರ್ಟ್ಸ್ (ಎಂ.ವಿ.ಎ) ಸ್ನಾತಕೋತ್ತರ ಪದವಿಗೆ ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದೆ. ಈ ಪದವಿ ಎರಡು ವರ್ಷದ ನಾಲ್ಕು ಸೆಮಿಸ್ಟರ್‌ಗಳ ಸಿಬಿಎಸ್‌ಸಿ ಪದ್ದತಿಯಲ್ಲಿ ನಡೆಯಲಿದ್ದು, ಚಿತ್ರಕಲೆ ಹಾಗೂ ಶಿಲ್ಪಕಲೆ ವಿಭಾಗಗಳಲ್ಲಿ ವಿಶೇಷ ಅಧ್ಯಯನ ಅಂಶಗಳನ್ನು ಒಳಗೊಂಡಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಆಗಸ್ಟ್ 07 ಆಗಿದೆ. ಅರ್ಹತಾ ಪರೀಕ್ಷೆ ಆಗಸ್ಟ್ 11 ರಂದು ಬೆಳಿಗ್ಗೆ 11 ಗಂಟೆಗೆ, ಹಾಗೂ ವೈಯಕ್ತಿಕ ಸಂದರ್ಶನ ಮಧ್ಯಾಹ್ನ 02 ಗಂಟೆಗೆ ನಡೆಯಲಿದೆ.

ಅರ್ಜಿ ಸಲ್ಲಿಸಲು ಕರ್ನಾಟಕ ಸರ್ಕಾರದ UUCMS ಪೋರ್ಟಲ್ ಮೂಲಕ ಹಾಗೂ ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್‌ಗಳು: www.mysore.nic.in , www.cavamysore.karnataka.gov.in ಅಥವಾ ದೂರವಾಣಿ: 0821–2438931 ಅನ್ನು ಸಂಪರ್ಕಿಸಬಹುದು ಎಂದು ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು ಡೀನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಸವೇಶ್ವರ ಇಂಜನೀಯರಿಂಗ್ ಕಾಲೇಜಿಗೆ ಎನ್‌ಬಿಎ ಮಾನ್ಯತೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.30– ನಗರದ ಪ್ರತಿಷ್ಠಿತ ಬಸವೇಶ್ವರ ಇಂಜನೀಯರಿಂಗ್ ಕಾಲೇಜಿಗೆ ಭಾರತ ಸರ್ಕಾರದ ನ್ಯಾಶನಲ್ ಬೋರ್ಡ್ ಆಫ್ ಅಕ್ರಿಡಿಟೇಶನ್ ನಿಂದ ಎನ್‌ಬಿಎ ಮಾನ್ಯತೆ ದೊ–ರೆತಿದೆ. 2025ರ ಮೇ ತಿಂಗಳಲ್ಲಿ ಎನ್‌ಬಿಎ ಪರಿಣಿತರ ತಂಡ ಕಾಲೇಜಿಗೆ ಆಗಮಿಸಿ ಟೀಚಿಂಗ್–ಲರ್ನಿಂಗ್ ಪ್ರೊಸೆಸ್, ಸಂಶೋಧನಾ ಚಟುವಟಿಕೆಗಳು, ಡಿಜಿಟಲ್ ಸೌಲಭ್ಯಗಳು, ಮೂಲಭೂತ ಸೌಕರ್ಯಗಳು, ಕ್ರೀಡೆ, ಸಂಶೋಧನಾ ಪ್ರಬಂಧಗಳ ಮಂಡನೆ, ವಿಚಾರ ಸಂಕಿರಣಗಳ ಆಯೋಜನೆ, ವಿದ್ಯಾರ್ಥಿಗಳಿಗೆ ಪ್ರತಿಷ್ಠಿತ ಕಂಪನಿಗಳಲ್ಲಿ ಉದ್ಯೋಗಾವಕಾಶ ಕಲ್ಪಿಸುವುದು (ಪ್ಲೇಸ್ಮೆಂಟ್) ಹೀಗೆ ಹಲವು ಮಾನದಂಡಗಳನ್ನು ವಿಶ್ಲೇಷಿಸಿ ಮೂರು ವರ್ಷಗಳ ಅವಧಿಗೆ




(2025 – 2026 ರಿಂದ 2027 – 2028 ರ ವರೆಗೆ) ಎನ್ ಬಿಎ ಮಾನ್ಯತೆ ನೀಡಿದ್ದಾರೆ. ಈ ಮಾನ್ಯತೆಯಿಂದ ವಿದ್ಯಾರ್ಥಿಗಳಿಗೆ ದೇಶೀಯ ಹಾಗೂ ಅಂತರರಾಷ್ಟ್ರೀಯ ಪ್ರತಿಷ್ಠಿತ ಕಂಪನಿಗಳಲ್ಲಿ ಉದ್ಯೋಗಾವಕಾಶಗಳು ಲಭಿಸಲು ಮತ್ತು ಅಂತರಾಷ್ಟ್ರೀಯ ಶ್ರೇಷ್ಠ ವಿಶ್ವವಿದ್ಯಾಲಯಗಳಿಗೆ ಪ್ರವೇಶ ಪಡೆಯಲು ಸಹಕಾರಿಯಾಗಲಿದೆ ಎಂದು ಬಿವಿವಿಎಸ್ ತಾಂತ್ರಿಕ ನಿರ್ದೇಶಕರಾದ ಡಾ. ಆರ್. ಎನ್. ಹೆರಕಲ್ ತಿಳಿಸಿದ್ದಾರೆ. 2003ರಿಂದ ಬಾಗಲಕೋಟೆಯ ಬಸವೇಶ್ವರ ಇಂಜಿನಿಯರಿಂಗ್ ಕಾಲೇಜು ಸತತವಾಗಿ 5 ಬಾರಿ ಎನ್‌ಬಿಎ ಮಾನ್ಯತೆ ಪಡೆದು–ಕೊಂಡಿದ್ದು, ಈಗ ಮತ್ತೊಮ್ಮೆ 2025 ರಲ್ಲಿ ಎನ್‌ಬಿಎ ಮಾನ್ಯತೆ ಪಡೆದುಕೊಂಡಿರುವುದು ಹೆಮ್ಮೆಯ ಸಂಗತಿ ಎಂದು ಪ್ರಾಚಾರ್ಯ ಡಾ. ಬಿ.ಆರ್. ಹಿರೇಮಠ ಹೇಳಿದ್ದಾರೆ. ಕಾಲೇಜಿನ ಈ ಸಾಧನೆಗೆ ಬಿವಿವಿ ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ, ಗೌರವ ಕಾರ್ಯದರ್ಶಿ ಮಹೇಶ ಅಥಣಿ, ಬಿವಿವಿ ಎಸ್ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ನಿರ್ದೇಶಕ ಡಾ.ಆರ್. ಎನ್. ಹೆರಕಲ್, ಆಡಳಿತ ಮಂಡಳಿ ಸದಸ್ಯರು ಹರ್ಷ ವ್ಯಕ್ತಪಡಿಸಿದ್ದಾರೆ.

# ಸಾವಯವ ಗೊಬ್ಬರ ಮಾರಾಟ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಜುಲೈ.30 : ಬಾಗಲಕೋಟೆ ನಗರಸಭೆಯ ಘನತ್ಯಾಜ್ಯ ನಿರ್ವಹಣೆ ಘಟಕದಲ್ಲಿ ಪ್ರತಿದಿನ ಸಂಗ್ರಹವಾಗುವ ಹಸಿಕಸವನ್ನು ವೈಜ್ಞಾನಿಕವಾಗಿ ಸಂಸ್ಕರಿಸಿ ಸಾವಯವ ಗೊಬ್ಬರ ತಯಾರಿಸಲಾಗುತ್ತಿದೆ. ಈ ಗೊಬ್ಬರವು ಕೃಷಿಗೆ ಅನುಕೂಲವಾಗಿದ್ದು, ಹೊಲಗಳಿಗೆ ಬಳಕೆಗೆ ಯೋಗ್ಯವಾಗಿದೆ. ಸದರಿ ಸಾವಯವ ಗೊಬ್ಬರವನ್ನು ನಿಗದಿತ ದರದಲ್ಲಿ ನಗರಸಭೆ ಕಾರ್ಯಾಲಯದಿಂದ ಪೂರೈಸಲಾಗುತ್ತಿದ್ದು, ಅಗತ್ಯವಿರುವ ರೈತರು ಹಾಗೂ ಸಾರ್ವಜನಿಕರು ಬಾಗಲಕೋಟೆ ನಗರಸಭೆ ಕಾರ್ಯಾಲಯವನ್ನು ಸಂಪರ್ಕಿಸಬಹುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

